ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೧

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಬುಧವಾರ, ದಿನಾಂಕ: ೨೩ನೇ ನವೆಂಬರ್, ೨೦೧೬**

---

## ಸಮೂಹ – III

೧. ಅರಣ್ಯ ಸಚಿವರು.

೨. ಕಂದಾಯ ಸಚಿವರು.

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.

೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.

೫. ಕಾರ್ಮಿಕ ಸಚಿವರು.

೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು.

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು.

---

## ಭೂ ಕಬಳಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೦ (೩೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಜಮೀನಿನ ನಕಲು ದಾಖಲೆ ಸೃಷ್ಟಿಸಿ ಭೂಗಳ್ಳರು ಸ್ವಂತ ಆಸ್ತಿಗಳನ್ನಾಗಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೇ; (ವಿವರ ನೀಡುವುದು)

(ಆ) ಭೂ ನೀತಿ ಜಾರಿಗೆ ತಂದು ಭೂಕಬಳಿಗೆ ತಡೆಯಲು ಸರ್ಕಾರ ಹೊಸದಾಗಿ ಕಟ್ಟುನಿಟ್ಟಿನ ಆದೇಶ ಪಾಲನೆಗೆ ಚಿಂತಿಸಿದೆಯೇ; (ವಿವರ ನೀಡುವುದು)

(ಇ) ಬೆಂಗಳೂರು ಸುತ್ತಮುತ್ತ ನಾನಾ ಅಭಿವೃದ್ಧಿ ಯೋಜನೆಗಳ ಹೆಸರಿನಲ್ಲಿ ಸಾವಿರಾರು ಎಕರೆ ಭೂ ಕಬಳಿಕೆಯಾಗಿರುವುದು ನಿಜವೇ; (ವಿವರ ನೀಡುವುದು)

(ಈ) ಭೂ ಕಬಳಿಕೆಯ ಭ್ರಷ್ಟಾಚಾರ ತಾಂಡವಾಡುತ್ತಿದ್ದು, ಕಡಿವಾಣ ಹಾಕಲು ಸರ್ಕಾರ ತ್ವರಿತ ನ್ಯಾಯಾಲಯ ಸ್ಥಾಪಿಸುವುದೇ; (ವಿವರ ನೀಡುವುದು)

(ಉ) ಸೂರಿಗಾಗಿ ಕೆರೆ ಜಾಗದಲ್ಲಿ ಕಟ್ಟಿಕೊಂಡಿದ್ದ ಮನೆ ತೆರವು ಮಾಡಿ, ಅಸಲಿ ದಾಖಲೆ ತಿರುಚಿ ನೂರಾರು ಎಕರೆ ಜಾಗ ಒತ್ತುವರಿ ಮಾಡಿರುವ ಪಟ್ಟಭದ್ರ ಹಿತಾಸಕ್ತಿಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆಯೇ? (ವಿವರ ನೀಡುವುದು)

## ಕಾಡಿನೊಳಗೆ ರೆಸಾರ್ಟ್ಸ್

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೧ (೩೬೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯ ಕಾವೇರಿ ವನ್ಯಜೀವಿಧಾಮದ ಸೂಕ್ಷ್ಮ ಪರಿಸರ ವಲಯದ ವ್ಯಾಪ್ತಿಯಲ್ಲಿ ಅಕ್ರಮ ರೆಸಾರ್ಟ್ಸ್ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪರಿಸರ ಸಂರಕ್ಷಣೆ ಕಾಯ್ದೆ ಪ್ರಕಾರ ಸೂಕ್ಷ್ಮ ಪರಿಸರ ವಲಯದ ವ್ಯಾಪ್ತಿಯಲ್ಲಿ ಹೊಸದಾಗಿ ಯಾವುದೇ ವಾಣಿಜ್ಯ ಉದ್ದೇಶದ ಕಾಮಗಾರಿ ಅಥವಾ ಕೇಂದ್ರವನ್ನು ಸ್ಥಾಪಿಸಲು ಪರಿಸರ ಇಲಾಖೆಯ ಅನುಮತಿ ಪಡೆಯಬೇಕಾಗಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ಅನುಮತಿ ಪಡೆಯದೇ ಅಕ್ರಮ ರೆಸಾರ್ಟ್ಸ್ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸುವುದು ನಿಯಮಬಾಹಿರವಲ್ಲವೇ;

(ಈ) ಈ ರೆಸಾರ್ಟ್ಸ್ ನಿರ್ಮಾಣ ಕಾಮಗಾರಿ ಬಗ್ಗೆ ಸರ್ಕಾರದ ನಿಲುವೇನು? (ವಿವರ ನೀಡುವುದು)

## ಪೋಡಿ ಅರ್ಜಿಗಳ ಬಾಕಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೨ (೩೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು ಸರ್ವೆ ಶಾಖೆಯಲ್ಲಿ ಬಾಕಿ ಇರುವ ಒಟ್ಟು ಪೋಡಿ ಅರ್ಜಿಗಳೆಷ್ಟು; ಈ ಪೈಕಿ ಕಳೆದ ಮೂರು ವರ್ಷದಿಂದ ಬಾಕಿ ಇರುವ ಅರ್ಜಿಗಳೆಷ್ಟು; (ಗ್ರಾಮವಾರು ವಿವರ ನೀಡುವುದು)

(ಆ) ಎ.ಡಿ.ಎಲ್.ಆರ್. ಆದೇಶ ಮಾಡಿದ ನಂತರವೂ, ಸ್ಕೆಚ್ ಆಗದೆ, ಪಹಣಿಯಲ್ಲಿ ನಮೂದಾಗದೆ, ಇತ್ಯರ್ಥವಾಗದೆ ಬಾಕಿ ಇರುವ ಅರ್ಜಿಗಳೆಷ್ಟು; (ಅರ್ಜಿವಾರು ಸಂಪೂರ್ಣ ವಿವರ ನೀಡುವುದು)

(ಇ) ಪೋಡಿಗಾಗಿ ಸಲ್ಲಿಕೆಯಾಗುವ ಅರ್ಜಿಗಳ ಇತ್ಯರ್ಥಕ್ಕೆ ಕಾಲಮಿತಿ ಇದೆಯೇ; ಹಾಗಿದ್ದಲ್ಲಿ, ಅರ್ಜಿಗಳು ಇತ್ಯರ್ಥವಾಗದೆ ಬಾಕಿ ಉಳಿಯಲು ಕಾರಣವೇನು;

(ಈ) ಪೋಡಿ ಅರ್ಜಿಗಳನ್ನು ಸಕಾಲಕ್ಕೆ ವಿಲೇವಾರಿ ಮಾಡದ ಹಿನ್ನೆಲೆಯಲ್ಲಿ ಸಿ.ಸಿ.ಎ. ನಿಯಮಾವಳಿ ಅನ್ವಯ ಎಷ್ಟು ಸಿಬ್ಬಂದಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಉ) ಬೆಂಗಳೂರು ಉತ್ತರ ತಾಲ್ಲೂಕು ಸರ್ವೆ ಶಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಈ ಸಿಬ್ಬಂದಿಗಳು ಕಳೆದ ಎಷ್ಟು ವರ್ಷಗಳಿಂದ ಹಾಲಿ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ? (ಸಿಬ್ಬಂದಿಗಳ ಪೂರ್ಣ ವಿವರ ನೀಡುವುದು)

## ನೀರಾವರಿ ಸೌಲಭ್ಯದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩ (೩೬೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ರೈತರಿಗೆ ನೀರಾವರಿ ಸೌಲಭ್ಯ ಒದಗಿಸಲು ಕಳೆದ ಮೂರು ವರ್ಷಗಳಲ್ಲಿ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಆ) ಈ ಕ್ರಮದಿಂದಾಗಿ ಎಷ್ಟು ಸಾವಿರ ಎಕರೆ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇದರಿಂದಾಗಿ ಮಂಡ್ಯ ಜಿಲ್ಲೆಯ ಎಷ್ಟು ರೈತರುಗಳಿಗೆ ಅನುಕೂಲವಾಗಿದೆ; ಇನ್ನು ಎಷ್ಟು ರೈತರುಗಳಿಗೆ ಈ ಸೌಲಭ್ಯ ಕಲ್ಪಿಸಬೇಕಾಗಿದೆ;

(ಈ) ಈ ಯೋಜನೆಯಿಂದಾಗಿ ಸರ್ಕಾರದಿಂದ ಖರ್ಚಾದ ಮೊತ್ತವೆಷ್ಟು? (ವಿವರ ನೀಡುವುದು)

## ಐ.ಟಿ.ಐ. ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೮೪ (೩೮೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಐ.ಟಿ.ಐ. ಕಾಲೇಜುಗಳ ಹೆಸರು, ವಿಳಾಸ, ಅವುಗಳಲ್ಲಿ ಬೋಧಿಸುತ್ತಿರುವ ವಿಷಯಗಳು, ವಿಷಯವಾರು ಒದಗಿಸಿರುವ ಮೂಲಭೂತ ಸೌಕರ್ಯಗಳು, ಖಾಯಂ ಹಾಗೂ ತಾತ್ಕಾಲಿಕ ಹುದ್ದೆಗಳ ವಿವರ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ನೀಡುವುದು;

(ಆ) ಮೂಲಭೂತ ಸೌಕರ್ಯ ಕೊಡುವಲ್ಲಿ ಸರ್ಕಾರದ ಕ್ರಮ ಏನು;

(ಇ) ೨೦೧೪ರಲ್ಲಿ ಆರಂಭಿಸಿರುವ ಹೊಸ ಐ.ಟಿ.ಐ. ಕಾಲೇಜುಗಳಿಗೆ ಪ್ರಾಯೋಗಿಕ ಪಾಠದ ಸಲುವಾಗಿ ಸಲಕರಣೆಗಳನ್ನು ಹಾಗೂ ಯಂತ್ರೋಪಕರಣಗಳನ್ನು ಎಲ್ಲಾ ಕಾಲೇಜುಗಳಿಗೆ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ಒದಗಿಸಲಾಗುವುದು?

## ಕಂದಾಯ ಕಾಯ್ದೆ, ೧೯೬೪ರ ಅಡಿಯಲ್ಲಿ ದಾಖಲಾಗಿರುವ ಅರ್ಜಿಗಳ ವಿಲೇವಾರಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೮೫ (೩೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಿಲ್ಲಾಧಿಕಾರಿಗಳ/ಉಪವಿಭಾಗಾಧಿಕಾರಿಗಳ/ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ, ೧೯೬೪ ಮತ್ತು ಇತರೆ ಕಾಯ್ದೆಗಳ ಅಡಿಯಲ್ಲಿ ದಾಖಲಾಗಿರುವ ಅರ್ಜಿಗಳು (ಪಿಟಿಷನ್ಸ್) ಮೇಲ್ಮನವಿ ರಿವಿಷನರ್ಸ್ ಪ್ರಕರಣಗಳನ್ನು ಕಾಲಮಿತಿಯಲ್ಲಿ ಇತ್ಯರ್ಥಪಡಿಸಲು ಆದೇಶ ಹೊರಡಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು;

(ಆ) ಈ ರೀತಿಯ ಪ್ರಕರಣಗಳು ಎಷ್ಟಿವೆ? (೨೦೧೩ ರಿಂದ ೨೦೧೬ರ ವರೆಗಿನ ವರ್ಷಾವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ಬರ ಪರಿಸ್ಥಿತಿಯಿಂದಾಗಿ ರೈತರಿಗೆ ನೀಡಲಾಗುವ ಪರಿಹಾರದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೮೬ (೩೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೀಕರ ಬರ ಉಂಟಾಗಿರುವ ಜಿಲ್ಲೆ ಹಾಗೂ ತಾಲ್ಲೂಕುಗಳು ಯಾವುವು; ಎಷ್ಟು ಹೆಕ್ಟೇರ್ ಪ್ರದೇಶಗಳಲ್ಲಿ ಬರ ಉಂಟಾಗಿದೆ;

(ಆ) ಇದರಲ್ಲಿ ಬಾಗಲಕೋಟೆ, ಬೆಳಗಾವಿ ಹಾಗೂ ವಿಜಯಪುರ ಜಿಲ್ಲೆಗಳು ಸೇರಿವೆಯೇ; ಸೇರಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗಿದೆ;

(ಇ) ಕೇಂದ್ರ ಸರ್ಕಾರದ ತಂಡವು ಬರ ಅಧ್ಯಯನ ನಡೆಸಿದ ಜಿಲ್ಲೆ ಹಾಗೂ ತಾಲ್ಲೂಕುಗಳು ಯಾವುವು;

(ಈ) ಎಷ್ಟು ಪ್ರಮಾಣದ ಆರ್ಥಿಕ ನಷ್ಟ ಉಂಟಾಗಿರುತ್ತದೆ; ರೈತರಿಗೆ ಬರ ಪರಿಹಾರ ನೀಡುವ ಕುರಿತು ಸರ್ಕಾರದ ಚಿಂತನೆ ಏನು; ಯಾವ ಪ್ರಮಾಣದಲ್ಲಿ ನೀಡಲಾಗುವುದು;

(ಉ) ಬರ ಪರಿಸ್ಥಿತಿಯನ್ನು ಎದುರಿಸಲು ಕೇಂದ್ರ ಸರ್ಕಾರಕ್ಕೆ ಎಷ್ಟು ಹಣ ಬೇಡಿಕೆ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದೆ; ಈಗಾಗಲೇ ಕೇಂದ್ರ ಸರ್ಕಾರದಿಂದ ಬಂದಿರುವ ಮೊತ್ತ ಎಷ್ಟು; ರಾಜ್ಯ ಸರ್ಕಾರದ ಬಳಿ ಬರ ಪರಿಸ್ಥಿತಿ ನಿರ್ವಹಣೆಗೆ ಇರುವ ಮೊತ್ತ ಎಷ್ಟು?

## ಅನುದಾನ ರಹಿತ ಐ.ಟಿ.ಐ. ಸಿಬ್ಬಂದಿಗಳ ವೇತನ ಹಾಗೂ ಸೇವಾ ಭದ್ರತೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೮೭ (೩೭೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನ ರಹಿತ ಐ.ಟಿ.ಐ. ಕಾಲೇಜುಗಳ ಸಿಬ್ಬಂದಿಗಳ ವೇತನ ಹಾಗೂ ಸೇವಾ ಭದ್ರತೆ ಕುರಿತು ಇರುವ ನಿಯಮಾವಳಿಗಳು ಎಷ್ಟು; ಇವರಿಗೆ ಕನಿಷ್ಠ ವೇತನ ಪಾವತಿ ಆಗುತ್ತಿರುವ ಬಗ್ಗೆ ದೃಢಪಡಿಸಿಕೊಳ್ಳಲು ಹಾಗೂ ಇವರಿಗೆ ಸೇವಾ ಸವಲತ್ತುಗಳನ್ನು ಹಾಗೂ ಕಾನೂನುಗಳನ್ನು ಪಾಲಿಸುತ್ತಿರುವ ಕುರಿತು ಇಲಾಖೆ ಏನು ಕ್ರಮ ಕೈಗೊಂಡಿದೆ;

(ಆ) ಈ ಶಿಕ್ಷಕರಿಗೆ ನಿಗಧಿಪಡಿಸಿ ವಿದ್ಯಾರ್ಹತೆ, ಬೋಧನಾ ಗುಣಮಟ್ಟ ಇತ್ಯಾದಿಗಳನ್ನು ಯಾವ ಹಂತದ ಅಧಿಕಾರಿಗಳು ನೋಡಿಕೊಳ್ಳುತ್ತಿದ್ದಾರೆ;

(ಇ) ರಾಜ್ಯದಲ್ಲಿ ಇರುವ ಒಟ್ಟು ಸರ್ಕಾರಿ ಅನುದಾನಿತ, ಅನುದಾನ ರಹಿತ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳನ್ನು ನಿರ್ವಹಿಸಲು ಇರುವ ಇಲಾಖಾ ಸಂರಚನೆಯ ಚಿತ್ರಣ ನೀಡುವುದು?

## ಥಾಮಸ್ ವರದಿಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೮೮ (೩೯೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನುದಾನಿತ ಐ.ಟಿ.ಐ. ಕಾಲೇಜುಗಳ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಥಾಮಸ್ ವರದಿಯ ಶಿಫಾರಸ್ಸಿನನ್ವಯ ರಾಜ್ಯದ ಅನುದಾನಿತ ಐ.ಟಿ.ಐ. ಸಿಬ್ಬಂದಿಗಳಿಗೆ ರಾಜ್ಯದ ಇತರೆ ಅನುದಾನಿತ ಸಂಸ್ಥೆಗಳ ಸಿಬ್ಬಂದಿಗಳಿಗೆ ನೀಡುತ್ತಿರುವಂತೆ ಯಾವ ಯಾವ ಸೌಲಭ್ಯಗಳನ್ನು ಕೊಡಲಾಗುತ್ತಿದೆ; (ಜಾರಿಗೊಳಿಸಿರುವ ದಿನಾಂಕ ಸಹಿತ, ಪಿಂಚಣಿ, ಗ್ರ್ಯಾಚುಟಿ, ಇನ್ನಿತರೆ ಸೌಲಭ್ಯಗಳ ವಿವರ ನೀಡುವುದು)

(ಇ) ಥಾಮಸ್ ವರದಿಯ ಶಿಫಾರಸ್ಸಿನ ಅನ್ವಯ ಎಲ್ಲಾ ಸೌಲಭ್ಯಗಳನ್ನು ಎಲ್ಲಾ ನೌಕರರಿಗೂ ನೀಡಲಾಗಿದೆಯೇ; ನೀಡಲಾಗದಿದ್ದಲ್ಲಿ, ಯಾವಾಗ ನೀಡಲಾಗುವುದು; ನೀಡಲು ಇರುವ ಅಡೆತಡೆಗಳೇನು;

(ಈ) ಈ ಅಡೆತಡೆಗಳನ್ನು ನಿವಾರಿಸಿ ಈ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಉ) ಯಾವ ಕಾಲಮಿತಿಯೊಳಗೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು; (ಸಂಪೂರ್ಣ ವಿವರ ನೀಡುವುದು)

(ಊ) ಈ ವರದಿಯ ಪ್ರಕಾರ ೧೯೯೭ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗಿದೆಯೇ; ಪರಿಷ್ಕರಿಸಲು ಇರುವ ಅಡೆತಡೆಗಳೇನು; ಇರುವ ಅಡೆತಡೆಗಳನ್ನು ಸರಿಪಡಿಸಿ ಅನುದಾನ ಸಂಹಿತೆಯನ್ನು ಪರಿಷ್ಕರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಪರಿಷ್ಕೃತ ಅನುದಾನ ಪ್ರತಿ ನೀಡುವುದು)

## ಸರ್ಕಾರ ಘೋಷಣೆ ಮಾಡಿರುವ ಬರ ಪೀಡಿತ ಜಿಲ್ಲೆಗಳು ಹಾಗೂ ತಾಲ್ಲೂಕಿನಲ್ಲಿ ರೈತರಿಗೆ ಘೋಷಿಸಿರುವ ಪರಿಹಾರದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೮೯ (೩೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಘೋಷಣೆ ಮಾಡಿರುವ ಬರ ಪೀಡಿತ ಜಿಲ್ಲೆಗಳು ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬರ ಪೀಡಿತ ಜಿಲ್ಲೆಗಳ ರೈತರಿಗೆ ಪರಿಹಾರ ನೀಡಲಾಗಿದೆಯೇ; ಹಾಗಾದರೆ, ಸರ್ಕಾರವು ರೈತರ ಪ್ರತಿ ಎಕರೆ ಜಮೀನಿಗೆ ಎಷ್ಟು ಪರಿಹಾರ ಘೋಷಣೆ ಮಾಡಿದೆ; ಇಲ್ಲಿಯವರೆಗೆ ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರವು ಬರ ಪೀಡಿತ ಜಿಲ್ಲೆಗಳ ರೈತರ ಜಾನುವಾರುಗಳಿಗೆ ಮೇವು ಬ್ಯಾಂಕ್ ಪ್ರಾರಂಭ ಮಾಡಲಾಗಿದೆಯೇ; ಹಾಗಾದರೆ, ಜಿಲ್ಲಾವಾರು ಜಾನುವಾರಗಳ ಹಾಗೂ ಸಂಗ್ರಹಿಸಿದ ಒಟ್ಟು ಮೇವಿನ ಪ್ರಮಾಣವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕದ ಭಾಗದ "ಉದ್ಯೋಗ ವಿನಿಮಯ ಕೇಂದ್ರ" ದಿಂದ ನೋಂದಾಯಿಸಿಕೊಂಡ ನಿರುದ್ಯೋಗಿ ಪದವೀಧರರ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೯೦ (೩೯೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳ ಹಾಗೂ ಹರಪ್ಪನಹಳ್ಳಿ ಸೇರಿದಂತೆ ಇದೂವರೆಗೂ "ಉದ್ಯೋಗ ವಿನಿಮಯ ಕೇಂದ್ರ" ದಿಂದ ನೋಂದಾಯಿಸಿಕೊಂಡ ನಿರುದ್ಯೋಗಿ ಯುವಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸದರಿ ಭಾಗದಲ್ಲಿರುವ ನಿರುದ್ಯೋಗಿ ಪದವೀಧರರ ಸಂಖ್ಯೆ ಎಷ್ಟು; ಇದುವರೆವಿಗೂ ಎಷ್ಟು ನಿರುದ್ಯೋಗಿ ಪದವೀಧರರಿಗೆ ಸರ್ಕಾರದಿಂದ ಹಾಗೂ ಖಾಸಗಿ ಸಂಸ್ಥೆಗಳಿಂದ ಉದ್ಯೋಗ ಕಲ್ಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ನಿರುದ್ಯೋಗಿ ಪದವೀಧರರಿಗೆ ಸರ್ಕಾರದಿಂದ ನಿರುದ್ಯೋಗಿ ಭತ್ಯೆ ನೀಡಲು ಮುಂದಾಗುವುದೇ; ಇದ್ದಲ್ಲಿ, ಸರ್ಕಾರದ ಮುಂದಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿಯಲ್ಲಿ ಸ್ಥಾಪನೆಯಾಗಿರುವ E.S.I. ಸಂಸ್ಥೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೯೧ (೩೯೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ಇ.ಎಸ್.ಐ. ಸಂಸ್ಥೆಯು ಸ್ಥಾಪನೆಗೊಂಡಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ; ಇದ್ದಲ್ಲಿ, ಈ ಸಂಸ್ಥೆಯಿಂದ ನಡೆಯುತ್ತಿರುವ ಚಟುವಟಿಕೆಗಳು ಹಾಗೂ ಕಾರ್ಯಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರದ ಕಾರ್ಮಿಕ ಇಲಾಖೆಯಿಂದ ಸದರಿ ಸಂಸ್ಥೆಯನ್ನು ಮುಂದುವರಿಸಲಾಗುವುದೇ ಅಥವಾ ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸಲಾಗುವಂತಹ ಪ್ರಸ್ತಾವನೆಯ ಪ್ರಕ್ರಿಯೆ ಏನಾದರೂ ಇದೆಯೇ;

(ಇ) ಈ ಸದರಿ ಸಂಸ್ಥೆಯಲ್ಲಿ ಒಟ್ಟು ಮಂಜೂರಾದ ಹುದ್ದೆಗಳೆಷ್ಟು; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳೆಷ್ಟು? (ಮಾಹಿತಿ ನೀಡುವುದು)

## ಹರಪ್ಪನಹಳ್ಳಿ ತಾಲ್ಲೂಕನ್ನು ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ಸೇರ್ಪಡೆ ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೯೨ (೩೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹರಪ್ಪನಹಳ್ಳಿ ತಾಲ್ಲೂಕು ಈ ಹಿಂದೆ ಬಳ್ಳಾರಿ ಜಿಲ್ಲೆಯ ವ್ಯಾಪ್ತಿಯಲ್ಲಿದ್ದು, ಇತ್ತೀಚೆಗೆ ಜನಾಭಿಪ್ರಾಯದ ವಿರುದ್ಧ ದಾವಣಗೆರೆ ಜಿಲ್ಲೆಗೆ ಸೇರ್ಪಡೆಗೊಂಡು ಅಭಿವೃದ್ಧಿಯಲ್ಲಿ ಹಿನ್ನಡೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ನಿಟ್ಟಿನಲ್ಲಿ ಹರಪ್ಪನಹಳ್ಳಿಯಲ್ಲಿ ಹಲವಾರು ಹೋರಾಟಗಳು, ಮುಷ್ಕರಗಳು ನಡೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈಗಲಾದರೂ ಸರ್ಕಾರವು ಮುತುವರ್ಜಿವಹಿಸಿ ಹರಪ್ಪನಹಳ್ಳಿ ತಾಲ್ಲೂಕನ್ನು ಹಿಂದಿನ ಐತಿಹಾಸಿಕ ಹಿನ್ನಲೆಯಲ್ಲಿ ಪರಿಗಣಿಸಿ ಹೈದರಾಬಾದ್-ಕರ್ನಾಟಕ ಪ್ರದೇಶದ ೩೭೧(ಜೆ) ಅಡಿಯಲ್ಲಿ ತರಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ಸರ್ಕಾರದ ಮುಂದಿರುವ ಕ್ರಮಗಳೇನು?

## ಗದಗ ಜಿಲ್ಲೆಯ ಕಪ್ಪತ್ತಗುಡ್ಡವನ್ನು ಸಂರಕ್ಷಿತ ಪ್ರದೇಶವೆಂದು ಘೋಷಿಸಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೯೩ (೧೨೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗದಗ ಜಿಲ್ಲೆಯ ಪಶ್ಚಿಮ ಘಟ್ಟದ ಒಂದು ಭಾಗವಾದ ಕಪ್ಪತ್ತಗುಡ್ಡವನ್ನು ವನ್ಯಜೀವಿಧಾಮವನ್ನಾಗಿ ಮಾಡಲು ಸರ್ಕಾರ ತೀರ್ಮಾನಿಸಿದೆಯೇ; ತೀರ್ಮಾನಿಸಿದ್ದಲ್ಲಿ, ಅದು ಯಾವ ಹಂತದಲ್ಲಿದೆ;

(ಆ) ೨೦೧೫ ರಲ್ಲಿ ಸರ್ಕಾರ ಕಪ್ಪತ್ತಗುಡ್ಡವನ್ನು ಸಂರಕ್ಷಿತ ಪ್ರದೇಶವೆಂದು ಘೋಷಿಸಿರುವುದು ನಿಜವೇ; ನಿಜವಿದ್ದಲ್ಲಿ, ಅಲ್ಲಿಂದ ಇಲ್ಲಿಯವರೆಗೆ ಆದಂತಹ ಪ್ರಗತಿಯೇನು;

(ಇ) ಸದ್ಯದ ಪರಿಸ್ಥಿತಿಯಲ್ಲಿ ಸದರಿ ಅರಣ್ಯದಲ್ಲಿ ಹೊಸ ಹೊಸ ಅತಿಕ್ರಮಣಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

## ರಾಜ್ಯದಲ್ಲಿ ಬರ ಪರಿಹಾರ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೯೪ (೧೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ತಾಲ್ಲೂಕುಗಳನ್ನು ಬರಗಾಲ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ;

(ಆ) ರಾಜ್ಯದಲ್ಲಿ ತೀವ್ರವಾಗಿ ಬರಗಾಲ ಪರಿಸ್ಥಿತಿ ಇದ್ದು, ಬರ ಪರಿಹಾರ ಕಾಮಗಾರಿಗಳಿಗೆ ಕೇಂದ್ರ ಸರ್ಕಾರ ಇಲ್ಲಿಯವರೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು;

(ಇ) ಈ ಅನುದಾನದಲ್ಲಿ ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನವೆಷ್ಟು;

(ಈ) ರಾಜ್ಯ ಸರ್ಕಾರ ತನ್ನ ಸಂಪನ್ಮೂಲದಿಂದ ವಿವಿಧ ಬರ ಪರಿಹಾರ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು;

(ಉ) ಈ ಅನುದಾನದಲ್ಲಿ ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನವೆಷ್ಟು?

## ಹುಬ್ಬಳ್ಳಿ ತಾಲ್ಲೂಕಿನ ಗ್ರೂಪ್ “ಡಿ” ನೌಕರರಿಗೆ ನಿವೇಶನ ಹಂಚಿಕೆಯಲ್ಲಿ ವಿಳಂಬವಾದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೯೫ (೨೮೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ ನಗರದ ಕರ್ನಾಟಕ ಗ್ರೂಪ್ “ಡಿ” ನೌಕರರ ಸಂಘದ ಸದಸ್ಯರುಗಳಿಗೆ ನಿವೇಶನ ಹಂಚಿಕೆಯಲ್ಲಿ ವಿಳಂಬವಾಗಿರುವುದು ನಿಜವೇ;

(ಆ) ಮೊದಲು ಈ ಗ್ರೂಪ್ “ಡಿ” ನೌಕರರಿಗೆ ಯಾವ ಗ್ರಾಮದಲ್ಲಿ ನಿವೇಶನಗಳನ್ನು ಮಂಜೂರು ಮಾಡಲಾಗಿತ್ತು;

(ಇ) ಈ ಮಂಜೂರಾತಿಯನ್ನು ತಡೆಹಿಡಿಯಲು ಕಾರಣಗಳೇನು;

(ಈ) ಈಗ ಗ್ರೂಪ್ “ಡಿ” ನೌಕರರಿಗೆ ಯಾವ ಗ್ರಾಮದಲ್ಲಿ ನಿವೇಶನಗಳನ್ನು ಮಂಜೂರು ಮಾಡಲು ಸರ್ಕಾರ ಉದ್ದೇಶಿಸಿದೆ;

(ಉ) ಗ್ರೂಪ್ “ಡಿ” ನೌಕರರಿಗೆ ಯಾವ ಕಾಲಮಿತಿಯೊಳಗೆ ನಿವೇಶನಗಳನ್ನು ಮಂಜೂರು ಮಾಡಲಿದೆ?

## ಹೈಕೋರ್ಟ್ ಸಿಬ್ಬಂದಿ ವೇತನ ಪರಿಷ್ಕರಣೆ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೯೬ (೩೭೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೈಕೋರ್ಟ್‌ಗಳಲ್ಲಿನ ಸಿಬ್ಬಂದಿಗೆ ಕೇಂದ್ರಿಯ ಆಡಳಿತ ನ್ಯಾಯ ಮಂಡಳಿಯ ಸರಿಸಮಾನ ವೇತನ ಹಾಗೂ ಪಿಂಚಣಿ ನೀಡಬೇಕೆಂದು ಭಾರತದ ಸರ್ವೋಚ್ಛ ನ್ಯಾಯಾಲಯವು ತೀರ್ಪು ಕೊಟ್ಟಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಈ ತೀರ್ಪನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಹೈಕೋರ್ಟ್ ಸಿಬ್ಬಂದಿಗೆ ಕೇಂದ್ರಿಯ ಆಡಳಿತ ನ್ಯಾಯ ಮಂಡಳಿಯ ವೇತನ ಶ್ರೇಣಿಯನ್ನು ಕೊಟ್ಟಲ್ಲಿ ಸರ್ಕಾರಕ್ಕೆ ಆಗುವ ಆರ್ಥಿಕ ಹೊರೆ ಎಷ್ಟು;

(ಈ) ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು ಜಾರಿಗೊಳಿಸಲು ಸರ್ಕಾರ ಹಾಕಿಕೊಂಡ ಕಾಲಮಿತಿ ಏನು;

(ಉ) ಈಗ ಈ ಪ್ರಕ್ರಿಯೆ ಯಾವ ಹಂತದಲ್ಲಿದೆ?

## ಎನ್.ಆರ್.ಬಿ.ಸಿ. ಕಾಲುವೆ ೧೫, ೧೬, ೧೭ ಮತ್ತು ೧೮ ನೀರು ಬಾರದ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭ (೧೯೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣ ಭಾಗ್ಯ ಜಲ ನಿಗಮದ ಅಡಿಯಲ್ಲಿ ಬರುವ ನಾರಾಯಣಪುರ ಬಲದಂಡೆಯ ಕಾಲುವೆ ನಂ. ೧೫, ೧೬, ೧೭ ಮತ್ತು ೧೮ ಡಿಸ್ಟ್ರಿಬ್ಯೂಟರಿಗಳಲ್ಲಿ ನೀರು ಬಾರದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದಲ್ಲಿ ಕುಸಿಯುತ್ತಿರುವ ಕೃಷಿ ಭೂಮಿ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೮ (೧೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿ ವರ್ಷ ೬೦ ಸಾವಿರ ಹೆಕ್ಟೇರ್‌ಗಳಷ್ಟು ಭೂಮಿ ಕೃಷಿಯೇತರ ಉದ್ದೇಶಗಳಿಗೆ ಪರಿವರ್ತನೆ ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕೃಷಿ ಭೂಮಿ ಪರಿವರ್ತನೆ ತಡೆಗೆ ಏನು ಕ್ರಮಗಳನ್ನು ಕೈಗೊಳ್ಳಲಾಗುವುದು?

## ಆರ್.ಟಿ.ಸಿ. ಒದಗಿಸಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೯ (೩೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತಿಗಳಲ್ಲಿ ಉತಾರೆಗಳು (ಆರ್.ಟಿ.ಸಿ) ಸಿಗದೆ ಸಾರ್ವಜನಿಕರು, ರೈತರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ತ್ವರಿತಗತಿಯಲ್ಲಿ ಸಾರ್ವಜನಿಕರಿಗೆ ಉತಾರೆಗಳು ಸಿಗುವಂತೆ ಮಾಡಲು ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ; ಈ ಸಮಸ್ಯೆ ಬಗೆಹರಿಸುವಲ್ಲಿ ಸರ್ಕಾರವು ವಿಳಂಬ ಧೋರಣೆ ಅನುಸರಿಸುತ್ತಿರಲು ಕಾರಣವೇನು;

(ಇ) ಈ ಸಮಸ್ಯೆಯನ್ನು ಬಗೆಹರಿಸಲು ನಿಗಧಿಪಡಿಸಲಾಗಿರುವ ಕಾಲಮಿತಿ ಏನು? (ಸಂಪೂರ್ಣ ಮಾಹಿತಿ ನೀಡುವುದು)

## ಅರಣ್ಯಕ್ಕಾಗಿ ಮೀಸಲಿಟ್ಟ ಭೂಮಿ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೦ (೩೫೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅರಣ್ಯಕ್ಕಾಗಿ ಮೀಸಲಿಟ್ಟ ಭೂಮಿ ಎಷ್ಟು; ಈ ಭೂಮಿಯಲ್ಲಿ ಜನರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು;

(ಆ) ಈ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ವಾಸಿಸುತ್ತಿರುವ ಜನರಿಗೆ ಭೂಮಿಯನ್ನು ಸಕ್ರಮಗೊಳಿಸಿ ಇವರಿಗೆ ಹಕ್ಕುಪತ್ರ ನೀಡುವ ವಿಚಾರ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಇವರಿಗೆ ಹಕ್ಕುಪತ್ರವನ್ನು ಯಾವ ಕಾಲಮಿತಿಯ ಒಳಗೆ ವಿತರಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ದೇವಾಲಯಗಳ ಅಭಿವೃದ್ಧಿ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೧ (೩೬೦) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಅಧೀನಕ್ಕೆ ಒಳಪಟ್ಟಿರುವ ದೇವಾಲಯಗಳ ಸಂಖ್ಯೆ ಎಷ್ಟು; ಮತ್ತು ಇವುಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯದ ಮೊತ್ತ ಎಷ್ಟು; (ದೇವಾಲಯವಾರು ಆದಾಯದ ಮೊತ್ತ ಸಮೇತ ವಿವರ ನೀಡುವುದು)

(ಆ) ಸದರಿ ದೇವಾಸ್ಥಾನಗಳಿಂದ ಸರ್ಕಾರಕ್ಕೆ ಬರುವ ಆದಾಯವನ್ನು ಯಾವ ಯಾವ ರೀತಿಯ ಯೋಜನೆಗಳಿಗೆ ಉಪಯೋಗ ಮಾಡಲಾಗುತ್ತಿದೆ; ಸದರಿ ದೇವಸ್ಥಾನದ ಆದಾಯವನ್ನು ಬೇರೆ ಧರ್ಮಗಳ ದೇವಾಲಯಗಳ ಅಭಿವೃದ್ಧಿಗೆ ವೆಚ್ಚ ಮಾಡಲಾಗುತ್ತಿದೆ ಎಂಬ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಆರೋಪ ನಿಜವೇ; ಹಾಗಿದ್ದಲ್ಲಿ, ಇದಕ್ಕೆ ಸರ್ಕಾರ ತೆಗೆದುಕೊಂಡಿರುವ ನಿರ್ಣಯಗಳು ಯಾವುವು;

(ಇ) ಹಿಂದು ದೇವಾಲಯಗಳ ಆದಾಯದ ಹಣವನ್ನು ಹಿಂದೂ ದೇವಾಲಯಗಳಿಗೆ ಖರ್ಚು ಮಾಡಲು ಸರ್ಕಾರ ಚಿಂತನೆ ಮಾಡುತ್ತಿದೆಯೇ; ಹಾಗಿದ್ದಲ್ಲಿ, ಸದರಿ ಹಣವನ್ನು ಖರ್ಚು ಮಾಡಲು ಯಾವ ರೀತಿಯ ಯೋಜನೆಗಳನ್ನು ರೂಪಿಸಲಾಗುತ್ತಿದೆ? (ಮಾಹಿತಿ ನೀಡುವುದು)

## ಸಣ್ಣ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೨ (೩೫೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಕಳೆದ ೧೦ ವರ್ಷಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗಗಳಿಗಾಗಿ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ;

(ಆ) ಸದರಿ ಯೋಜನೆಗಳಿಗಾಗಿ ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ; ಈ ಯೋಜನೆಗಳಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ವರ್ಷವಾರು ಮತ್ತು ಯೋಜನೆವಾರು ಮಾಹಿತಿ ನೀಡುವುದು)

(ಇ) ಕಳೆದ ೧೦ ವರ್ಷಗಳ ಅವಧಿಯಲ್ಲಿ ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಯೋಜನೆ ಅಡಿ ಅವಳಿ ಜಿಲ್ಲೆಯ ಎಷ್ಟು ಫಲಾನುಭವಿಗಳು ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ್ದಾರೆ? (ಫಲಾನುಭವಿಗಳ ಹೆಸರು, ಅನುಷ್ಠಾನಗೊಂಡ ಕಾಮಗಾರಿಗಳ ಹೆಸರು ಸಮೇತ ವಿವರವಾದ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ಟ್ರೀ ಪಾರ್ಕ್‌ಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೦೩ (೩೬೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಟ್ರೀ ಪಾರ್ಕ್‌ಗಳನ್ನು ಅಭಿವೃದ್ಧಿ ಮಾಡುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಅತಿ ಕಡಿಮೆ ಇರುವ ಅರಣ್ಯ ಪ್ರದೇಶವನ್ನು ಅಭಿವೃದ್ಧಿ ಮಾಡಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು? (ವಿವರ ನೀಡುವುದು)

## ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೦೪ (೩೬೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಬರುವ ತಾಂಡಾ, ಕ್ಯಾಂಪ್ ಹಾಗೂ ಗೊಲ್ಲರ ಹಟ್ಟಿ ಇವುಗಳನ್ನು ಕಂದಾಯ ಗ್ರಾಮಗಳಾನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ತೆಗೆದುಕೊಳ್ಳುವ ಕಾಲಮಿತಿ ಎಷ್ಟು;

(ಇ) ರಾಯಚೂರು ನಗರದಲ್ಲಿ ಜಿಲ್ಲಾ ಸಂಕೀರ್ಣ (District Complex) ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ತುಂಗಭದ್ರಾ ರಿಸರ್ವಾಯರ್‌ನಲ್ಲಿ ತುಂಬಿರುವ ಹೂಳಿನ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೫ (೩೬೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಾರಾಯಣಪುರ ಬಲದಂಡೆ ಕಾಲುವೆ ೯೫ ಕಿ.ಮೀ ದಿಂದ ೧೨೫ ಕಿ.ಮೀ. ವರೆಗೂ ಮುಖ್ಯ ಕಾಲುವೆ ನಿರ್ಮಾಣವಾಗಿರುವುದರಿಂದ ನೀರು ಸರಬರಾಜು ಮುಂದುವರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ನಾರಾಯಣಪುರ ಬಲದಂಡೆ ಕಾಲುವೆ ೯೫ ಕಿ.ಮೀ. ತನಕ ನೀರು ಸರಬರಾಜು ಮಾಡುವಲ್ಲಿ ಆಗಿರುವಂತಹ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಮತ್ತು ಅದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ತುಂಗಭದ್ರಾ ರಿಸರ್ವಾಯರ್‌ನಲ್ಲಿ ೩೩ ಟಿ.ಎಂ.ಸಿ. ಅಡಿ (Feet) ಹೂಳು ತುಂಬಿರುವುದರಿಂದ ನೀರಿನ ಶೇಖರಣೆ ಪ್ರಮಾಣ ಕಡಿಮೆ ಆಗಿರುವುದರಿಂದ ಆ ನೀರಿನ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲಾ ನ್ಯಾಯಾಲಯ ಹಾಗೂ ಮಾನ್ವಿ ತಾಲ್ಲೂಕು ನ್ಯಾಯಾಲಯಗಳಲ್ಲಿ ಕೋರ್ಟ್ ಕಾಂಪ್ಲೆಕ್ಸ್ ನಿರ್ಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೬ (೩೬೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲಾ ನ್ಯಾಯಾಲಯದಲ್ಲಿ ಕೋರ್ಟ್ ಕಾಂಪ್ಲೆಕ್ಸ್‌ನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಮಾನ್ವಿ ತಾಲ್ಲೂಕು ಮ್ಯಾಜಿಸ್ಟ್ರೇಟ್ ಕೋರ್ಟ್ ಕಾಂಪ್ಲೆಕ್ಸ್ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಮಾನ್ವಿ ಪಟ್ಟಣದಲ್ಲಿ ಸರ್ಕಾರಿ ಐ.ಟಿ.ಐ. ಕಾಲೇಜು ನಿರ್ಮಾಣ ಮಾಡುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೭ (೩೬೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ ಐ.ಟಿ.ಐ. ಕಾಲೇಜು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿ ಶ್ರಮಶಕ್ತಿ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಎತ್ತಿನ ಹೊಳೆ ಯೋಜನೆಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೦೮ (೩೫೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬರಪೀಡಿತ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿತ್ರದುರ್ಗ ಜಿಲ್ಲೆಗಳು ಡಾ॥ ನಂಜುಂಡಪ್ಪ ವರದಿಯಂತೆ ಅತಿ ಹಿಂದುಳಿದಿದ್ದು ಈಗಾಗಲೇ ಅಂತರ್ಜಲ ಅತಿಬಳಕೆವಲಯ ಎಂದು ಘೋಷಿಸಲಾಗಿದ್ದು ಈ ಭಾಗದ ಅಂತರ್ಜಲ ಅಭಿವೃದ್ಧಿ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರವು ಯಾವ ಯಾವ ಯೋಜನೆಗಳನ್ನು ರೂಪಿಸಿದೆ; (ವಿವರವಾಗಿ ಆ ಯೋಜನೆಗಳ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಎತ್ತಿನ ಹೊಳೆ ಯೋಜನೆಯಿಂದ ದೊರೆಯಬಹುದಾದ ನೀರನ್ನು ಜನ ಕುಡಿಯುವುದಕ್ಕೆ ಮಾತ್ರ ಉಪಯೋಗಿಸುವುದೇ ಅಥವಾ ಕೃಷಿ ನೀರಾವರಿ ಬೇಸಾಯಕ್ಕೆ ಉಪಯೋಗಿಸುವುದೇ ಸ್ಪಷ್ಟೀಕರಣದೊಂದಿಗೆ ಮಾಹಿತಿ ನೀಡುವುದು;

(ಇ) ಎತ್ತಿನ ಹೊಳೆ ಯೋಜನೆಯ ಹಾದು ಹೋಗುವ ಜಿಲ್ಲೆ ತಾಲ್ಲೂಕು ಪ್ರದೇಶಗಳಿಗೆ ಎಷ್ಟು ಪ್ರಮಾಣದ ನೀರನ್ನು ನಿಗಧಿ ಪಡಿಸಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಈ) ಎತ್ತಿನ ಹೊಳೆ ಯೋಜನೆಯ ಕಾಮಗಾರಿಗಳು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು; ಈ ಯೋಜನೆಗೆ ಖರ್ಚಾಗುವ ಹಣವೆಷ್ಟು?

## ಗ್ರಾಮ ಸಹಾಯಕರನ್ನು 'ಡಿ' ದರ್ಜೆ ನೌಕರರೆಂದು ಪರಿಗಣಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೦೯ (೩೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು; ಇವರು ೩೮ ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಇವರನ್ನು ಸರ್ಕಾರವು ಗ್ರೂಪ್ 'ಡಿ' ದರ್ಜೆ ನೌಕರರೆಂದು ಪರಿಗಣಿಸಿ ಯಾವಾಗ ಆದೇಶ ಹೊರಡಿಸಲಾಗುವುದು;

(ಈ) ಇದರ ಸಂಬಂಧ ಇಲ್ಲಿಯವರೆಗೆ ಮಾನ್ಯ ಉಚ್ಚ ಮತ್ತು ಸರ್ವೋಚ್ಚ ನ್ಯಾಯಾಲಯಗಳ ಆದೇಶಗಳು ಏನಿವೆ? (ವಿವರವಾದ ಮಾಹಿತಿ ನೀಡುವುದು)

## ಕಾರ್ಮಿಕರ ಕನಿಷ್ಟ ಕೂಲಿ ದರದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೧೦ (೩೪೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಮಿಕ ಇಲಾಖೆಯ ವ್ಯಾಖ್ಯೆಯಲ್ಲಿ ಬರುವ 'ಕಾರ್ಮಿಕ" ಅಂದರೆ ಯಾರು; (ಸ್ಪಷ್ಟೀಕರಣದೊಂದಿಗೆ ಮಾಹಿತಿ ನೀಡುವುದು)

(ಆ) ಕಾರ್ಮಿಕ ಇಲಾಖೆಯ ವ್ಯಾಖ್ಯೆಯಲ್ಲಿ ಬರುವ ಉದ್ದಿಮೆ/ಔದ್ಯಮ ಅಂದರೆ ಏನು; ಎಷ್ಟು ತರಹದ ಉದ್ದಿಮೆ/ಔದ್ಯಮಗಳು ಈ ವ್ಯಾಖ್ಯೆಯಡಿ ಬರುತ್ತವೆ; (ವಿವರವಾದ ಮಾಹಿತಿ ನೀಡುವುದು)

(ಇ) ಕೃಷಿ ಬೇಸಾಯ ಮಾಡುವ ರೈತನು ಕಾರ್ಮಿಕನೇ; ಸ್ಪಷ್ಟೀಕರಣದೊಂದಿಗೆ ಮಾಹಿತಿ ಕೊಡುವುದು;

(ಈ) ಕಾರ್ಮಿಕನಿಗೆ ನೀಡಬೇಕಾದ ಕನಿಷ್ಠ ಕೂಲಿ ಎಷ್ಟು; (ಉದ್ದಿಮೆವಾರು, ಹುದ್ದೆಯವಾರು, ವಿವರವಾರ ಮಾಹಿತಿ ಕೊಡುವುದು)

(ಉ) ಸಿ.ಪಿ.ಐ. ಇಂಡೆಕ್ಸ್ (ಗ್ರಾಹಕ ಸೂಚ್ಯಂಕ ದರ ಅಂದರೆ ಏನು; ಔದ್ಯಮಿಕ ಕ್ಷೇತ್ರದಲ್ಲಿ ಇದು ಯಾವುದರ ಮೇಲೆ ಅವಲಂಬಿತವಾಗಿರುತ್ತದೆ? (ವಿವರವಾದ ಮಾಹಿತಿ ನೀಡುವುದು)

## ಅರಣ್ಯ ಭೂಮಿಯನ್ನು ಗುತ್ತಿಗೆ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೧೧ (೩೫೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯಿಂದ ಮೈಸೂರು ಕಾಗದ ಕಾರ್ಖಾನೆ (M.P.M.) ಭದ್ರಾವತಿ, ಇವರಿಗೆ ಕಚ್ಚಾ ಸಾಮಗ್ರಿ ಬೆಳೆಯುವ ಸಂಬಂಧ ಎಷ್ಟು ಅರಣ್ಯ ಭೂಮಿಯನ್ನು ನೀಡಲಾಗಿದೆ; (ವಿವರವಾಗಿ ಗ್ರಾಮ ಸರ್ವೆ ನಂ. ವಿಸ್ತೀರ್ಣ ಮಾಹಿತಿ ಒಳಗೊಂಡಂತೆ ಮಾಹಿತಿ ಕೊಡುವುದು)

(ಆ) ಈ ಭೂಮಿಯನ್ನು ಕ್ರಯಕ್ಕೆ ನೀಡಲಾಗಿದೆಯೇ; ಅಥವಾ ಗುತ್ತಿಗೆ ನೀಡಲಾಗಿದೆಯೇ; ಇದರ ನಿಯಮ ನಿಬಂಧನೆಗಳೇನು; (ವಿವರವಾಗಿ ಮಾಹಿತಿ ನೀಡುವುದು)

(ಇ) ಸದರಿ ಭೂಮಿಯನ್ನು ಯಾರಾದರು ಒತ್ತುವರಿ ಮಾಡಿದ್ದಾರೆಯೇ; ಮಾಡಿದ್ದಲ್ಲಿ ವಿವರವಾದ ಮಾಹಿತಿ ನೀಡುವುದು; ಇದರ ಸಂಬಂಧ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಈ) ಸದರಿ ಭೂಮಿಯಲ್ಲಿ ಕಾರ್ಖಾನೆಯವರು ಯಾವ ಯಾವ ಮರಗಳನ್ನು ಬೆಳೆದಿರುತ್ತಾರೆ; ಬೆಳೆದ ಮರಗಳನ್ನು ಕಾರ್ಖಾನೆಯವರು ಉಪಯೋಗಿಸಿದ್ದಾರೆಯೇ ಅಥವಾ ಬೇರೆಯವರಿಗೆ ನೀಡಿದ್ದಾರೆಯೇ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಜಿಲ್ಲಾ, ತಾಲ್ಲೂಕುಗಳು ಮತ್ತು ಹೋಬಳಿಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೧೨ (೩೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕಂದಾಯ ವಿಭಾಗ ಹಾಗೂ ಉಪ–ಕಂದಾಯ ವಿಭಾಗಗಳು ಎಷ್ಟು; ಅವು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ರೆವಿನ್ಯೂ ಜಿಲ್ಲೆ, ತಾಲ್ಲೂಕು, ಮತ್ತು ಹೋಬಳಿಗಳ ಸಂಖ್ಯೆ ಎಷ್ಟು; ಅವು ಯಾವುವು; (ರೆವಿನ್ಯೂ ಜಿಲ್ಲೆ, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಹೋಬಳಿಗಳಲ್ಲಿ ಅತ್ಯಂತ ದೊಡ್ಡ ಹೋಬಳಿ ಯಾವುದು; ಮತ್ತು ಚಿಕ್ಕ ಹೋಬಳಿ ಯಾವುದು;

(ಈ) ರಾಜ್ಯದಲ್ಲಿ ಎಷ್ಟು ಹೊಸ ತಾಲ್ಲೂಕುಗಳನ್ನು ರಚಿಸುವ ಸಂಬಂಧ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿವೆ; ಅಂತಿಮವಾಗಿ ಪಟ್ಟಿಯಲ್ಲಿರುವ ಪ್ರದೇಶಗಳು ಯಾವುವು? (ವಿವರವಾದ ಮಾಹಿತಿ ನೀಡುವುದು)

## ಅರಣ್ಯ ರಕ್ಷಣೆ ಮತ್ತು ಅಭಿವೃದ್ಧಿ ಕಾಮಗಾರಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೩ (೩೦೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಅರಣ್ಯ ಪ್ರದೇಶಗಳೆಷ್ಟು;

(ಆ) ಪ್ರತಿ ವರ್ಷ ಅರಣ್ಯ ನಾಶವಾಗುತ್ತಿದ್ದು ಅರಣ್ಯ ಮತ್ತು ಅರಣ್ಯ ಜೀವಿಗಳ ರಕ್ಷಣೆಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಅರಣ್ಯ ನಾಶದಿಂದ ಮಳೆಯ ಪ್ರಮಾಣ ಕಡಿಮೆಯಾಗುವುದರಿಂದ ಅರಣ್ಯಾಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಬಾಲಕಾರ್ಮಿಕರ ಪುನರ್ವಸತಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೪ (೨೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಉದ್ಯಮಗಳವರು ಅನೇಕ ಬಾಲ ಕಾರ್ಮಿಕರನ್ನು ನೇಮಿಸಿಕೊಂಡು ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಉದ್ಯಮದಾರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಪತ್ತೆ ಮಾಡಿರುವ ಬಾಲ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಬಾಲಕರ ಪುನರ್ವಸತಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ; ಎಷ್ಟು ಜನರಿಗೆ ಪುನರ್ವಸತಿ ಕಲ್ಪಿಸಲಾಗಿದೆ; ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸರ್ಕಾರದ ಕಾರ್ಯಕ್ರಮಗಳೇನು?

## ಕಬನಿ ನದಿಯಿಂದ ಮೈಸೂರು ಮತ್ತು ಚಾಮರಾಜನಗರದ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೫ (೩೦೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಬನಿ ನದಿಯಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ೨೩ ಕೆರೆಗಳಿಗೆ ನೀರು ತುಂಬಿಸಿ ಆ ಭಾಗದ ಜನರಿಗೆ ಕುಡಿಯುವ ನೀರಿನ ಯೋಜನೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

(ಆ) ಈ ಬಗ್ಗೆ ಒತ್ತಾಯಿಸಿ ಆ ಭಾಗದ ಜನರು ಉಮ್ಮತ್ತೂರಿನ ದೊಡ್ಡಕೆರೆ ಬಳಿ ಹೋರಾಟ ಮಾಡಿದಾಗ ಶೀಘ್ರದಲ್ಲೇ ಯೋಜನೆ ಪ್ರಾರಂಭಿಸಲಾಗುವುದೆಂದು ಮಾನ್ಯ ಜಿಲ್ಲಾ ಮಂತ್ರಿಗಳು ಹೇಳಿರುವುದು ನಿಜವಲ್ಲವೆ;

(ಇ) ಈ ಯೋಜನೆ ಜಾರಿಗೆ ತಂದರೆ ಆ ಭಾಗದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗೆ ಅನುಕೂಲವಾಗುವುದಲ್ಲದೆ, ಅಂತರ್ಜಲ ಮಟ್ಟ ಹೆಚ್ಚಲೂ ಅವಕಾಶವಾಗುವುದರಿಂದ ತಕ್ಷಣ ಈ ಯೋಜನೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಯಾವ ಕಾಲಮಿತಿಯೊಳಗೆ ಈ ಯೋಜನೆ ಪ್ರಾರಂಭಿಸಲಾಗುವುದು?

## ಕ್ರೀಡಾಂಗಣ ಮತ್ತು ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೬ (೩೧೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ತಾಲ್ಲೂಕು ಮತ್ತು ಹೋಬಳಿ ಕೇಂದ್ರಗಳಲ್ಲಿ ಗ್ರಾಮೀಣ ಪ್ರದೇಶದ ಪ್ರತಿಭಾವಂತ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಕ್ರೀಡಾಂಗಣ ನಿರ್ಮಿಸುವ ಬಗ್ಗೆ ಸರ್ಕಾರದ ಆಲೋಚನೆ ಮಾಡಿದೆಯೇ; ಇದ್ದಲ್ಲಿ ಯಾವ ಸ್ಥಳದಲ್ಲಿ ಕ್ರೀಡಾಂಗಣ ನಿರ್ಮಿಸಲು ಉದ್ದೇಶಿಸಿದೆ; (ವಿವರ ನೀಡುವುದು)

(ಆ) ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಕ್ರೀಡಾ ಚಟುವಟಿಕೆಗಳನ್ನು ಗುರುತಿಸಿ ಸದರಿ ವಿದ್ಯಾರ್ಥಿಗಳಿಗೆ ಇಲಾಖಾ ವತಿಯಿಂದ ನೀಡಲಾಗುತ್ತಿರುವ ಪ್ರೋತ್ಸಾಹಗಳೇನು; (ವಿವರ ನೀಡುವುದು)

(ಇ) ನಗರ ಪ್ರದೇಶದ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಯಲ್ಲಿ ತೊಡಗಿಕೊಳ್ಳಲು ಇರುವ ಅನುಕೂಲತೆ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಇದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು? (ವಿವರ ನೀಡುವುದು)

## ಕಾಡಾನೆಗಳ ಹಾವಳಿಯಿಂದ ಮರಣ ಹೊಂದಿದ ವ್ಯಕ್ತಿಗಳಿಗೆ ನೀಡಿರುವ ಪರಿಹಾರದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೭ (೩೧೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯ ಆಲೂರು ಮತ್ತು ಸಕಲೇಶಪುರ ತಾಲ್ಲೂಕಿನ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿಯಿಂದ ಮರಣ ಹೊಂದಿರುವ ವ್ಯಕ್ತಿಗಳ ಸಂಖ್ಯೆ ಎಷ್ಟು ಹಾಗೂ ಸದರಿ ಕುಟುಂಬ ವರ್ಗಕ್ಕೆ ನೀಡಲಾಗಿರುವ ಪರಿಹಾರದ ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಾದ್ಯಂತ ಇರುವ ಅರಣ್ಯ ಪ್ರದೇಶದ ಆಸುಪಾಸುಗಳಲ್ಲಿ ಕಾಡು ಪ್ರಾಣಿಗಳ ಉಪಟಳಕ್ಕೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು;

(ಇ) ಹಾಸನ ಜಿಲ್ಲೆಯಾದ್ಯಂತ ಅರಣ್ಯ ಪ್ರದೇಶದ ಸುತ್ತಮುತ್ತ ವಾಸಿಸುವ ಕುಟುಂಬಗಳು ಉರುವಲು ಬಳಕೆಗೆ ಸೌದೆಯನ್ನು ಬಳಸುವುದರ ಬದಲು, ಸದರಿ ಕುಟುಂಬಗಳಿಗೆ ಅರಣ್ಯ ಇಲಾಖೆಯಿಂದ ಗ್ಯಾಸ್ ಸಿಲೆಂಡರ್ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ, ೨೦೦೫ ರಿಂದ ೨೦೧೫ರವರೆಗೆ ಎಷ್ಟು ಕುಟುಂಬಗಳಿಗೆ ಅಡುಗೆ ಗ್ಯಾಸ್ ಸಿಲೆಂಡರ್ ವಿತರಣೆ ಮಾಡಲಾಗಿದೆ; (ಫಲಾನುಭವಿಗಳ ವಿವರ ನೀಡುವುದು)

(ಉ) ಅಡುಗೆ ಅನಿಲ ಸಿಲೆಂಡರ್ ವಿತರಿಸುವಲ್ಲಿ ಯಾವ ಮಾನದಂಡ ಅನುಸರಿಸಲಾಗುತ್ತಿದೆ;

(ಊ) ೨೦೧೬-೧೭ನೇ ಸಾಲಿನಲ್ಲಿ ಎಷ್ಟು ಕುಟುಂಬಗಳಿಗೆ ಅಡುಗೆ ಅನಿಲ ಸಿಲೆಂಡರ್ ವಿತರಿಸಲು ಗುರಿ ನಿಗಧಿಪಡಿಸಲಾಗಿದೆ ಎಂಬುದರ ವಿವರ ಮತ್ತು ಆಯ್ಕೆ ಮಾಡಿರುವ ಫಲಾನುಭವಿಗಳ ವಿವರ ನೀಡುವುದು?

## ಶವ ಸಂಸ್ಕಾರಕ್ಕೆ ನೀಡಲಾಗುವ ಪರಿಹಾರದ ಮೊತ್ತದ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೮ (೩೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಡತನ ರೇಖೆಗಿಂತ ಕಡಿಮೆ ಆದಾಯವಿರುವ ಕುಟುಂಬಗಳಲ್ಲಿ, ಮೃತಪಟ್ಟವರಿಗೆ ಶವ ಸಂಸ್ಕಾರಕ್ಕೆ ನೀಡುವ ಪರಿಹಾರದ ಮೊತ್ತ ಎಷ್ಟು;

(ಆ) ೨೦೧೫–೧೬ನೇ ಸಾಲಿನಲ್ಲಿ ನೀಡಲಾಗಿರುವ ಒಟ್ಟಾರೆ ಮೊತ್ತ ಎಷ್ಟು;

(ಇ) ಬಾಕಿ ಇರುವ ಮೊತ್ತ ಎಷ್ಟು?

## ಅಂತರ್ಜಲ ಅಭಿವೃದ್ಧಿ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯ (೩೩೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕಿನ ತಳುಕು ಹಾಗೂ ನಾಯಕನ ಹಟ್ಟಿ ಹೋಬಳಿಗಳಲ್ಲಿ ಅಂತರ್ಜಲ ಮಟ್ಟ ತೀವ್ರ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಆ ಭಾಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಚೆಕ್ ಡ್ಯಾಂಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ತುಂಗಭದ್ರಾ ಹಿನ್ನೀರಿನ ಮೂಲಕ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೦ (೩೩೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ತುಂಗಭದ್ರಾ ಹಿನ್ನೀರಿನ ಮೂಲಕ ಕುಡಿಯುವ ನೀರು ಒದಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಈ ಯೋಜನೆಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

(ಇ) ಸದರಿ ಯೋಜನೆಗೆ ಮೀಸಲಿಟ್ಟ ಅನುದಾನ ಎಷ್ಟು?

## ಮೇಕೆದಾಟು ಯೋಜನೆಯನ್ನು ಜಾರಿಗೆ ತರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೨೧ (೧೫೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೇಕೆದಾಟು ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಹಲವು ಬಾರಿ ವಾಗ್ದಾನ ಮಾಡಿದ್ದರೂ ಅನುಷ್ಠಾನಕ್ಕೆ ತರದಿರಲು ಕಾರಣಗಳೇನು;

(ಆ) ಈ ಯೋಜನೆಗೆ ಸಂಬಂಧಿಸಿದಂತೆ ಪೂರಕ ಸಮಗ್ರ ಯೋಜನೆಯ ವರದಿಯನ್ನು (ಡಿಪಿಆರ್) ತಯಾರಿಸಲಾಗಿದೆಯೇ;

(ಇ) ಈ ಯೋಜನೆಯ ಅನುಷ್ಠಾನಕ್ಕೆ ಒಟ್ಟು ಖರ್ಚು ಮಾಡಬೇಕಾದ ಅಂದಾಜು ಹಣವೆಷ್ಟು?

## ಚಾರ್‌ಧಾಮ ಮತ್ತು ಮಾನಸ ಗಂಗೋತ್ರಿ ಯಾತ್ರೆಗೆ ಪ್ರವಾಸಿ ಸಂಸ್ಥೆಗಳನ್ನು ಗುರುತಿಸಲು ಇರುವ ಮಾನದಂಡಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೨೨ (೧೫೪೪) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರ್ಮಿಕ ದತ್ತಿ ಇಲಾಖೆಯಿಂದ ಚಾರ್‌ಧಾಮ ಮತ್ತು ಮಾನಸ ಗಂಗೋತ್ರಿ ಯಾತ್ರೆಗೆ ಅನುದಾನವನ್ನು ಯಾವ ರೀತಿಯಾಗಿ ನೀಡಲಾಗುತ್ತದೆ; ಇದಕ್ಕೆ ಸಂಬಂಧಿಸಿದ ಮಾನದಂಡಗಳೇನು;

(ಆ) ಈ ಅನುದಾನವನ್ನು ಯಾತ್ರಿಗಳಿಗೆ ನೇರವಾಗಿ ನೀಡಲಾಗುತ್ತಿದೆಯೇ; ಅಥವಾ ನಿಗಧಿತ ಪ್ರವಾಸಿ ಸಂಸ್ಥೆಗಳು ಏರ್ಪಡಿಸುವ ಯಾತ್ರೆಯಲ್ಲಿ ತೆರಳಿದರೆ ಮಾತ್ರ ನೀಡಲಾಗುತ್ತದೆಯೆ;

(ಇ) ಚಾರ್‌ಧಾಮ ಮತ್ತು ಮಾನಸ ಗಂಗೋತ್ರಿ ಯಾತ್ರೆಗೆ ಪ್ರವಾಸಿ ಸಂಸ್ಥೆಗಳನ್ನು ಗುರುತಿಸಿದಲ್ಲಿ, ಈ ಸಂಸ್ಥೆಗಳನ್ನು ಯಾವ ಮಾನದಂಡಗಳ ಆಧಾರದಲ್ಲಿ ಗುರುತಿಸಿದೆ;

(ಈ) ಚಾರ್‌ಧಾಮ ಮತ್ತು ಮಾನಸ ಗಂಗೋತ್ರಿ ಯಾತ್ರೆಗೆ ಅನುದಾನವನ್ನು ನೀಡುತ್ತಿರುವದರಿಂದ, ಈ ಯಾತ್ರೆಗಳನ್ನು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯ ವತಿಯಿಂದ, ಎಂದಿನಿಂದ ಜಾರಿಗೆ ಬರುವಂತೆ ಪ್ರಾರಂಭಿಸಲಾಗುವುದು; ಈ ರೀತಿಯಾಗಿ ಯಾತ್ರೆಗಳನ್ನು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಏರ್ಪಡಿಸಿದಲ್ಲಿ, ಸರ್ಕಾರದ ಹಣವು ಸರ್ಕಾರದ ಅಧೀನದಲ್ಲಿರುವ ಇನ್ನೊಂದು ಸಂಸ್ಥೆಗೆ ಹೋಗುವುದರಿಂದ ಆ ಸಂಸ್ಥೆಯು ಅಭಿವೃದ್ಧಿಗೆ ಪೂರಕವಾಗುವುದಿಲ್ಲವೆ?

## ರಾಜ್ಯದ ಸರ್ಕಾರಿ, ಖಾಸಗಿ, ಅನುದಾನಿತ ಐ.ಟಿ.ಐ. ಗಳಲ್ಲಿ ಆನ್‌ಲೈನ್ ಪ್ರವೇಶಾರ್ಥಿ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೨೩ (೧೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ, ಖಾಸಗಿ ಅನುದಾನಿತ ಐ.ಟಿ.ಐ. ಗಳಲ್ಲಿ ಆನ್‌ಲೈನ್ ಪ್ರವೇಶಾರ್ಥಿಯನ್ನು ಎಂದಿನಿಂದ ಆರಂಭಿಸಲಾಗಿದೆ;

(ಆ) ಆನ್‌ಲೈನ್ ಪ್ರವೇಶಾರ್ಥಿಯ ಮೂಲಕ ತಮ್ಮ ಜಿಲ್ಲೆಯಲ್ಲಿ ಮತ್ತು ಬೇರೆ ಬೇರೆ ಜಿಲ್ಲೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಐ.ಟಿ.ಐ. ಸಂಸ್ಥೆಗಳಲ್ಲಿ ಪ್ರವೇಶಾರ್ಥಿ ಬಯಸುವ ವಿದ್ಯಾರ್ಥಿಗಳ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಹಿನ್ನೆಲೆಯನ್ನು ಪರಿಗಣಿಸಿದಾಗ ತಮ್ಮ ಜಿಲ್ಲೆಯನ್ನು ಬಿಟ್ಟು ಹೊರ ಜಿಲ್ಲೆಗಳಿಗೆ ಪ್ರವೇಶಾರ್ಥಿ ಬಯಸುವವರ ಸಂಖ್ಯೆ ಅತ್ಯಂತ ಕಡಿಮೆ ಇರುವುದರಿಂದ, ಆನ್‌ಲೈನ್ ಪ್ರವೇಶಾರ್ಥಿ ಪದ್ಧತಿಯನ್ನು ಜಿಲ್ಲಾವಾರು ಮಾಡುವುದಕ್ಕೆ ಸರ್ಕಾರ ಯೋಚಿಸಿರುವುದೇ?

## ರಾಜ್ಯದಲ್ಲಿ ಹಚ್ಚ ಹಸಿರಾಗಿರುವ ಕಾಡಿನ ವಿಸ್ತೀರ್ಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೨೪ (೧೫೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ, ಎಷ್ಟು ವಿಸ್ತೀರ್ಣ ಪ್ರದೇಶಗಳಲ್ಲಿ ಪೂರ್ಣ ಪ್ರಮಾಣದ ಹಚ್ಚ ಹಸಿರಾಗಿರುವ ಕಾಡು ಲಭ್ಯವಿದೆ; (ವಿಸ್ತೀರ್ಣ ಹಾಗೂ ಪ್ರತಿಶತ ಎಷ್ಟು ಕಾಡು ಇದೆ)

(ಆ) ಈ ನಿಟ್ಟಿನಲ್ಲಿ ಲಭ್ಯವಿರುವ ರಾಷ್ಟ್ರೀಯ ಕಾಡಿನ ಪ್ರತಿಶತ ಪ್ರಮಾಣದ ಬಗ್ಗೆ ವಿವರ ನೀಡುವುದು;

(ಇ) ರಾಜ್ಯದಲ್ಲಿ ಎಷ್ಟು ಪ್ರತಿಶತ ಕಾಡು ಲಭ್ಯವಿರಬೇಕೆಂದು ಇಲಾಖೆ ನಿರ್ಣಯಿಸಿದೆ;

(ಈ) ಈ ನಿಟ್ಟಿನಲ್ಲಿ ಇಲಾಖೆಯಿಂದ ಯಾವ ಕೈಗೊಳ್ಳಲಾಗಿದೆ?

## ರಾಜ್ಯದಲ್ಲಿ ನೀರಾವರಿ ಯೋಜನೆಯ ಸೌಲಭ್ಯದ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೨೫ (೧೫೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ;

(ಆ) ಈ ನೀರಾವರಿ ಯೋಜನೆಗೆ ಮಾಡಲಾದ ವೆಚ್ಚದ ವರ್ಷಾವಾರು ವಿವರ ನೀಡುವುದು;

(ಇ) ಈ ಯೋಜನೆಗಳು ಯಾವ ಹಂತದಲ್ಲಿದೆ?

## ಕಾರ್ಮಿಕ ಕಲ್ಯಾಣ ನಿಧಿಯ ಅನುದಾನ ನಿರ್ವಹಣೆ ಮತ್ತು ಕಾರ್ಮಿಕರ ನೋಂದಣಿ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೬ (೭೯೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಗ್ರಾಮ ಪಂಚಾಯಿತಿ ಸೇರಿದಂತೆ ಸ್ಥಳೀಯ ಸಂಸ್ಥೆಗಳಿಂದ ವಸೂಲಾದ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವೆಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಸದರಿ ಸುಂಕವನ್ನು ಯಾವ ಬ್ಯಾಂಕ್ ಖಾತೆಯಲ್ಲಿ ನಿರ್ವಹಣೆ ಮಾಡಲಾಗುತ್ತಿದೆ; (ಬ್ಯಾಂಕ್, ಶಾಖೆ, ೩ ವರ್ಷದ ವಿವರದೊಂದಿಗೆ ಬ್ಯಾಂಕ್ ಪಾಸ್ ಶೀಟ್ ನೀಡುವುದು)

(ಇ) ಸಂಗ್ರಹವಾದ ಕಾರ್ಮಿಕ ಕಲ್ಯಾಣ ನಿಧಿಗೆ ಸ್ವೀಕೃತವಾದ ವಾರ್ಷಿಕ ಬಡ್ಡಿ ಮೊತ್ತವೆಷ್ಟು; ಬಡ್ಡಿ ದರ ಯಾವುದು;

(ಈ) ರಾಜ್ಯದಲ್ಲಿ ನೋಂದಣಿಯಾದ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾ–ತಾಲ್ಲೂಕುವಾರು ವಿವರ ನೀಡುವುದು) ಕಾರ್ಮಿಕ ಕಲ್ಯಾಣ ಕಾರ್ಯಕ್ರಮಕ್ಕಾಗಿ ಕಳೆದ ೩ ವರ್ಷಗಳಲ್ಲಿ ಖರ್ಚಾದ ಅನುದಾನ ಎಷ್ಟು; (ವರ್ಷವಾರು, ಶೇಕಡಾವಾರು, ಯೋಜನೆವಾರು ಮಾಹಿತಿ ನೀಡುವುದು)

(ಉ) ಕಾರ್ಮಿಕ ಕಲ್ಯಾಣ ನಿಧಿಯು ಸಮರ್ಪಕ ನಿರ್ವಹಣೆ ದುರುಪಯೋಗವಾಗದಂತೆ ತಡೆಯಲು ಹಾಗೂ ಕಾರ್ಮಿಕರ ನೋಂದಣಿ ಹೆಚ್ಚಳ, ಸೌಲಭ್ಯ ಹೆಚ್ಚಳಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಉಡುಪಿ ಜಿಲ್ಲಾ ನ್ಯಾಯಾಲಯದ ಸಂಕೀರ್ಣದ ಕಾಮಗಾರಿ ವಿಳಂಬದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೭ (೨೯೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ೩ನೇ ಮಹಡಿ ನಿರ್ಮಾಣ ಕಾಮಗಾರಿಗೆ ೨೦೧೩-೧೪ನೇ ಸಾಲಿನ ಮುಂಗಡ ಪತ್ರದಲ್ಲಿ ಅನುದಾನ ಕಾಯ್ದಿರಿಸಿದ್ದರೂ, ಈತನಕ ಕಾಮಗಾರಿ ಪ್ರಕ್ರಿಯೆ ಆರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು; (ವಿವರ ನೀಡುವುದು)

(ಆ) ಉಡುಪಿ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ೩ನೇ ಮಹಡಿ ನಿರ್ಮಾಣ ಕಾಮಗಾರಿಯ ಪರಿಷ್ಕೃತ ಅಂದಾಜು ಪಟ್ಟಿಗೆ ಸರ್ಕಾರದಿಂದ ಆಡಳಿತ ಮಂಜೂರಾತಿ ಕೋರಿ ಕರ್ನಾಟಕ ಉಚ್ಛ ನ್ಯಾಯಾಲಯದಿಂದ ಈಗಾಗಲೇ ಪ್ರಸ್ತಾವನೆ ಸಲ್ಲಿಕೆಯಾಗಿರುವುದಲ್ಲದೆ, ಅನೇಕ ನೆನಪೋಲೆಗಳನ್ನು ಬರೆಯಲಾಗಿದ್ದರೂ, ಈತನಕ ಆಡಳಿತ ಮಂಜೂರಾತಿ ನೀಡದಿರಲು ಕಾರಣವೇನು; (ವಿವರ ನೀಡುವುದು)

(ಇ) ಉಡುಪಿ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಲಿಫ್ಟ್ ಸೌಲಭ್ಯ ಇಲ್ಲದಿರುವುದರಿಂದ, ವಕೀಲರು ಮತ್ತು ಹಿರಿಯ ನಾಗರಿಕ ಕಕ್ಷಿದಾರರಿಗೆ ತೀವ್ರ ತೊಡಕುಂಟಾಗಿರುವ ಹಿನ್ನಲೆಯಲ್ಲಿ, ೩ನೇ ಮಹಡಿ ನಿರ್ಮಾಣ ಕಾಮಗಾರಿಯು ಅತೀ ಅವಶ್ಯಕವಾಗಿದ್ದು, ಈ ಕಾಮಗಾರಿಯ ಪರಿಷ್ಕೃತ ಅಂದಾಜು ಪಟಿಗೆ ಯಾವಾಗ ಆಡಳಿತ ಮಂಜೂರಾತಿ ನೀಡಲಾಗುವುದು ಮತ್ತು ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು? (ವಿವರ ನೀಡುವುದು)

## ಫಾರ್ಮ್ ಹೌಸ್ (ಬೇಸಾಯದ ಮನೆ) ಅನುಮತಿಗೆ ನಿಯಮಾವಳಿ ರೂಪಿಸದೇ ಇರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೮ (೨೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ ೨೦೧೫ರ ಪ್ರಕರಣ ೯೫ ರಂತೆ, “ಬೇಸಾಯದ ಮನೆ” (ಫಾರ್ಮ್ ಹೌಸ್) ನಿರ್ಮಾಣಕ್ಕೆ ಅನುಮತಿ ನೀಡುವ ಪ್ರಾಧಿಕಾರ ಯಾವುದು; ಅನುಮತಿ ನೀಡುವ ಸಂಬಂಧ ನಿಯಮಾವಳಿ ರೂಪಿಸಲಾಗಿದೆಯೇ; (ವಿವರ ನೀಡುವುದು) ಅನುಮತಿ ನೀಡುವ ಅಧಿಕಾರ ಗ್ರಾಮ ಪಂಚಾಯತ್ ಗಳಿಗೆ ಇದೆಯೇ;

(ಆ) “ಬೇಸಾಯದ ಮನೆ” ನಿರ್ಮಾಣಕ್ಕೆ ಅನುಮತಿ ನೀಡಲು ಅಗತ್ಯವಿರುವ ದಾಖಲೆಗಳೇನು; ಅನುಮತಿ ನೀಡುವ ವಿಧಾನಗಳೇನು; ಈ ಹಿಂದೆ ಯಾವ ನಿಯಮ ಅನುಸರಿಸಲಾಗುತ್ತಿತ್ತು;

(ಇ) “ಬೇಸಾಯದ ಮನೆ” (ಫಾರ್ಮ್ ಹೌಸ್) ನಿರ್ಮಾಣಕ್ಕೆ ಅನುಮತಿ ನೀಡುವ ಸಂಬಂಧ ಗೊಂದಲಗಳು ಇರುವುದು ನಿಜವೇ;

(ಈ) “ಬೇಸಾಯದ ಮನೆ” (ಫಾರ್ಮ್ ಹೌಸ್) ನಿರ್ಮಾಣದ ಅನುಮತಿ ಸಂಬಂಧ ಮಾರ್ಗಸೂಚಿ/ನಿಯಮಾವಳಿಗಳು ರಚನೆಯಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) "ಬೇಸಾಯದ ಮನೆ" (ಫಾರ್ಮ್ ಹೌಸ್) ಸಂಬಂಧ ಕಾಯ್ದೆ ತಿದ್ದುಪಡಿಯಾಗಿ ತಿಂಗಳುಗಳೇ ಕಳೆದಿದ್ದರೂ ಇದುವರೆಗೂ ನಿಯುವಮಾವಳಿಗಳು ರೂಪುಗೊಳ್ಳದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ನಿಯಮಾವಳಿ ಜಾರಿಗೆ ತರುವ ಸಂಬಂಧ ಸರ್ಕಾರ ಯಾವಾಗ ಏನು ಕ್ರಮ ಕೈಗೊಳ್ಳಲಿದೆ?

## ಪ್ರತಿ ಜಿಲ್ಲೆಯಲ್ಲಿ ಕುಟುಂಬ ನ್ಯಾಯಾಲಯ ಸ್ಥಾಪನೆಯಲ್ಲಿನ ವಿಳಂಬದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೯ (೨೯೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನವದೆಹಲಿಯ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಹಾಗೂ ಕಾನೂನು ಮತ್ತು ನ್ಯಾಯ ಇಲಾಖೆಗೆ ಸಂಬಂಧಿಸಿದ ಸಂಸತ್ತಿನ ಸ್ಥಾಯಿ ಸಮಿತಿಯ ಶಿಫಾರಸ್ಸು ಮತ್ತು ಭಾರತದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳು ಪ್ರಧಾನ ಮಂತ್ರಿಗಳಿಗೆ ಬರೆದ ಪತ್ರವನ್ನು ಅನುಸರಿಸಿ ರಾಜ್ಯದ ಪ್ರತಿಯೊಂದು ಜಿಲ್ಲೆಗಳಲ್ಲಿಯೂ ಒಂದು ವರ್ಷದೊಳಗಾಗಿ ಕುಟುಂಬ ನ್ಯಾಯಾಲಯ ಸ್ಥಾಪಿಸಲು ಕ್ರಮ ಕೈಗೊಳ್ಳಬೇಕೆಂದು ದಿನಾಂಕ: ೧೬–೦೪–೨೦೦೮ರ ಪತ್ರದಲ್ಲಿ ಕೇಂದ್ರ ಸರ್ಕಾರವು ನಿರ್ದೇಶನ ನೀಡಿರುವ ಮೇರೆಗೆ ಉಡುಪಿ ಜಿಲ್ಲೆ ಸಹಿತ ಕೆಲ ಜಿಲ್ಲೆಗಳಲ್ಲಿ ಕುಟುಂಬ ನ್ಯಾಯಾಲಯು ಸ್ಥಾಪನೆಗೆ ಮಂಜೂರಾತಿ

ಕೋರಿ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ: ೨೮–೦೭–೨೦೦೮ ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದಲ್ಲದೆ ಅನೇಕ ನೆನಪೋಲೆಗಳನ್ನು ಕಳುಹಿಸಿದ್ದರೂ, ಉಡುಪಿ ಜಿಲ್ಲೆಯಲ್ಲಿ ಈ ತನಕ ಕುಟುಂಬ ನ್ಯಾಯಾಲಯ ಸ್ಥಾಪನೆಗೆ ಸರ್ಕಾರ ಮಂಜೂರಾತಿ ನೀಡದಿರಲು ಕಾರಣವೇನು; (ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕುಟುಂಬ ನ್ಯಾಯಾಲಯ ಸ್ಥಾಪಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ಇದಕ್ಕೆ ಕಾಲಮಿತಿ ನಿಗಧಿಪಡಿಸಲಾಗಿದೆಯೇ; ನಿಗಧಿಪಡಿಸಲಾಗಿದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು; (ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಕುಟುಂಬ ನ್ಯಾಯಾಲಯ ವ್ಯಾಪ್ತಿಯಲ್ಲಿ ತನಿಖೆಗೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲ್ಲೂಕಿನಲ್ಲಿ ಗುತ್ತಿಗೆ ಅವಧಿ ಮುಗಿದ ಸರ್ಕಾರಿ ಭೂಮಿಯನ್ನು ಮರಳಿ ಪಡೆಯುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦ (೩೪೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲ್ಲೂಕಿನ ಭೂರಣಕಿ ಮತ್ತು ಕರಿಕಟ್ಟಿ ಗ್ರಾಮಗಳಲ್ಲಿ ಸರ್ಕಾರಿ ಭೂಮಿಯನ್ನು ಗುತ್ತಿಗೆ ನೀಡಿದ್ದ ಅವಧಿ ಮುಗಿದಿದ್ದರೂ, ಸರ್ಕಾರವು ಜಮೀನನ್ನು ವಶಪಡಿಸಿಕೊಳ್ಳದೆ ಇರುವುದರಿಂದ ಗ್ರಾಮಸ್ಥರು ಪ್ರತಿಭಟನೆ ಕೈಗೊಂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಗ್ರಾಮಗಳ ಜಮೀನನ್ನು ಯಾವ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ ; ಯಾವಾಗ ಗುತ್ತಿಗೆ ನೀಡಲಾಗಿದೆ ; ಎಷ್ಟು ವರ್ಷಗಳಿಗೆ ಗುತ್ತಿಗೆ ನೀಡಲಾಗಿದೆ ; ಗುತ್ತಿಗೆ ನೀಡುವ ವೇಳೆ ಮಾಡಿಕೊಂಡ ಒಪ್ಪಂದವೇನು ;

(ಇ) ಸದರಿ ಜಮೀನಿನ ಗುತ್ತಿಗೆ ಅವಧಿಯನ್ನು ನವೀಕರಿಸಲಾಗಿದೆಯೇ;

(ಈ) ಸರ್ಕಾರಿ ಜಮೀನನ್ನು ವಶಪಡಿಸಿಕೊಳ್ಳಲು ಸಾರ್ವಜನಿಕರು ಹೋರಾಟ ಮಾಡುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಆ ಜಮೀನಿನಲ್ಲಿ ಸಾರ್ವಜನಿಕ ಸರ್ಕಾರಿ ಕಾಮಗಾರಿಗಳನ್ನು ಕೈಗೊಳ್ಳಲು ಸಾರ್ವಜನಿಕರು ಬೇಡಿಕೆ ಇಟ್ಟಿರುವುದು ಸೂಕ್ತವಲ್ಲವೇ ;

(ಉ) ಸಾರ್ವಜನಿಕರ ಬೇಡಿಕೆಗೆ ಸರ್ಕಾರದ ನಿಲುವೇನು ?

## ಬೆಳಗಾವಿ ಜಿಲ್ಲೆಯ ಬತ್ತಿದ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೧ (೩೪೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿನ ಕೆರೆ ಕಟ್ಟೆಗಳು ಬರಗಾಲದಿಂದ ಬತ್ತಿರುವುದರಿಂದ, ನೀರಿನ ಬವಣೆಯನ್ನು ತಪ್ಪಿಸಲು ಜಿಲ್ಲೆಯ ನದಿಗಳಿಂದ ಕೆರೆಗಳಿಗೆ ನೀರು ತುಂಬಿಸುವ ಪ್ರಸ್ತಾವನೆಗಳಿಗೆ ಸರ್ಕಾರದ ಮಟ್ಟದಲ್ಲಿ ಅನುಮೋದನೆ ನೀಡುವಲ್ಲಿ ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೃಹತ್ ನೀರಾವರಿ ಇಲಾಖೆಯಡಿ ಜಿಲ್ಲೆಯಲ್ಲಿ ಎಷ್ಟು ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಪ್ರಸ್ತಾವನೆಗಳು

ಸಲ್ಲಿಕೆಯಾಗಿವೆ ; ಅವುಗಳಿಗೆ ತಗಲುವ ವೆಚ್ಚ ಎಷ್ಟು ; ಯಾವ ಯಾವ ಕೆರೆಗಳಿಗೆ ನೀರು ತುಂಬಿಸುವ ಪ್ರಸ್ತಾವನೆ ಸಿದ್ದಪಡಿಸಲಾಗಿದೆ; ಮತ್ತು ಯಾವ ಯಾವ ವರ್ಷದಲ್ಲಿ ಪ್ರಸ್ತಾವನೆಗಳು ಸರ್ಕಾರಕ್ಕೆ ಸಲ್ಲಿಕೆಯಾಗಿವೆ ;

(ಇ) ಇಂತಹ ಮಹತ್ವದ ಯೋಜನೆಗಳ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು ;

(ಈ) ಈಗಾಗಲೇ ಎಷ್ಟು ಕೆರೆಗಳಿಗೆ ನೀರು ತುಂಬಿಸಲು ಅನುಮೋದನೆ ನೀಡಲಾಗಿದೆ ; ಆ ಕೆರೆಗಳು ಯಾವುವು ಮತ್ತು ಅವುಗಳ ಅಂದಾಜು ಮೊತ್ತ ಎಷ್ಟು ;

(ಉ) ಅನುಮೋದನೆ ನೀಡಲಾಗಿರುವ ಕೆರೆಗಳ ಕಾಮಗಾರಿ ಪ್ರಾರಂಭಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಕಾಮಗಾರಿ ಪ್ರಾರಂಭಿಸಲಾಗುವುದು ;

(ಊ) ಬಾಕಿ ಉಳಿದ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗೆ ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು ?

## ಬೆಳಗಾವಿ ಜಿಲ್ಲೆಯ ರಾಮಲಿಂಗೇಶ್ವರ ಏತ ನೀರಾವರಿ ಯೋಜನೆಗೆ ಸ್ವಾಧೀನಪಡಿಸಿಕೊಂಡ ರೈತರ ಜಮೀನಿಗೆ ಪರಿಹಾರ ವಿತರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೨ (೩೪೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ರಾಮಲಿಂಗೇಶ್ವರ ಏತ ನೀರಾವರಿ ಯೋಜನೆಗೆ ರೈತರಿಂದ ಸ್ವಾಧೀನಪಡಿಸಿಕೊಂಡ ಭೂಮಿಗೆ ಪರಿಹಾರ ಧನ ವಿತರಿಸದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಮಲಿಂಗೇಶ್ವರ ಏತ ನೀರಾವರಿ ಯೋಜನೆಗೆ ರೈತರಿಂದ ಎಷ್ಟು ಹೆಕ್ಟೇರ್ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಯಾವ ವರ್ಷದಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಇ) ಸ್ವಾಧೀನಪಡಿಸಿಕೊಂಡ ಭೂಮಿಗೆ ಸರ್ಕಾರವು ಪ್ರತಿ ಹೆಕ್ಟೇರ್‌ಗೆ ನಿಗಧಿಪಡಿಸಿದ ಪರಿಹಾರ ಧನವೆಷ್ಟು ; ರೈತರಿಗೆ ಎಷ್ಟು ಪರಿಹಾರ ಧನ ವಿತರಿಸಲಾಗಿದೆ ಮತ್ತು ಎಷ್ಟು ಹೆಕ್ಟೇರ್ ಭೂಮಿಗೆ ಪರಿಹಾರ ನೀಡಲಾಗಿದೆ ;

(ಈ) ಬಾಕಿ ಉಳಿದಿರುವ ಎಷ್ಟು ಹೆಕ್ಟೇರ್ ಭೂಮಿಗೆ ಎಷ್ಟು ಪರಿಹಾರ ಧನ ನೀಡಬೇಕಾಗಿದೆ ;

(ಉ) ಪರಿಹಾರ ಧನ ವಿತರಿಸಲು ವಿಳಂಬವಾಗಲು ಕಾರಣಗಳೇನು ; ಪರಿಹಾರ ಧನವನ್ನು ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು?

## ಬೆಳಗಾವಿ ಜಿಲ್ಲೆಯ ಹಿಡಕಲ್ ಜಲಾಶಯದಿಂದಾಗಿ ಮುಳುಗಡೆಯಾದ ೨೨ ಹಳ್ಳಿಗಳ ಜಮೀನಿಗೆ ಕಾಲುವೆಗಳ ಮೂಲಕ ನೀರು ಹರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೩ (೩೫೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಹಿಡಕಲ್ ಜಲಾಶಯ ನಿರ್ಮಾಣದಿಂದಾಗಿ ಹುಕ್ಕೇರಿ ತಾಲ್ಲೂಕಿನ ೨೨ ಹಳ್ಳಿಗಳು ಮುಳುಗಡೆಯಾದರೂ, ಈ ಜಲಾಶಯದ ಹತ್ತಿರದ ಜಮೀನುಗಳಿಗೆ ನೀರಾವರಿ ಸೌಲಭ್ಯ

ಕಲ್ಪಿಸುವ ಕೋಚರಿ ಏತ ನೀರಾವರಿ ಮತ್ತು ಕುರ್ಣಿ ಏತ ನೀರಾವರಿ ಯೋಜನೆಯ ಕಾಲುವೆಗಳಿಗೆ ನೀರು ಹರಿಯದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳು ಯಾವುವು ; ಈ ಯೋಜನೆಯ ಕಾಮಗಾರಿ ಯಾವಾಗ ಪ್ರಾರಂಭಿಸಲಾಗಿದೆ ; ಮತ್ತು ಯಾವಾಗ ಮುಕ್ತಾಯಗೊಳಿಸಲಾಗಿದೆ;

(ಇ) ಈ ಯೋಜನೆಗೆ ಭರಿಸಲಾದ ವೆಚ್ಚ ಎಷ್ಟು ;

(ಈ) ಕಾಲುವೆಗಳಿಗೆ ನೀರು ಹರಿಸದೇ ಇರಲು ಕಾರಣಗಳೇನು ;

(ಉ) ಪೂರ್ಣ ಪ್ರಮಾಣದಲ್ಲಿ ಕಾಲುವೆಯ ಅಂತ್ಯದ ಭಾಗದ ರೈತರಿಗೂ ನೀರು ತಲುಪಿಸುವ ಕುರಿತು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ ? (ವಿವರ ನೀಡುವುದು)

## ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ನೌಕರರಿಗೆ ಗ್ರಾಚ್ಯುಟಿ ಸಿಗದೇ ಇರುವ ವಿಚಾರ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೪ (೩೪೮) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ನೌಕರರಿಗೆ ಗ್ರಾಚ್ಯುಟಿ ಸೇರಿದಂತೆ ಇತರೆ ಸೌಲಭ್ಯಗಳ ಹಣ ನೌಕರರಿಗೆ ಸಿಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ಎಷ್ಟು ಜನ ನೌಕರರು ಸೇವೆ ಸಲ್ಲಿಸುತ್ತಿದ್ದಾರೆ ;

(ಈ) ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿನವರೆಗೆ (ಸೆಪ್ಟೆಂಬರ್ ೨೦೧೬ರವರೆಗೆ) ನಿವೃತ್ತರಾದ ನೌಕರರ ಸಂಖ್ಯೆ ಎಷ್ಟು ;

(ಉ) ನಿವೃತ್ತರಾದ ನೌಕರರಿಗೆ ನೀಡಬೇಕಾಗಿರುವ ಗ್ರಾಚ್ಯುಟಿ ಹಾಗೂ ಇತರೆ ಸೌಲಭ್ಯಗಳು ಸೇರಿ ನೀಡಬೇಕಾಗಿರುವ ಒಟ್ಟು ಹಣವೆಷ್ಟು;

(ಊ) ನಿವೃತ್ತ ನೌಕರರಿಗೆ ಯಾವ ಕಾಲಮಿತಿಯಲ್ಲಿ ಹಣ ಸಂದಾಯ ಮಾಡಲಾಗುವುದು ?

## ಮಂಡ್ಯ ಜಿಲ್ಲೆ, ಮದ್ದೂರು ಮತ್ತು ಮಳವಳ್ಳಿ ತಾಲ್ಲೂಕಿನ ಶಿಂಷಾ ನದಿಯ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೨೩೫ (೩೮೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ, ಮದ್ದೂರು ಮತ್ತು ಮಳವಳ್ಳಿ ತಾಲ್ಲೂಕಿನ ಶಿಂಷಾ ನದಿಯಿಂದ-ಕಡೆ ನಾಲಾ ಬಯಲಿಗೆ (Teyland) ನೀರುಣಿಸಲು ಎಷ್ಟು ನೀರಾವರಿ ಯೋಜನೆಗಳನ್ನು ಈವರೆವಿಗೂ ಮಂಜೂರು ಮಾಡಲಾಗಿದೆ ;

(ಆ) ಈ ಯೋಜನೆಗಳಲ್ಲಿ ಎಷ್ಟು ಏತ ನೀರಾವರಿ ಯೋಜನೆಗಳು ಪೂರ್ಣಗೊಂಡಿವೆ ಮತ್ತು ಪೂರ್ಣಗೊಂಡಿಲ್ಲದಿರುವ ಏತ ನೀರಾವರಿಗಳ ಸಂಖ್ಯೆ ಎಷ್ಟು ;

(ಇ) ಎಲ್ಲಾ ಏತ ನೀರಾವರಿಗಳಿಗೆ ಮಂಜೂರಾಗಿರುವ ಹಾಗೂ ಖರ್ಚಾಗಿರುವ ಹಣವೆಷ್ಟು ;

(ಈ) ಅಪೂರ್ಣಗೊಂಡಿರುವ ಯೋಜನೆಗಳನ್ನು ಎಷ್ಟು ದಿವಸಗಳಲ್ಲಿ ಪೂರ್ಣಗೊಳಿಸಲಾಗುವುದು ;

(ಉ) ಪೂರ್ಣಗೊಂಡಿರುವ ಯೋಜನೆಗಳಲ್ಲಿ ಪ್ರಸ್ತುತ ಚಾಲನೆಯಲ್ಲಿರುವ ಯೋಜನೆಗಳಾವುವು ;

(ಊ) ಚಾಲನೆಯಲ್ಲಿ ಇಲ್ಲದ ಯೋಜನೆಗಳನ್ನು ಪುನಃ ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ?

## ಕಳೆದ ಮೂರು ವರ್ಷಗಳಲ್ಲಿ ನೇಕಾರರಿಗೆ ನೀಡಿರುವ ಸೌಲಭ್ಯದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೩೬ (೩೯೬) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷದಲ್ಲಿ ರಾಜ್ಯದ ನೇಕಾರರಿಗೆ ಜವಳಿ ಇಲಾಖೆಯಲ್ಲಿ ನೀಡಿರುವ ಅನುದಾನವೆಷ್ಟು ;

(ಆ) ಈ ಅನುದಾನದಲ್ಲಿ ಕೈಮಗ್ಗ ನೇಕಾರರು ವಿದ್ಯುತ್ ಚಾಲಿತ ನೇಕರರು ಅಸಂಘಟಿತ ನೇಕಾರರಿಗೆ ಪ್ರತ್ಯೇಕವಾಗಿ ನೀಡಿರುವ ಅನುದಾನಗಳು ಯಾವುವು ; (ವಿವರ ನೀಡುವುದು)

(ಇ) ೩ ವರ್ಷದಲ್ಲಿ ಇದುವರೆಗೆ ನೇಕಾರರಿಗೆ ತೆಗೆದುಕೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು, ವಿಭಾಗವಾರು ವಿವರ ನೀಡುವುದು)

## ಹಿಂದುಳಿದ ಸಂಘ ಸಂಸ್ಥೆಗಳಿಗೆ ಜಮೀನು ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೩೭ (೪೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಹಿಂದುಳಿದ ಸಂಘ ಸಂಸ್ಥೆಗಳಿಗೆ ಜಮೀನು ನೀಡುವಂತೆ ಬಂದಿರುವ ಅರ್ಜಿಗಳೆಷ್ಟು ; (ಸಂಘ, ಸಂಸ್ಥೆಗಳವಾರು ವಿವರ ನೀಡುವುದು)

(ಆ) ಹಿಂದುಳಿದ ವರ್ಗಗಳಿಗೆ ಜಮೀನು ನೀಡಲು ಯಾವ ಜಾಗವನ್ನು ಗುರುತಿಸಲಾಗಿದೆ ; (ಸರ್ವೆ ನಂಬರ್ ಇತ್ಯಾದಿ ವಿವರ ನೀಡುವುದು)

(ಇ) ಯಾವ್ಯಾವ ಸಂಘಕ್ಕೆ ಎಷ್ಟೆಷ್ಟು ಜಾಗ ನೀಡಲು ಗುರುತಿಸಲಾಗಿದೆ;

(ಈ) ನೇಕಾರ ಜನಾಂಗದ ೧೦ ಉಪಪಂಗಡಗಳು ಅರ್ಜಿ ಸಲ್ಲಿಸಿದ್ದೂ, ಇದರಲ್ಲಿ ಎಲ್ಲಾ ಸಂಘಕ್ಕೆ ಎಷ್ಟು ಜಮೀನು ನೀಡಲಾಗಿದೆ ; (ವಿವರ ನೀಡುವುದು)

(ಉ) ಯಾವಾಗ ಆದೇಶ ಪತ್ರ ನೀಡಲಾಗುವುದು ?

## ಕೈಮಗ್ಗ ನೇಕಾರರಿಗೆ ೪೦% ಸಬ್ಸಿಡಿ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೩೮ (೩೯೯) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಮಗ್ಗ ನೇಕಾರರಿಗೆ ಉತ್ತೇಜನ ನೀಡಲು ಸರ್ಕಾರ ಇದುವರೆಗೆ ನೀಡುತ್ತಿರುವ ಸಬ್ಸಿಡಿ ಎಷ್ಟು ;

(ಆ) ರಾಜ್ಯ ಸರ್ಕಾರ/ಕೇಂದ್ರ ಸರ್ಕಾರದ ಸಬ್ಸಿಡಿ ಬಗ್ಗೆ ವಿವರ ನೀಡುವುದು ಯಾವಾಗಿನಿಂದ ಜಾರಿ ಮಾಡಿದೆ ಮತ್ತು ಎಷ್ಟು ಮೊತ್ತ ;

(ಇ) ಹಲವಾರು ವರ್ಷಗಳಿಂದ ರಾಜ್ಯದ ಬಡನೇಕಾರರು ೪೦% ಸಬ್ಸಿಡಿ ನೀಡಲು ಬೇಡಿಕೆ ಇಟ್ಟಿರುವುದು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಈ ವರ್ಷದಿಂದ ೪೦% ಸಬ್ಸಿಡಿ ನೀಡಿ ಬಡನೇಕಾರರಿಗೆ ಅನುಕೂಲ ಮಾಡಿ ಕೊಡಲಾಗುವುದೆ ?

## ವಿದ್ಯುತ್ ಮಗ್ಗಗಳ (ಸಬ್ಸಿಡಿ) ವಿತರಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೩೫ (೩೯೮) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿದ್ಯುತ್ ಮಗ್ಗ ನೇಕಾರರಿಗೆ ಸಬ್ಸಿಡಿ ಮಗ್ಗಗಳನ್ನು ವಿತರಿಸಲಾಗಿರುವುದು ಎಷ್ಟು ;

(ಆ) ಪ್ರತಿ ವರ್ಷ ಬಂದ ಬೇಡಿಕೆ ಎಷ್ಟು ; ವಿತರಣೆ ಮಾಡಿರುವುದೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಫಲಾನುಭವಿಗಳ ಹೆಸರು ವಿಳಾಸ ಸಮೇತ ವಿವರ ನೀಡುವುದು)

(ಇ) ಸಬ್ಸಿಡಿ ಮಗ್ಗಗಳನ್ನು ನೀಡಲು ಯಾವ ಮಾನದಂಡವನ್ನು ನೀಡಲಾಗಿದೆ ; ಆಯ್ಕೆ ಎಲ್ಲಿ ಮಾಡಲಾಗುವುದು ;

(ಈ) ಉಪನೇಕಾರರಿಗೆ ಈ ಸೌಲಭ್ಯ ಸಿಗದೆ ಅನೇಕ ದೂರು ಬಂದಿರುವುದು ಸರ್ಕಾರ ಗಮನ ಹರಿಸಿದೆಯೇ ;

(ಉ) ಹಾಗಿದ್ದಲ್ಲಿ, ಸರಿಪಡಿಸಲು ತೆಗೆದುಕೊಂಡಿರುವ ಕ್ರಮಗಳೇನು ?

## ಕೈಮಗ್ಗ ಅಭಿವೃದ್ಧಿ ನಿಗಮದ ನೇಕಾರರಿಗೆ ಅನುಕೂಲ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೪೦ (೩೯೭) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨–೩ ವರ್ಷದಲ್ಲಿ ಕೈಮಗ್ಗ ಅಭಿವೃದ್ಧಿ ನಿಗಮದ ನೇಕಾರರಿಗೆ ಪರಿವರ್ತನಾ ದರ ಕಡಿಮೆಯಾಗಿರುವ ಕಾರಣ ನೇಕಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ಮೂರು ವರ್ಷದಿಂದ ನೇಕಾರರಿಗೆ ಪರಿವರ್ತನಾ ದರ ಇತ್ತೀಚಿನ ದರಗಳಿಗೆ ಅನ್ವಯವಾಗುವಂತೆ ಏರಿಸಲಾಗಿದೆಯೇ ;

(ಇ) ನೇಕಾರರು ತಯಾರು ಮಾಡಿದ ಎಷ್ಟು ದಿವಸಗಳಲ್ಲಿ ಪರಿವರ್ತನಾ ದರ ನೀಡಲಾಗುವುದು ;

(ಈ) ತಿಂಗಳಾದರೂ ಹಣ ನೀಡದಿರುವುದರಿಂದ ನೇಕಾರರಿಗೆ ತೊಂದರೆ ಆಗುವುದಲ್ಲದೆ ನಿಗಮದ ಅಭಿವೃದ್ಧಿ ಕುಂಠಿತವಾಗುವುದಿಲ್ಲವೆ ?

## ವಾಹನ ದಟ್ಟಣೆಯಿಂದ ವಾಯು ಮಾಲಿನ್ಯ ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೧(೧೨೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರ, ಪಟ್ಟಣ ಪ್ರದೇಶಗಳ ಪ್ರಮುಖ ರಸ್ತೆಗಳಲ್ಲಿ ವಾಹನದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವಾಯು ಮಾಲಿನ್ಯ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ;

(ಆ) ಈ ವಾಯು ಮಾಲಿನ್ಯದಿಂದ, ಜನರ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮಗಳು ಉಂಟಾಗುತ್ತಿರುವುದರಿಂದ ಸರ್ಕಾರವು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳಾವುವು ?

## ಚಿಕ್ಕಮಗಳೂರು ಜಿಲ್ಲೆಯ ಆನೆಗಳ ದಾಳಿ ಆಗಾಗ ನಡೆಯುತ್ತಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೨ (೧೨೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ಭಾಗದಲ್ಲಿ ಆಗ್ಗಾಗ್ಗೆ ಆನೆಗಳು ದಾಳಿ ನಡೆಸುತ್ತಿವೆ ;

(ಆ) ಆನೆಗಳ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; ಅವರಿಗೆ ನೀಡಿದ ಪರಿಹಾರ ಧನ ಎಷ್ಟು ; ಉಂಟಾದ ಬೆಳೆ ನಷ್ಟ ಎಷ್ಟು; ಬೆಳೆ ನಷ್ಟ ಉಂಟಾದ ರೈತರಿಗೆ ಪರಿಹಾರ ನೀಡಲಾಗಿದೆಯೇ ;

(ಇ) ಆನೆಗಳ ಹಾವಳಿಯನ್ನು ನಿಯಂತ್ರಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಚಾಮರಾಜನಗರ ಮೈಸೂರು ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೩ (೩೨೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಯಲ್ಲಿ ಮೊದಲನೇ ಹಂತದಲ್ಲಿ ಯಾವ ಯಾವ ಕೆರೆಗಳಿಗೆ ಕಬಿನಿ ಮೂಲದಿಂದ ನೀರು ತುಂಬಿಸಲಾಗಿದೆ ; ಕಬಿನಿ ಜಲಾಶಯದಿಂದ ಕೆರೆಗಳಿಗೆ

ನೀರು ತುಂಬಿಸುವಂತೆ ರೈತರು ಜಲಾಶಯದ ಬಳಿ ಪ್ರತಿಭಟನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಎರಡನೇ ಹಂತದಲ್ಲಿ ಕಬಿನಿ ಮೂಲದಿಂದ ಇನ್ನೂ ಯಾವ ಯಾವ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗಳು ಚಾಲನೆಯಲ್ಲಿದೆ ; ಇದಕ್ಕೆ ಒದಗಿಸಿರುವ ಅನುದಾನ ಕಾರ್ಯಪ್ರಗತಿ ಕಾಮಗಾರಿಗಳು ಮುಕ್ತಾಯವಾಗಬಹುದಾದ ಅವಧಿ ಬಗ್ಗೆ ವಿವರ ಒದಗಿಸುವುದು ;

(ಇ) ಉಮ್ಮತ್ತೂರು ಕೆರೆಗೆ ನೀರು ತುಂಬಿಸುವ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಮೈಸೂರು ಜಿಲ್ಲೆಯಲ್ಲಿ ಯಾವ ಯಾವ ಕೆರೆಗಳಿಗೆ ಕಾವೇರಿ, ಕಬಿನಿ, ಲಕ್ಷ್ಮಣ ತೀರ್ಥ ನದಿ ಮೂಲದಿಂದ ನೀರು ತುಂಬಿಸುವ ಯೋಜನೆ ಇರುತ್ತದೆ ? (ಈ ಯೋಜನೆಯ ರೂಪುರೇಷೆಗಳು ಇದಕ್ಕೆ ಒದಗಿಸಿರುವ ಅನುದಾನ ಕಾಮಗಾರಿಯ ಪ್ರಗತಿ ವಿವರಗಳನ್ನು ಒದಗಿಸುವುದು)

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೪ (೩೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳನ್ನು ಬರಗಾಲ ಪೀಡಿತ ಪ್ರದೇಶ ಎಂದು

ಘೋಷಿಸಲಾಗಿದೆ ; ಬರಗಾಲ ಪರಿಹಾರ ಕಾರ್ಯಕ್ರಮಗಳಿಗಾಗಿ ಈ ಜಿಲ್ಲೆಗಳಿಗೆ ಮಂಜೂರು ಮಾಡಿ ಬಿಡುಗಡೆ ಮಾಡಿರುವ ಬರ ಪರಿಹಾರ ನಿಧಿಯ ಮೊತ್ತ ಎಷ್ಟು ;

(ಆ) ಈ ತಾಲ್ಲೂಕುಗಳಲ್ಲಿ ಯಾವ ಯಾವ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ; ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ ; ಈ ಯೋಜನೆಗಳಿಗೆ ಒದಗಿಸಿದ ಹಣ ಎಷ್ಟು ; (ವಿವರ ಒದಗಿಸುವುದು)

(ಇ) ಈ ಜಿಲ್ಲೆಗಳಲ್ಲಿ ಯಾವ ಯಾವ ಊರುಗಳಲ್ಲಿ ಒಟ್ಟು ಎಷ್ಟು ಗೋಶಾಲೆಗಳನ್ನು ತೆರೆಯಲು ಉದ್ದೇಶಿಸಲಾಗಿದೆ ; ಎಷ್ಟು ಮೇವನ್ನು ಸಂಗ್ರಹಿಸಲಾಗಿದೆ ; ಮೇವಿನ ಖರೀದಿ ಮತ್ತು ಸಂಗ್ರಹಕ್ಕೆ ಕೈಗೊಂಡಿರುವ ಕ್ರಮಗಳೇನು ?

## ಲಕ್ಷ್ಮಣ ತೀರ್ಥ ನದಿಯಿಂದ ಹುಣಸೂರು ತಾಲ್ಲೂಕಿನ ಕೆರೆಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫ (೩೧೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಂಗಾರಿನಲ್ಲಿ ಲಕ್ಷ್ಮಣ ತೀರ್ಥನದಿಯಿಂದ ಹನಗೋಡು ನಾಲೆಯ ಮೂಲಕ, ಉದ್ದೂರು ಬಲದಂಡೆ ಕಾಲುವೆಯಿಂದ ಯಾವ ಯಾವ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಇದೆ; ಈ ಯೋಜನೆಯ ರೂಪುರೇಷೆಗಳೇನು ; ಇದರ ಅಂದಾಜು ವೆಚ್ಚ ಎಷ್ಟು ; ಇದ್ದಕ್ಕಾಗಿ ಮಂಜೂರಾಗಿರುವ ಆಯವ್ಯಯ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೊಂಡು, ಯಾವ ಯಾವ ಕೆರೆಗಳಿಗೆ ನೀರು ಹರಿಸಲು ಕ್ರಮ ತೆಗೆದುಕೊಳ್ಳಲಾಗಿದೆ;

(ಆ) ಹನಗೋಡು ನಾಲೆಯ ಅಭಿವೃದ್ಧಿಗೆ ಮಂಜೂರಾಗಿರುವ ಆಯವ್ಯಯ ಎಷ್ಟು ; ಈ ನಾಲೆಯ ಅಭಿವೃದ್ಧಿಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಅವು ಯಾವ ಹಂತದಲ್ಲಿದೆ ; ಈ ನಾಲೆಯ ಮೂಲಕ ಯಾವ ಯಾವ ಕೆರೆಗಳಿಗೆ ನೀರು ಹರಿಸಲಾಗಿದೆ;

(ಇ) ಅಸ್ವಾಳು ತುರುಕನಕಟ್ಟೆ ಕೆರೆಯ ವಿಸ್ತೀರ್ಣ ಎಷ್ಟು ; ಈ ಕೆರೆಯ ಹೂಳು ತೆಗೆದು ಅಭಿವೃದ್ಧಿಪಡಿಸಿ, ನಾಲೆಯ ಮೂಲಕ ನೀರು ಹರಿಸಿ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ವೇಯರ್‌ಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೬ (೩೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಂಜೂರಾಗಿರುವ ವಿವಿಧ ದರ್ಜೆಯ ಸರ್ವೇಯರ್‌ಗಳ ಸಂಖ್ಯೆ ಎಷ್ಟು ; ಹಾಲಿ ಸೇವೆ ಸಲ್ಲಿಸುತ್ತಿರುವ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಸರ್ವೇಯರ್‌ಗಳ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆಯೇ ; ಖಾಲಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಆ) ಸರ್ವೇಯರ್‌ಗಳ ಕೊರತೆಯಿಂದ ರೈತಾಪಿ ಜನಗಳಿಗೆ ಅಗತ್ಯವಾದ ಸರ್ವೇ, ಪೋಡಿ ಮೊದಲಾದ ಕಾರ್ಯಗಳು ಕುಂಠಿತವಾಗಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅದೇ ರೀತಿ ಸರ್ಕಾರಿ, ಗೋಮಾಳ, ಖರಾಬ್, ಸರ್ಕಾರಿ

ಜಮೀನುಗಳು, ಕೆರೆಗಳ ಒತ್ತುವರಿ ಮೊದಲಾದ ಸರ್ವೇ ಕಾರ್ಯಕ್ಕೂ ತೊಂದರೆಯಾಗಿ ಅತಿಕ್ರಮಣಗಳು ಜಾಸ್ತಿಯಾಗುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೂಡಲೇ ಸಾಕಷ್ಟು ಸಂಖ್ಯೆಯಲ್ಲಿ ಸರ್ವೇಯರ್‌ಗಳನ್ನು ನೇಮಕಾತಿ ಮಾಡಿ ಇಂತಹ ಪ್ರಮುಖ ಕಾರ್ಯಕ್ರಮಗಳ ನಿರ್ವಹಣೆಗೆ ಆದ್ಯತೆ ನೀಡಲಾಗುವುದೇ ;

(ಇ) ರಾಜ್ಯದಲ್ಲಿ ಇತ್ಯರ್ಥಕ್ಕೆ ಬಾಕಿ ಉಳಿದಿರುವ ಪೋಡಿ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು) ಪೋಡಿ ಮುಕ್ತ ತಾಲ್ಲೂಕುಗಳ ಯೋಜನೆ ಜಾರಿಯಲ್ಲಿದೆಯೇ ; ಯಾವ ಯಾವ ಜಿಲ್ಲೆಯಲ್ಲಿ, ಯಾವ ಯಾವ ತಾಲ್ಲೂಕುಗಳನ್ನು ಪೋಡಿ ಮುಕ್ತ ತಾಲ್ಲೂಕುಗಳು ಎಂದು ಘೋಷಿಸಲಾಗಿದೆ ?

## ಬಗರ್‌ಹುಕುಂ ಯೋಜನೆಯಲ್ಲಿ ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿ ಸಲ್ಲಿಕೆಯಾದ ಅರ್ಜಿಗಳ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೭ (೩೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿ (ಅಪರ ಯಲಹಂಕ) ಬಗರ್‌ಹುಕುಂ ಯೋಜನೆಯಲ್ಲಿ ಸಲ್ಲಿಕೆಯಾದ ಅರ್ಜಿಗಳು (ನಮೂನೆ–೫೩) ಎಷ್ಟು ;

(ಆ) ಇವುಗಳಲ್ಲಿ ಬಾಕಿಯಿರುವ ಅರ್ಜಿಗಳು ಎಷ್ಟು ;

(ಇ) ಬಾಕಿಯಿರುವ ಅರ್ಜಿಗಳ ವಿಲೇವಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಮೀಸಲು ಅರಣ್ಯ ಘೋಷಣೆ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮ (೩೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಲ್ಲಾ ಮೀಸಲು ಅರಣ್ಯಗಳನ್ನು ಘೋಷಿಸಲು ಸರ್ಕಾರ ಅದೇಶ ಹೊರಡಿಸಿದೆಯೇ ;

(ಆ) ಇನ್ನು ಎಷ್ಟು ಮೀಸಲು ಅರಣ್ಯಗಳಿಗೆ ಸರ್ಕಾರ ಆದೇಶ ಹೊರಡಿಸುವುದು ಬಾಕಿ ಇರುತ್ತದೆ ;

(ಇ) ಸರ್ಕಾರದ ಆದೇಶಗಳನ್ನು ಹೊರಡಿಸದೇ ಇರುವುದರಿಂದ ಸರ್ಕಾರಕ್ಕೆ ಏನಾದರೂ ನಷ್ಟ ಉಂಟಾಗಿದೆಯೇ ;

(ಈ) ಹಾಗಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಪರಿಹಾರ ಕ್ರಮಗಳೇನು ?

## ವನ್ಯ ಜೀವಿ ಸಂರಕ್ಷಣಾ ಸಿಬ್ಬಂದಿಗಳ ವಾಹನ ವ್ಯವಸ್ಥೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯ (೩೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯಲ್ಲಿ ಮುಂಚೂಣಿ ಸಿಬ್ಬಂದಿಗಳಿಗೆ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಗಳ ಸಲುವಾಗಿ ವಾಹನಗಳನ್ನು ಒದಗಿಸುವ ಕಾರ್ಯಕ್ರಮವು ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಹಂಚಿಕೆ ಮಾಡಿರುವ ವಾಹನಗಳ ಸಂಖ್ಯೆ ಎಷ್ಟು ;

(ಇ) ಇನ್ನು ಎಷ್ಟು ಸಿಬ್ಬಂದಿಗಳಿಗೆ ವಾಹನಗಳನ್ನು ನೀಡಬೇಕಾಗಿರುತ್ತದೆ;

(ಈ) ಈ ವಾಹನಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿ ಹುಲಿ ಮತ್ತು ಆನೆಗಳ ಸಂರಕ್ಷಣೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೦ (೩೨೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕವು ಹುಲಿ ಮತ್ತು ಆನೆಗಳ ಸಂಖ್ಯೆಯಲ್ಲಿ ರಾಷ್ಟ್ರದಲ್ಲಿಯೇ ಪ್ರಥಮ ಸ್ಥಾನದಲ್ಲಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಹುಲಿ ಮತ್ತು ಆನೆಗಳ ಸಂತತಿಯ ಸಂರಕ್ಷಣೆಗಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಹುಲಿ ಮತ್ತು ಆನೆಗಳ ಸಂತತಿಯ ಸಂರಕ್ಷಣೆಗೆ ಏನಾದರೂ ಅಡಚಣೆಗಳು ಇವೆಯೇ ;

(ಈ) ಇದ್ದರೆ ಅವುಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶ್ರೀ ರಾಮಚಂದ್ರ ಸ್ವಾಮಿ ದೇವಸ್ಥಾನ, ಶ್ರೀರಾಂಪುರ ಬೆಂಗಳೂರು ಹಣದ ದುರ್ವಿನಿಯೋಗ ಮತ್ತು ದುರುಪಯೋಗದ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳಿಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೧ (೩೭೫+೩೫೫) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಶ್ರೀರಾಂಪುರದಲ್ಲಿರುವ ೧೯೨೯ರಲ್ಲಿ ಸ್ಥಾಪಿತವಾಗಿರುವ ಶ್ರೀ ರಾಮಚಂದ್ರ ಸ್ವಾಮಿ ದೇವಾಲಯವು ಮುಜರಾಯಿ ವ್ಯಾಪ್ತಿಗೆ ಒಳಪಟ್ಟಿದೆಯೇ ಅಥವಾ ಖಾಸಗಿಯಾಗಿದೆಯೇ ; ಖಾಸಗಿಯಾಗಿದ್ದಲ್ಲಿ, ಟ್ರಸ್ಟ್‌ನ ಬೈಲಾ ಕಾಪಿ ಒದಗಿಸುವುದು ;

(ಆ) ಟ್ರಸ್ಟ್‌ನವರು ೨೦೧೫ರಲ್ಲಿ ಭಕ್ತಾಧಿಗಳಿಂದ ಕೋಟ್ಯಾಂತರ ರೂಪಾಯಿ ಹಣವನ್ನು ಸಂಗ್ರಹಿಸಿ ನವೀಕರಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನವೀಕರಣಕ್ಕೆ ಬಿಬಿಎಂಪಿ ಯಿಂದ ಮಂಜೂರಾತಿಯಾಗಿರುವ ನಕಾಶೆಯನ್ನು ನೀಡುವುದು ;

(ಇ) ಸದರಿ ಟ್ರಸ್ಟ್‌ನವರು ಮಾಡಿರುವ ನವೀಕರಣವು ದೇವಾಲಯ ವಾಸ್ತುಶಾಸ್ತ್ರಕ್ಕೆ ವ್ಯತಿರಿಕ್ತವಾಗಿದ್ದು, ಇದರಿಂದ ಮಹಾದೋಷವುಂಟಾಗಿದೆಯೆಂದು ಮುಜರಾಯಿ ಇಲಾಖೆ ಆಗಮಶಾಸ್ತ್ರ ವಿದ್ವಾಂಸರು ಇಲಾಖೆಗೆ ವರದಿ ನೀಡುವುದು ನಿಜವೇ; (ವರದಿಯನ್ನು ಒದಗಿಸುವುದು)

(ಈ) ಭಕ್ತಾಧಿಗಳು ಶ್ರದ್ಧಾಭಕ್ತಿಯಿಂದ ನೀಡಿರುವ ದೇಣಿಗೆಯನ್ನು ಈ ರೀತಿಯಾಗಿ ದುರ್ವಿನಿಯೋಗ ಮತ್ತು ದುರುಪಯೋಗ ಮಾಡಿರುವ ಹಾಲಿ ಟ್ರಸ್ಟ್‌ನ್ನು ಮುಜರಾಯಿ ಕಾಯ್ದೆ ಅನುಸಾರ ವಜಾ ಮಾಡಿ ಬೇರೆ ಟ್ರಸ್ಟ್‌ಗೆ ಅಥವಾ ಸರ್ಕಾರವೇ ವಹಿಸಿಕೊಳ್ಳಲು ಸರ್ಕಾರಕ್ಕೆ ಅಡ್ಡಿ ಅಥವಾ ಏನಾದರೂ ತೊಂದರೆ ಇದೆಯೇ ?

## ತಾಲ್ಲೂಕು ಕಛೇರಿಯಲ್ಲಿ ಕಾಣೆಯಾಗಿರುವ ಕಡತಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೨ (೧೯೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ತಾಲ್ಲೂಕು ತಹಶೀಲ್ದಾರರ ಕಛೇರಿಗಳಲ್ಲಿ ನಮೂನೆ ೫೦, ೫೩ ಇತರೆ ಭೂ ಮಂಜೂರಾತಿ ಕಡತಗಳು ಕಾಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಕಾಣೆಯಾದ ಕಡತಗಳ ಸಂಖ್ಯೆವಾರು, ಗ್ರಾಮವಾರು ವಿವರ ನೀಡುವುದು)

(ಆ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕಾಣೆಯಾದ ಕಡತಗಳಿಗೆ ಬದಲಿಯಾಗಿ ಹೊಸ ಕಡತಗಳನ್ನು ತಯಾರಿಸಿದ ಪ್ರಕರಣಗಳೆಷ್ಟು ; ಇವುಗಳ ನೈಜತೆಯ ಬಗ್ಗೆ ಇಲಾಖೆ ಖಾತ್ರಿಪಡಿಸಿದ ಮಾನದಂಡವೇನು ;

(ಈ) ಈ ರೀತಿ ಕಡತಗಳು ಕಾಣೆಯಾದ ಪ್ರಕರಣದಲ್ಲಿ ಯಾರನ್ನು ಹೊಣೆಗಾರರನ್ನಾಗಿಸಲಾಗಿದೆ ಮತ್ತು ಅವರ ಮೇಲೆ ಕೈಗೊಂಡ ಕ್ರಮವೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಎತ್ತಿನ ಹೊಳೆ ಯೋಜನೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೩ (೯೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸುತ್ತಿರುವ ಎತ್ತಿನ ಹೊಳೆ ಯೋಜನೆ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೆ ಟೆಂಡರ್ ಮೂಲಕ ನಿರ್ಮಿಸಲಾದ ಕಾಮಗಾರಿಯ ಹೆಸರು, ಅಂದಾಜು ಮೊತ್ತ, ಅಂದಾಜು ಪಟ್ಟಿ, ಮಂಜೂರಾತಿ ಸಂಖ್ಯೆ, ದಿನಾಂಕ, ಟೆಂಡರ್ ಮೊತ್ತ, ಗುತ್ತಿಗೆ ಕರಾರು ಸಂಖ್ಯೆ ಮತ್ತು ದಿನಾಂಕ, ಗುತ್ತಿಗೆ ಕರಾರು ಮೊತ್ತ, ನಿಗದಿತ ಗುತ್ತಿಗೆ ಅವಧಿ ಕಾಮಗಾರಿ ಪ್ರಾರಂಭ ದಿನಾಂಕ, ಕಾಮಗಾರಿ ಮುಕ್ತಾಯಗೊಳಿಸಬೇಕಾದ ದಿನಾಂಕ, ನಿರ್ವಹಿಸಿದ ಗುತ್ತಿಗೆದಾರರ ಹೆಸರು ಮತ್ತು ವಿಳಾಸ, ಹೆಚ್ಚುವರಿ ಆರ್ಥಿಕ ಮೊತ್ತ (efi)ಇದ್ದಲ್ಲಿ ಪೂರಕ ಕರಾರು ಒಪ್ಪಂದ ಮತ್ತು ದಿನಾಂಕ, ಒಟ್ಟು ಗುತ್ತಿಗೆ ಕರಾರು ಮೊತ್ತ ವಿಸ್ತರಿತ ಗುತ್ತಿಗೆಯ ಅವಧಿಗಳು ಕಾಮಗಾರಿ ಪೂರ್ಣಗೊಂಡ ದಿನಾಂಕ ಇಲ್ಲಿಯತನಕ ಪಾವತಿಸಿದ ಮೊತ್ತ ಮತ್ತು ಷರಗಳ ವಿವರಗಳನ್ನು ತಿಳಿಸುವುದು ;

(ಆ) ಯೋಜನೆಯ ಪ್ರಾರಂಭದಿಂದ ಇಲ್ಲಿಯತನಕ ಭೂಸ್ವಾಧೀನ ಪ್ರಕ್ರಿಯೆ ನಡೆಸಿ, ಪ್ರಾರಂಭಿಸಿದ ಕಾಮಗಾರಿಗಳು ಎಷ್ಟು ; ಹಾಗೂ

ಭೂಸ್ವಾಧೀನ ಮಾಡದೇ ಪ್ರಾರಂಭಿಸಿದ ಕಾಮಗಾರಿಗಳು ಎಷ್ಟು ; ಅರಣ್ಯ ಭೂಮಿ ಸ್ವಾಧೀನತೆ ಪಡೆದ ಪ್ರಕರಣಗಳು ಮತ್ತು ಸ್ವಾಧೀನತೆಗೆ ಬಾಕಿಯಿರುವ ಪ್ರಕರಣಗಳು ಎಷ್ಟು ; (ಎಕರೆವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ಯೋಜನೆಯನ್ನು ಪೂರ್ಣಗೊಳಿಸುವ ದಿನಾಂಕ ಯಾವುದು?

## ಕಿಂಡಿ ಅಣೆಕಟ್ಟುಗಳ ನಿರ್ವಹಣೆಯನ್ನು ಗ್ರಾಮ ಪಂಚಾಯತಿಗೆ ವರ್ಗಾಯಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೪ (೧೯೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ಮಿಸಲ್ಪಟ್ಟ ಕಿಂಡಿ ಅಣೆಕಟ್ಟುಗಳ ನಿರ್ವಹಣೆ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರಣವೇನು ;

(ಆ) ಲಕ್ಷಾಂತರ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳ ನಿರ್ವಹಣೆಯಿಲ್ಲದೇ ಸಕಾಲದಲ್ಲಿ ರೈತರಿಗೆ ಉಪಯೋಗಕ್ಕೆ ಬಾರದೇ ಹಲಗೆಗಳು ನಾಪತ್ತೆಯಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗಮನಿಸಿದ್ದಲ್ಲಿ, ಪರ್ಯಾಯ ಕ್ರಮವೇನು ;

(ಇ) ಈ ಕಿಂಡಿ ಅಣೆಕಟ್ಟುಗಳ ನಿರ್ವಹಣೆಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗೆ ನೀಡಲು ಇಲಾಖೆಗೆ ಇರುವ ಕಾನೂನು ತೊಡಕುಗಳೇನು ?

# ಕರ್ನಾಟಕ ನೀರಾವರಿ ನಿಗಮದಿಂದ ರೈತರಿಗೆ ಉಪಯೋಗಬಾರದ ಕಾಮಗಾರಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೫ (೧೯೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ಯೋಜನಾ ಪ್ರದೇಶದ ಸೌಪರ್ಣಿಕಾ ನದಿಗೆ ಅಡ್ಡಲಾಗಿ, ಗುಂಡೂರಿನಲ್ಲಿ ನಿರ್ಮಿಸಲಾದ ೯೬.೨ ಕೋಟಿ ವೆಚ್ಚದ ೨೫ ಚೆಕ್ ಡ್ಯಾಂಗಳು ಕಳಪೆ ಕಾಮಗಾರಿ ಮತ್ತು ನಿರ್ವಹಣೆ ಸರಿಯಾಗಿರದ ಕಾರಣದಿಂದ ರೈತರಿಗೆ ಉಪಯೋಗಕ್ಕೆ ಬಾರದೇ ಹಾಗೂ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು; ಇಲ್ಲವಾದಲ್ಲಿ ಪರಿಶೀಲಿಸಿ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದೇ ;

(ಆ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ಯೋಜನಾ ಪ್ರದೇಶದ ಬಳ್ಕೂರಿನ ಉಪ್ಪು ನೀರು ಕಿಂಡಿ ಅಣೆಕಟ್ಟು ಮತ್ತು ಹಚ್ಚಿಕುದ್ರು ಕುಡಿಯುವ ನೀರಿನ ಯೋಜನೆಗೆ ರೂ. ೪೯.೫೬ ಕೋಟಿ ವೆಚ್ಚವಾಗಿದ್ದು, ಡ್ಯಾಂಗೆ ಬಾಗಿಲನ್ನು ಹಾಕದೆ, ಮತ್ತು ಕುಡಿಯುವ ನೀರನ್ನು ಒದಗಿಸದೆ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು; ಇಲ್ಲವಾದಲ್ಲಿ ಪರಿಶೀಲಿಸಿ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದೇ ;

(ಇ) ಕಳೆದ ಮೂರು ವರ್ಷಗಳಲ್ಲಿ ಗುಂಡೂರಿನ ಈ ೨೫ ಚೆಕ್ ಡ್ಯಾಂಗಳು ಸೇರಿ ವಾರ್ಷಿಕ ನಿರ್ವಹಣಾ ವೆಚ್ಚ ಎಷ್ಟು; (ವರ್ಷವಾರು ಮಾಹಿತಿಯನ್ನು ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಹಚ್ಚಿಕುದ್ರು ಕುಡಿಯುವ ನೀರಿನ ಯೋಜನೆ ಮತ್ತು ಬಳ್ಳೂರಿನ ಉಪ್ಪು ನೀರಿನ ಕಿಂಡಿ ಅಣೆಕಟ್ಟಿನ ವಾರ್ಷಿಕ ನಿರ್ವಹಣಾ ವೆಚ್ಚವೆಷ್ಟು ? (ವರ್ಷವಾರು ಮಾಹಿತಿಯನ್ನು ಒದಗಿಸುವುದು)

## ಭದ್ರಾ ಮೇಲ್ದಂಡೆ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೬ (೩೦೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭದ್ರಾ ಮೇಲ್ದಂಡೆ ಯೋಜನೆಯಡಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳು ಕುಂಠಿತವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು; ಯಾವ ವರ್ಷದಲ್ಲಿ ಯಾವ ಕಾಮಗಾರಿಗಳು ಮಂಜೂರಾಗಿವೆ; ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ ; (ಕಾಮಗಾರಿಗಳವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ಮುಖ್ಯ ಉದ್ದೇಶವೇನು; ಈ ಯೋಜನೆಯಿಂದ ತರೀಕೆರೆ ಮತ್ತು ಕಡೂರು ತಾಲ್ಲೂಕುಗಳಿಗೆ ಆಗುವ ಪ್ರಯೋಜನವೇನು ; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಯಾವುದಾದರೂ ಹೊಸ ಯೋಜನೆಗೆ ಡಿ.ಪಿ.ಆರ್. ಸಿದ್ಧವಾಗಿದೆಯೇ ? (ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯ ಅನುದಾನ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೭ (೩೦೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಅರಣ್ಯ ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಆ) ಯಾವ ಯಾವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ; ಸದರಿ ಅನುದಾನವು ಸದ್ಬಳಕೆಯಾಗಿದೆಯೇ; ಪೂರ್ಣಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು; (ಕಾಮಗಾರಿಗಳವಾರು ಸಂಪೂರ್ಣ ವಿವರ ನೀಡುವುದು)

(ಇ) ಕೋಟಿವೃಕ್ಷ ಗಿಡಗಳನ್ನು ನೆಡಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಜಿಲ್ಲೆಯ ಯಾವ ಯಾವ ಭಾಗಗಳಲ್ಲಿ ಈ ಗಿಡಗಳನ್ನು ನೆಡಲಾಗಿದೆ ? (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ಬರಪೀಡಿತ ಪ್ರದೇಶಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೮ (೩೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಈ ಬಾರಿ ಬರಪೀಡಿತ ಪ್ರದೇಶಗಳೆಂದು ಘೋಷಿಸಿರುವ ತಾಲ್ಲೂಕುಗಳು ಯಾವುವು ;

(ಆ) ಸದರಿ ಬರ ಪೀಡಿತ ತಾಲ್ಲೂಕುಗಳಿಗೆ ಬಿಡುಗಡೆ ಮಾಡಿದ ಬೆಳೆ ಪರಿಹಾರ ಧನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಕೇಂದ್ರದಿಂದ ರಾಜ್ಯಕ್ಕೆ ಬಂದಿರುವ ಬೆಳೆ ಪರಿಹಾರವೆಷ್ಟು; ಇದರಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ನೀಡಿರುವ ಪರಿಹಾರದಲ್ಲಿ ಕೇಂದ್ರದ ಮತ್ತು ರಾಜ್ಯದ ಪಾಲೆಷ್ಟು ; (ವಿವರ ನೀಡುವುದು)

(ಈ) ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; ಸದರಿ ರೈತರ ಕುಟುಂಬಕ್ಕೆ ಒದಗಿಸಿರುವ ಪರಿಹಾರ ಧನವೆಷ್ಟು? (ರೈತರ ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

## ಸಣ್ಣ ಕೆರೆಗಳ ರಕ್ಷಣೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೫ (೩೩೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಸಣ್ಣ ಕೆರೆಗಳನ್ನು ರಕ್ಷಿಸಲು ಕಳೆದ ಮೂರು ವರ್ಷಗಳಿಂದ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಗ್ರಾಮ ಪಂಚಾಯತಿವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಈವರೆಗೆ ಈ ಜಿಲ್ಲೆಗಳ ಸಣ್ಣ ಕೆರೆಗಳನ್ನು ಉಳಿಸಲು ಹಾಗೂ ಅಭಿವೃದ್ಧಿಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಇದಕ್ಕಾಗಿ ನಿಗಧಿಪಡಿಸಿರುವ ಅನುದಾನ ಎಷ್ಟು; (ಗ್ರಾಮ ಪಂಚಾಯತಿವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಈವರೆಗೆ ಎಷ್ಟು ಸಣ್ಣ ಕೆರೆಗಳನ್ನು ಉಳಿಸಿ ಅಭಿವೃದ್ಧಿಗೊಳಿಸಲಾಗಿದೆ; ಎಷ್ಟು ಹಣ ಖರ್ಚು ಮಾಡಲಾಗಿದೆ ? (ಗ್ರಾಮ ಪಂಚಾಯತಿವಾರು, ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೦ (೩೩೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಈವರೆಗೆ ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು; (ವರ್ಷವಾರು, ಗ್ರಾಮ ಪಂಚಾಯತಿವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಕಳೆದ ಮೂರು ವರ್ಷಗಳಿಂದ ಈವರೆಗೆ ಈ ಜಿಲ್ಲೆಗಳಿಗೆ ನಿಗದಿಪಡಿಸಿರುವ ಅನುದಾನ ಎಷ್ಟು; ಖರ್ಚಾಗಿರುವ ಹಣ ಎಷ್ಟು; ಉಳಿಕೆಯಾದ ಹಣ ಎಷ್ಟು; (ಕಾಮಗಾರಿವಾರು, ವರ್ಷವಾರು, ಗ್ರಾಮ ಪಂಚಾಯಿತಿವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಕಾಮಗಾರಿಗಳಲ್ಲಿ ಮುಕ್ತಾಯಗೊಂಡ ಕಾಮಗಾರಿಗಳು ಯಾವುವು; ಬಾಕಿ ಉಳಿದ ಕಾಮಗಾರಿಗಳು ಯಾವುವು; ಪ್ರಗತಿಯಲ್ಲಿರುವ ಕಾಮಗಾರಿಗಳಾವುವು; ಬಾಕಿ ಉಳಿದ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು? (ಕಾಮಗಾರಿವಾರು ಗ್ರಾಮ ಪಂಚಾಯತಿವಾರು, ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಹನಿ ನೀರಾವರಿ ಪದ್ಧತಿಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೧ (೩೩೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಈವರೆಗೆ ಹನಿ ನೀರಾವರಿ ಪದ್ಧತಿ ಅಳವಡಿಸಲು ಬಿಡುಗಡೆಯಾದ ಅನುದಾನ ಎಷ್ಟು; (ವರ್ಷವಾರು ಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಹನಿ ನೀರಾವರಿ ಪದ್ಧತಿಯಿಂದ ಯಾವ ಯಾವ ಬೆಳೆಗಳಿಗೆ ಹನಿ ನೀರಾವರಿ ಪದ್ಧತಿ ಅಳವಡಿಸಲು ಸರ್ಕಾರದಿಂದ ಪ್ರೋತ್ಸಾಹಧನ ನೀಡಲಾಗಿದೆ? (ಬೆಳೆಗಳವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಸಾಮಾಜಿಕ ಅರಣ್ಯ ಕಾರ್ಯಕ್ರಮದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೨ (೩೩೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆ ವತಿಯಿಂದ ಸಾಮಾಜಿಕ ಅರಣ್ಯ ಕಾರ್ಯಕ್ರಮಗಳಿಗಾಗಿ ಕಳೆದ ಮೂರು ವರ್ಷಗಳಿಂದ ನಿಗಧಿಪಡಿಸಿರುವ ಅನುದಾನವೆಷ್ಟು; (ಗ್ರಾಮ ಪಂಚಾಯತಿವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಜಿಲ್ಲೆಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ; ಬಾಕಿ ಉಳಿದಿರುವ ಹಣ ಎಷ್ಟು; (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಸಸಿಗಳನ್ನು ನೆಡಲಾಗಿದೆ; ಯಾವ ಸ್ಥಳಗಳಲ್ಲಿ ಸಸಿಗಳನ್ನು ನೆಡಲಾಗಿದೆ; ಇದಕ್ಕಾಗಿ ನಿಗಧಿಪಡಿಸಿರುವ ನಿರ್ವಹಣಾ ವೆಚ್ಚ ಎಷ್ಟು? (ಗ್ರಾಮ ಪಂಚಾಯತಿವಾರು, ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಸಾಮಾಜಿಕ ಭದ್ರತೆ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೩ (೩೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾಮಾಜಿಕ ಭದ್ರತಾ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ವಿವಿಧ ವರ್ಗಗಳ ಮಾಸಾಶನಗಳು ಯಾವುವು; (ಲಿಂಗವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಈವರೆಗೆ ಮಾಸಾಶನ ಮಂಜೂರಾತಿಗೆ ಸಲ್ಲಿಕೆಯಾಗಿರುವ ಅರ್ಜಿಗಳು ಎಷ್ಟು; ಬಾಕಿ ಉಳಿದಿರುವ ಅರ್ಜಿಗಳು ಎಷ್ಟು; ಅವುಗಳು ಯಾವುವು; (ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಮಾಸಾಶನಕ್ಕೆ ಮಂಜೂರಾತಿಗೆ ಬಾಕಿ ಉಳಿದಿರುವ ಅರ್ಜಿಗಳನ್ನು ಕನಿಷ್ಟ ಕಾಲಮಿತಿಯಲ್ಲಿ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ತ್ವರಿತ ಕ್ರಮಗಳೇನು ? (ವಿವರ ನೀಡುವುದು)

## ಆಂಧ್ರ ಸರ್ಕಾರವು ಗುಂಡ್ರೆವುಲ ಬಳಿ ಅಣೆಕಟ್ಟು ನಿರ್ಮಾಣ ಕೈಗೆತ್ತಿಕೊಳ್ಳುವುದರಿಂದ ರಾಯಚೂರು ರೈತರ ಗಡಿ ಭಾಗದ ಜಮೀನು ಮುಳುಗಡೆ ಭೀತಿ ಎದುರಿಸುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೬೪ (೨೯೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಂಗಭದ್ರಾ ನದಿಗೆ ಕರ್ನೂಲ್ ಜಿಲ್ಲೆಯ ಗುಂಡ್ರೆವುಲ ಬಳಿ ಅಣೆಕಟ್ಟು ಯೋಜನೆಯನ್ನು ಆಂಧ್ರ ಸರ್ಕಾರವು ಕೈಗೆತ್ತಿಗೊಂಡಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಈ ಯೋಜನೆಯ ಕುರಿತು ಕರ್ನಾಟಕ ಸರ್ಕಾರದ ಬಳಿ ಇರುವ ಮಾಹಿತಿಯನ್ನು ನೀಡುವುದು ;

(ಇ) ಇದರಿಂದಾಗಿ ರಾಯಚೂರಿನ ಗಡಿ ಭಾಗದ ಹಳ್ಳಿಗಳು ಮುಳುಗಡೆಯಾಗುವ ಸಾಧ್ಯತೆಯಿರುವುದು ನಿಜವೇ ;

(ಈ) ಇದ್ದಲ್ಲಿ, ಯಾವ ಯಾವ ಹಳ್ಳಿಗಳು ಮತ್ತು ಎಷ್ಟು ಪ್ರಮಾಣದ ಜಮೀನು ಮುಳುಗಡೆಯ ಭೀತಿಯನ್ನು ಎದುರಿಸುತ್ತಿದೆ ;

(ಉ) ಈ ಸಂಬಂಧ ಸದರಿ ರೈತರ ಹಿತ ಕಾಪಾಡಲು ಕೈಗೊಂಡಿರುವ ಕ್ರಮಗಳೇನು ?

## ಅರಣ್ಯ ಇಲಾಖೆಯಿಂದ ಗಿಡಗಳನ್ನು ನೆಟ್ಟ ನಂತರ ನಿರ್ವಹಣೆ ಮತ್ತು ಪರಿಶೀಲನೆಯನ್ನು ದಾಖಲಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೬೫ (೨೯೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಅರಣ್ಯ ವೃದ್ಧಿಸುವ ಸಂಬಂಧ ಎಷ್ಟು ಗಿಡಗಳನ್ನು ನೆಡಲಾಗಿದೆ ;

(ಆ) ಇವುಗಳಲ್ಲಿ ಸಮರ್ಪಕ ಪೋಷಣೆ ಇಲ್ಲದೆ ಹಾಳಾದ ಗಿಡಗಳೆಷ್ಟು ; (ಹಾಳಾದ ಗಿಡಗಳ ಅಂದಾಜು ವಿವರ ನೀಡುವುದು)

(ಇ) ನೆಟ್ಟ ಗಿಡಗಳನ್ನು ಪೋಷಿಸುವ ವಿಚಾರದಲ್ಲಿ ಯಾವ ಮಟ್ಟದ ಅಧಿಕಾರಿಗಳು ಮಾನಿಟರ್ ಮಾಡುತ್ತಾರೆ; ಎಷ್ಟು ದಿನಗಳಿಗೊಮ್ಮೆ ಪರಿಶೀಲಿಸುತ್ತಾರೆ ;

(ಈ) ಗಿಡಗಳ ಪೋಷಣೆಯ ಪರಿಶೀಲನೆಯನ್ನು ದಾಖಲಿಸುವ ಪದ್ಧತಿ ಇದೆಯೇ ?

## "ಪೋಡಿ ಮುಕ್ತ ಗ್ರಾಮ" ಯೋಜನೆಯ ಉದ್ದೇಶ ಹಾಗೂ ಫಲಶೃತಿ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೬೬ (೨೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಪೋಡಿ ಮುಕ್ತ ಗ್ರಾಮ" ಯೋಜನೆಯ ಉದ್ದೇಶಗಳೇನು; ಸದರಿ ಯೋಜನೆಯನ್ನು ಪ್ರಯೋಜಾತ್ಮಕವಾಗಿ ಪ್ರಾರಂಭಿಸಿದ್ದು ಯಾವಾಗ; ಎಷ್ಟು ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲಾಯಿತು; (ವಿವರ ನೀಡುವುದು)

(ಆ) ಪ್ರಸ್ತುತ ಸದರಿ ಯೋಜನೆಯ ಫಲಶೃತಿಯ ಕುರಿತು ವಿವರ ನೀಡುವುದು ;

(ಇ) ಈ ಯೋಜನೆಯನ್ನು ಮುಂದುವರೆಸುವ ಕುರಿತು ಸರ್ಕಾರದ ನಿಲುವೇನು ?

## ತೆಲಂಗಾಣದ ಸಂಗಂಬಂಡ ಜಲಾಶಯದ ಹಿನ್ನೀರಿನಿಂದಾಗಿ ಗುರುಮಿಠಕಲ್ ಕ್ಷೇತ್ರದ ಜಮೀನುಗಳಿಗೆ ನೀರು ನುಗ್ಗಿ ಬೆಳೆ ಹಾನಿಯಾಗಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೬೭ (೨೯೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೆಲಂಗಾಣ ರಾಜ್ಯವು ಜುರಾಲ ಜಲಾಶಯದ ಹಿನ್ನೀರನ್ನು ಸಂಗಂಬಂಡ ಜಲಾಶಯಕ್ಕೆ ಲಿಫ್ಟ್ ಮೂಲಕ ಹರಿಸುತ್ತಿರುವ ಪರಿಣಾಮ, ಕರ್ನಾಟಕದ ಯಾದಗಿರಿ ಜಿಲ್ಲೆಯ ಗುರುಮಿಠಕಲ್ ಕ್ಷೇತ್ರದ ಹಲವು ಗ್ರಾಮಗಳ ರೈತರ ಜಮೀನುಗಳು ಜಲಾವೃತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗಮನಕ್ಕೆ ಬಂದಿದ್ದಲ್ಲಿ, ಈ ಕುರಿತು ವಿವರ ನೀಡುವುದು ;

(ಇ) ಇದರಿಂದಾಗಿ ರೈತರಿಗೆ ಆಗಿರುವ ನಷ್ಟದ ಪ್ರಮಾಣವೆಷ್ಟು ?

## ತಾವರೆಕೆರೆ ಹೋಬಳಿಯಲ್ಲಿ ಸುಮಾರು ೮೮೦ ಎಕರೆ ಜಮೀನು ಶ್ರೀರಂಗಪಟ್ಟಣದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನಕ್ಕೆ ಸೇರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೬೮ (೨೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮಾಗಡಿ ಮುಖ್ಯ ರಸ್ತೆಯಲ್ಲಿ ಬರುವ ತಾವರೆಕೆರೆ ಹೋಬಳಿಯಲ್ಲಿ ಸುಮಾರು ೮೮೦ ಎಕರೆ ಜಮೀನು ಶ್ರೀರಂಗಪಟ್ಟಣದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನಕ್ಕೆ ಸೇರಬೇಕೆನ್ನುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಯಾವ ಯಾವ ಸರ್ವೆ ನಂಬರ್ ಸೇರುತ್ತದೆ ಎನ್ನುವ ಕುರಿತು ಮಾಹಿತಿ ನೀಡುವುದು ;

(ಇ) Tenancy Act ಅಡಿಯಲ್ಲಿ ಟ್ರಿಬ್ಯೂನಲ್‌ನಿಂದ ಹಲವಾರು ರೈತರಿಗೆ ಸದರಿ ಜಮೀನು ನೀಡಲಾಗಿರುತ್ತದೆ ಎನ್ನುವುದು ನಿಜವೇ ;

(ಈ) ಈ ಸಂಬಂಧ ಸರ್ಕಾರದ ನಿಲುವೇನು ?

## ಕೆರೆಗಳ ದುರಸ್ಥಿ ಹೆಸರಲ್ಲಿ ವಂಚಿಸುತ್ತಿರುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೯ (೩೧೦) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆರೆಗಳ ಪುನಶ್ಚೇತನ ಮತ್ತು ದುರಸ್ಥಿ ಮತ್ತು ಹೆಸರಿನಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಠಿಸಿ ಸರ್ಕಾರಕ್ಕೆ ವಂಚಿಸುತ್ತಿರುವ ಪ್ರಕರಣ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪ್ರಕರಣಗಳ ಬಗ್ಗೆ ಸ್ಪಷ್ಟ ಮಾಹಿತಿ ನೀಡುವುದು ; (ಕೆರೆಗಳವಾರು/ ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ಈ ಪ್ರಕರಣಗಳಿಗೆ ಸಂಬಂಧಪಟ್ಟಂತೆ ತನಿಖೆಗೆ ಆದೇಶ ನೀಡಲಾಗಿದೆಯೇ; ನೀಡಿದ್ದಲ್ಲಿ, ತನಿಖೆಯು ಯಾವ ಹಂತದಲ್ಲಿದೆ; ಇಂತಹ ಪ್ರಕರಣಗಳು ಎಷ್ಟು ಅಧಿಕಾರಿ/ನೌಕರರು/ಜನರನ್ನು ಬಂಧಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಕಪ್ಪು ಪಟ್ಟಿಗೆ ಸೇರಿರುವ ಗುತ್ತಿಗೆದಾರರಿಗೂ ಕಾಮಗಾರಿಗಳನ್ನು ಗುತ್ತಿಗೆ ನೀಡಿರುವುದು ನಿಜವೇ; ಪ್ರಕರಣದಲ್ಲಿ ಒಟ್ಟು ಎಷ್ಟು

ಮೊತ್ತದ ಕಾಮಗಾರಿಗಳನ್ನು ಯಾವ್ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; ಗುತ್ತಿಗೆ ನೀಡುವಾಗ ಅನುಸರಿಸಿರುವ ಮಾನದಂಡಗಳೇನು? (ಸಂಪೂರ್ಣ ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಬೆಳೆಹಾನಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೦ (೩೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಒಟ್ಟು ಎಷ್ಟು ಎಕರೆ ಬೆಳೆ ಹಾನಿಯಾಗಿದೆ; ಯಾವ ಯಾವ ಕಾರಣಗಳಿಂದ ಹಾನಿಯಾಗಿರುತ್ತದೆ; (ತಾಲ್ಲೂಕುವಾರು, ಗ್ರಾಮವಾರು ರೈತರ ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ವಿವಿಧ ಬೆಳೆ ಹಾನಿಯಾಗಿರುವಂತಹ ರೈತರಿಗೆ ಸರ್ಕಾರದ ವತಿಯಿಂದ ಪರಿಹಾರ ನೀಡಲಾಗಿದೆಯೇ; ಯಾವ ಯಾವ ಬೆಳೆಗೆ ಎಷ್ಟೆಷ್ಟು ಪರಿಹಾರ ನೀಡಲಾಗುವುದು; (ತಾಲ್ಲೂಕುವಾರು ಗ್ರಾಮವಾರು ರೈತರ ಹೆಸರುಗಳೊಂದಿಗೆ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಎಲ್ಲಾ ಬೆಳೆ ಹಾನಿ ಪ್ರಕರಣಗಳಿಗೆ ಪರಿಹಾರ ಒದಗಿಸಲು ಇರುವ ಅಡೆತಡೆಗಳೇನು ಮತ್ತು ಬಾಕಿ ಇರುವ ಪ್ರಕರಣಗಳೆಷ್ಟು? (ತಾಲ್ಲೂಕು, ಗ್ರಾಮವಾರು ರೈತರ ಹೆಸರುಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಸ್ಮಶಾನ ಭೂಮಿ ಕೊರತೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೧ (೩೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸ್ಮಶಾನ ಭೂಮಿ ಇಲ್ಲದ ಕಡೆಗಳಲ್ಲಿ ಭೂಮಿಯನ್ನು ಖರೀದಿಸಿ ಅನುಕೂಲ ಒದಗಿಸಲು ಹಣವನ್ನು ಕಾಯ್ದಿರಿಸಿರುವುದು ನಿಜವೇ; (ಸಂಪೂರ್ಣ ಮಾಹಿತಿ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಹಣವನ್ನು ಕಾಯ್ದಿರಿಸಿ ಎಷ್ಟು ಕಾಲಾವಾಯಿತು ಮತ್ತು ಇದುವರೆಗೂ ಎಷ್ಟು; ಕಡೆ ಭೂಮಿಯನ್ನು ಖರೀದಿಸಲಾಗಿದೆ; ಹಾಗೆ ಖರೀದಿಸಿದಲ್ಲಿ ಭೂಮಿಗೆ ತಗುಲಿದ ವೆಚ್ಚ ಎಷ್ಟು; ಎಲ್ಲೆಲ್ಲಿ ಖರೀದಿಸಲಾಗಿದೆ ? (ಕಳೆದ ಮೂರು ವರ್ಷಗಳ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಕಾರ್ಮಿಕರಿಗೆ ಪರಿಹಾರಧನ ಹೆಚ್ಚಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೨ (೩೧೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಮತ್ತು ಇತರ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಣಿಯಾಗಿರುವ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಕೆಲಸದ ವೇಳೆ ಮೃತಪಟ್ಟಿರುವ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮೃತಪಟ್ಟ ಸ್ಥಳದ ದಿನಾಂಕದ ವಿವರ ನೀಡುವುದು)

(ಇ) ಸರ್ಕಾರದ ಈ ರೀತಿ ಮೃತ ಪಟ್ಟಿರುವ ಕಾರ್ಮಿಕರಿಗೆ ನೀಡಿರುವ ಪರಿಹಾರ ಎಷ್ಟು; ನೀಡಿದ್ದಲ್ಲಿ, ಎಷ್ಟು ಜನ ಮೃತ ಕಾರ್ಮಿಕರಿಗೆ ಪರಿಹಾರದ ಹಣ ಬಿಡುಗಡೆ ಮಾಡಲಾಗಿದೆ; (ವಿವರ ಒದಗಿಸುವುದು)

(ಈ) ಕಾರ್ಮಿಕರ ಹಿತದೃಷ್ಟಿಯಿಂದ ಪರಿಹಾರಧನವನ್ನು ಹೆಚ್ಚಳ ಮಾಡಲು ಮತ್ತು ಅವರ ಭದ್ರತೆಗೆ ಸರ್ಕಾರವು ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ? (ವಿವರ ನೀಡುವುದು)

## ಅರಣ್ಯ ಪ್ರದೇಶಗಳಲ್ಲಿ ಔಷಧಿಯ ಗಿಡಗಳಿಗೆ ಹಾನಿ ಮತ್ತು ಕಳ್ಳ ಸಾಗಣೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೩ (೯೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶ್ಚಿಮಘಟ್ಟ ಅರಣ್ಯ ಪ್ರದೇಶ ಸೇರಿದಂತೆ ರಾಜ್ಯದ ಹಲವು ಕಾಡಿನಲ್ಲಿರುವ ಔಷಧಿಯ ಗುಣವುಳ್ಳ ಗಿಡ ಮರಗಳ ರಕ್ಷಣೆಗೆ ಸರ್ಕಾರ ಮುಂದಾಗಿದೆಯೇ ;

(ಆ) ಇಲ್ಲದಿದ್ದಲ್ಲಿ, ಇದಕ್ಕೆ ಕಾರಣವೇನು ಇತ್ತೀಚೆಗೆ ಈ ರೀತಿಯ ಮರಗಳ ಮೇಲ್ಭಾಗದ ತೊಗಟೆ–ಚಕ್ಕೆಗಳನ್ನು ಕಳ್ಳತನ ಮೂಲಕ ಸಾಗಿಸುತ್ತಿರುವ ಪ್ರಕರಣಗಳು ಬೆಳಕಿಗೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಭಾಗದಲ್ಲಿ ಯಾವ ಜಾತಿಯ ಮರಗಳನ್ನು ಅಕ್ರಮವಾಗಿ ಚಕ್ಕೆ ಸುಲಿದು ಸಾಗಿಸಲಾಗುತ್ತಿದೆ; ಇದಕ್ಕೆ ಅರಣ್ಯ ಇಲಾಖೆಯ ಅನುಮತಿ ಇದೆಯೇ; ಹಾಗಿದ್ದಲ್ಲಿ, ಔಷಧಿಯ ಮರ–ಗಿಡಗಳ ರಕ್ಷಣೆಗೆ ಸರ್ಕಾರದ ಕ್ರಮಗಳೇನು ;

(ಈ) ಈ ಚಕ್ಕೆಗಳನ್ನು ಎಲ್ಲಿಗೆ ಸಾಗಿಸಲಾಗುತ್ತದೆ; ಇದರಿಂದ ಯಾವ ಔಷಧಿಗಳನ್ನು ತಯಾರಿಸಲಾಗುತ್ತದೆ; ಇದಕ್ಕೆ ಸರ್ಕಾರದ ಅನುಮತಿ ಇದೆಯೇ ;

(ಉ) ಸದರಿ ಪ್ರಕರಣಗಳು ಎಲ್ಲೆಲ್ಲಿ ಬೆಳಕಿಗೆ ಬಂದಿವೆ; ಇಂತಹವರ ವಿರುದ್ಧ ಸರ್ಕಾರದ ಕ್ರಮಗಳೇನು? (ವಿವರ ನೀಡುವುದು)

## ಬಾಲ ಕಾರ್ಮಿಕ ಪದ್ಧತಿಯನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭೪ (೨೦೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಬಾಲ ಕಾರ್ಮಿಕ ಪ್ರಕರಣಗಳು ಪತ್ತೆಯಾಗಿವೆ ;

(ಆ) ಕೊಡಗು ಜಿಲ್ಲೆಯಲ್ಲಿ ದಾಖಲಾದ ಬಾಲ ಕಾರ್ಮಿಕರ ಪ್ರಕರಣಗಳೆಷ್ಟು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ತಾಲ್ಲೂಕು ಮಟ್ಟದ ಅಧಿಕಾರಿಗಳು ಬಾಲ ಕಾರ್ಮಿಕ ಪದ್ಧತಿಯನ್ನು ತಡೆಗಟ್ಟುವಲ್ಲಿ ಯಾವ ಪಾತ್ರ ವಹಿಸುತ್ತಿದ್ದಾರೆ ;

(ಈ) ಕೊಡಗು ಜಿಲ್ಲೆಯಲ್ಲಿ ಬಾಲ ಕಾರ್ಮಿಕರನ್ನು ಪತ್ತೆಹಚ್ಚಿ ಮುಖ್ಯ ವಾಹಿನಿಗೆ ತರಲು ತಾಲ್ಲೂಕು/ಜಿಲ್ಲಾ ಮಟ್ಟದಲ್ಲಿ ಯಾವ ಯಾವ ಇಲಾಖೆ ಹಾಗೂ ಯಾವ ಯಾವ ಇಲಾಖಾ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ; ಹಾಗೂ ಅವರುಗಳಿಗೆ ನೀಡಲಾದ ಅಧಿಕಾರಗಳಾವುವು ?

## ರಾಜ್ಯದಲ್ಲಿರುವ ಬಗರ್ ಹುಕುಂ ಸಮಿತಿಗಳ ಕಾರ್ಯ ವಿಷಯಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭೫ (೩೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರ್ಜಿ ಸಂಖ್ಯೆ ೫೦/೫೩ ರಡಿಯಲ್ಲಿ ಇದುವರೆವಿಗೂ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೆ ಮಾಡಲಾದ ಅರ್ಜಿಗಳೆಷ್ಟು; (ಪೂರ್ಣ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ವಿವರ ನೀಡುವುದು ;

(ಇ) ರಾಜ್ಯದಲ್ಲಿ ಬಗರ್ ಹುಕುಂ ಅರ್ಜಿಗಳ ಸಮಿತಿಯಲ್ಲಿ ತೀರ್ಮಾನ ಮಾಡಲು ಅನುಸರಿಸಲಾಗುತ್ತಿರುವ ಮಾರ್ಗಸೂಚಿಗಳೇನು; (ಪೂರ್ಣ ವಿವರಗಳು ಹಾಗೂ ಇದಕ್ಕೆ ಸಂಬಂಧಿಸಿದಂತೆ ಸರ್ಕಾರಿ ಆದೇಶಗಳ ಪ್ರತಿಗಳನ್ನು ಒದಗಿಸುವುದು)

(ಈ) ರಾಜ್ಯದಲ್ಲಿರುವ ಬಗರ್ ಹುಕುಂ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ ನೀಡಲಾಗುವ ಭತ್ಯೆಗಳೆಷ್ಟು? (ಸರ್ಕಾರಿ ಆದೇಶಗಳ ಪ್ರತಿಗಳನ್ನು ಪೂರ್ಣ ವಿವರಗಳೊಂದಿಗೆ ಕೊಡಗು ಜಿಲ್ಲೆಗೆ ಪ್ರತ್ಯೇಕವಾಗಿ ಇದ್ದಲ್ಲಿ, ಸರ್ಕಾರಿ ಆದೇಶದ ಪ್ರತಿಗಳನ್ನು ಒದಗಿಸುವುದು)

## ಮುಜರಾಯಿ ಇಲಾಖೆಯ ದೇವಾಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರ ವೇತನ ಸೌಲಭ್ಯಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭೬ (೨೦೦) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೭ ರಿಂದ ೨೦೧೬ರ ವರೆಗೆ ಮುಜರಾಯಿ ಇಲಾಖೆಯ ಎ.ಬಿ. ಮತ್ತು ಸಿ ಶ್ರೇಣಿಯ ದೇವಾಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರನ್ನು ಖಾಯಂಗೊಳಿಸಲಾಗಿದೆಯೇ; ಇಲ್ಲವಾದಲ್ಲಿ, ಖಾಯಂ ಮಾಡುವ ವಿಷಯದಲ್ಲಿ ಸರ್ಕಾರದ ನಿಲುವೇನು; (ಸಂಪೂರ್ಣ ವಿವರ ನೀಡುವುದು)

(ಆ) ಖಾಯಂಗೊಳಿಸಿದ್ದಲ್ಲಿ, ಇವರಿಗೆ ನೀಡುತ್ತಿರುವ ವೇತನದ ವಿವರಗಳು, ಸೌಲಭ್ಯಗಳ ವಿವರ ಮತ್ತು ಇವರಿಗೆ ಸಂಬಂಧಿಸಿದ ಇತರೆ ಯೋಜನೆಗಳ ವಿವರ ನೀಡುವುದು ;

(ಇ) ರಾಜ್ಯದಲ್ಲಿರುವ ವಿವಿಧ ದೇವಾಲಯಗಳನ್ನು ಪ್ರಾಧಿಕಾರಗಳಾಗಿ ಮಾಡಿರುವ ವಿವರಗಳನ್ನು ಒದಗಿಸುವುದು ?

## ಹಾವೇರಿ ಜಿಲ್ಲೆಯಲ್ಲಿ ಬೆಳೆ ಹಾನಿಗೊಂಡ ರೈತ ಕುಟುಂಬಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೭ (೩೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಬೆಳೆ ಹಾನಿಗೊಂಡ ರೈತ ಕುಟುಂಬಗಳೆಷ್ಟು; ಹಾನಿಯ ಒಟ್ಟು ಪ್ರಮಾಣ ಎಷ್ಟು; ಇದುವರೆಗೆ ಒಟ್ಟು ಎಷ್ಟು ಕುಟುಂಬಗಳಿಗೆ ಬೆಳೆ ಹಾನಿ ಪರಿಹಾರ ಮೊತ್ತ ಪಾವತಿಸಲಾಗಿದೆ; ಎಷ್ಟು ರೈತರಿಗೆ ಎಷ್ಟು ಮೊತ್ತ ಪಾವತಿಗೆ ಬಾಕಿ ಇರುತ್ತದೆ ;

(ಆ) ಹಾವೇರಿ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಎಷ್ಟು ಪ್ರಮಾಣದಲ್ಲಿ ಬೆಳೆ ವಿಮೆ ಮಾಡಲಾಗಿದೆ; ಒಟ್ಟು ಮೊತ್ತವೆಷ್ಟು ;

(ಇ) ಹಾವೇರಿಯ ಎಷ್ಟು ರೈತರಿಗೆ ಬೆಳೆ ಪರಿಹಾರ ವಿಮಾ ಮೊತ್ತ ನೀಡಲಾಗಿದೆ; ಬೆಳೆ ವಿಮೆ ಪರಿಹಾರ ಪಾವತಿಗೆ ಬಾಕಿಯಿರುತ್ತದೆ; ಬಾಕಿ ಇರುವ ಪ್ರಕರಣ ಮತ್ತು ಮೊತ್ತವೆಷ್ಟು ;

(ಈ) ಬಾಕಿ ಇರಿಸಿಕೊಂಡಿರುವ ಬೆಳೆ ಹಾನಿ ಪರಿಹಾರ ಮೊತ್ತ ಮತ್ತು ವಿಮಾ ಮೊತ್ತವನ್ನು ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಹಾವೇರಿ ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೮ (೩೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲಾ ನಿರ್ಮಿತ ಕೇಂದ್ರದಲ್ಲಿ ಎಷ್ಟು ಮಂದಿ ಸಿಬ್ಬಂದಿ/ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ; (ಸಂಪೂರ್ಣ ವಿವರ ನೀಡುವುದು) ಖಾಯಂ ಸರ್ಕಾರಿ ನೌಕರರ ಹಾಗೂ ಹೊರ ಗುತ್ತಿಗೆ ನೌಕರರ ಸಂಖ್ಯೆ ಎಷ್ಟು ;

(ಆ) ಸದರಿ ನೌಕರರು ಯಾವ ಯಾವ ಹುದ್ದೆಯಲ್ಲಿ ಎಷ್ಟು ಸಮಯದಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ; ಅವರ ವಿದ್ಯಾರ್ಹತೆಗಳೇನು ;

(ಇ) ೨೦೧೧ ರಿಂದ ೨೦೧೬ರವರೆಗೆ ಹಾವೇರಿ ನಿರ್ಮಿತಿ ಕೇಂದ್ರದಿಂದ ಕೈಗೊಂಡ ಹೊಸ ಹಾಗೂ ನಿರ್ವಹಣಾ ಕಾಮಗಾರಿಗಳು ಯಾವುವು; ತಗುಲಿದ ಮೊತ್ತ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ೩ ಹಂತದ ಛಾಯಾಚಿತ್ರ ತಪಾಸಣಾ ವರದಿ ನೀಡುವುದು)

(ಈ) ೨೦೦೮ ರಿಂದ ೨೦೧೬ರವರೆಗೆ ನಿರ್ಮಿತಿ ಕೇಂದ್ರದ ಆಡಿಟ್ ವರದಿ ನೀಡುವುದು ;

(ಉ) ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲ್ಲೂಕು ಮಾಕನೂರು ಗ್ರಾಮದ ಆಶ್ರಮ ಶಾಲೆ ನಿರ್ಮಾಣದ ಕಾಮಗಾರಿ ಆರಂಭ ದಿನಾಂಕ, ಅಂದಾಜು ಮೊತ್ತ, ಬಿಲ್ಲುಗಳ ವಿವರ, ಛಾಯಚಿತ್ರ ಹಾಗೂ Third Party Inspection Report ಗಳನ್ನು ಒದಗಿಸುವುದು ;

(ಊ) ಸದರಿ ಆಶ್ರಮ ಶಾಲೆ ಪ್ರಾರಂಭವಾದ ನಂತರದಿಂದ ಇಲ್ಲಿಯವರೆಗೆ ದುರಸ್ಥಿ ನಿರ್ವಹಣೆಗೆ ಖರ್ಚು ಮಾಡಿದ ಅನುದಾನವೆಷ್ಟು? (ಕಾಮಗಾರಿಯ ಸಂಪೂರ್ಣ ಮಾಹಿತಿ ಹಾಗೂ ದಾಖಲೆ ಒದಗಿಸುವುದು)

## ಹಾವೇರಿ ಜಿಲ್ಲೆಯಲ್ಲಿರುವ ದೊಡ್ಡ ಕೆರೆಗಳು ಮತ್ತು ಸಣ್ಣ ಕೆರೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೯ (೩೪೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿರುವ ಸಣ್ಣ ಮತ್ತು ದೊಡ್ಡ ಕೆರೆಗಳ ಸಂಖ್ಯೆ ಎಷ್ಟು; ಕೆರೆಗಳಲ್ಲಿ ಸಣ್ಣ ನೀರಾವರಿ ಇಲಾಖೆಗೆ ಎಷ್ಟು ಕೆರೆಗಳು ಬರುತ್ತವೆ; ಮತ್ತು ದೊಡ್ಡ ನೀರಾವರಿ ಇಲಾಖೆಗೆ ಎಷ್ಟು ಕೆರೆಗಳು ಬರುತ್ತವೆ; (ಕೆರೆಗಳು ಊರು ಮತ್ತು ಹೆಸರುಗಳ ವಿವರ ನೀಡುವುದು)

(ಆ) ಇವುಗಳ ಪ್ರತಿ ಕೆರೆಯ ವಿಸ್ತೀರ್ಣ ಎಷ್ಟು; ಈ ಕೆರೆಗಳು ಒತ್ತುವರಿಯಾಗಿರುವುದು ಎಷ್ಟು; ಮತ್ತು ಒತ್ತುವರಿಯಾದ ಕೆರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ಕೆರೆಗಳಿಗೆ ೨೦೦೮ ರಿಂದ ೨೦೧೩ರ ವರೆಗೆ ಖರ್ಚು ಮಾಡಿದ ಅನುದಾನವೆಷ್ಟು; ಹಾಗೂ ೨೦೧೩ ರಿಂದ ೨೦೧೬ರ ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನವೆಷ್ಟು; ೨೦೧೩ ರಿಂದ ಪ್ರತಿ ಕೆರೆಗಳಿಗೆ ಕಾಮಗಾರಿಗಳವಾರು ಹೂಳು ತೆಗೆಯಲಿಕ್ಕೆ, ಪಿಚ್ಚಿಂಗ್ ನಿರ್ಮಾಣಕ್ಕೆ, ಕೆರೆಗೆ ಕಾಲುವೆಯಿಂದ ನೀರು ಬರುವ ಕಾಲುವೆಗಳಿಗೆ ಖರ್ಚಾದ ಅನುದಾನವೆಷ್ಟು? (ಕೆರೆಗಳವಾರು, ಊರುಗಳವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಮಹಾದಾಯಿ ನ್ಯಾಯಮಂಡಳಿ ಮತ್ತು ಪರಿಹಾರ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೮೦ (೪೦೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾದಾಯಿ ನ್ಯಾಯಮಂಡಳಿ ಅಸ್ತಿತ್ವಗೊಂಡಿದ್ದು ಯಾವಾಗ; ಅದರ ಕಾರ್ಯವ್ಯಾಪ್ತಿಯ ವಿವರ ನೀಡುವುದು;

(ಆ) ನ್ಯಾಯಮಂಡಳಿಯ ಮುಂದೆ ಈ ನದಿ ನೀರಿನ ವ್ಯಾಜ್ಯ ಯಾವ ಹಂತದಲ್ಲಿದೆ ; ಮಂಡಳಿಯಿಂದ ನ್ಯಾಯ ಪಡೆಯಲು ಸರ್ಕಾರ ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಮಹಾದಾಯಿ ಅಂತರರಾಜ್ಯ ಜಲ ವಿವಾದವನ್ನು ನ್ಯಾಯಾಧೀಕರಣದ ಹೊರಗೆ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಮಾತುಕತೆ ಮೂಲಕ ಪರಿಹರಿಸಿಕೊಳ್ಳಲು ನಡೆದಿರುವ ಪ್ರಯತ್ನಗಳು ಯಾವ ಹಂತದಲ್ಲಿವೆ ;

(ಈ) ಈ ಸಮಸ್ಯೆಯನ್ನು ಯಾವಾಗ ಪರಿಹರಿಸಲಾಗುತ್ತದೆ ? (ವಿವರ ನೀಡುವುದು)

## ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ನೀರಿನ ಉಪಯೋಗದ ಕುರಿತು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೮೧ (೨೮೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ನೀರಿನ ಸಾಮರ್ಥ್ಯ ಎಷ್ಟು ;

(ಆ) ಅನುಕ್ರಮವಾಗಿ ಈ ಜಲಾಶಯಗಳ ನೀರನ್ನು ಯಾವ ಯಾವ ಜಿಲ್ಲೆಯ, ತಾಲ್ಲೂಕಿನ ಮತ್ತು ಗ್ರಾಮಗಳ ಎಷ್ಟು ವಿಸ್ತೀರ್ಣದ ಜಮೀನಿಗೆ ಕೃಷಿಗಾಗಿ ಹಾಗೂ ಇನ್ನಿತರ ಬಾಬುಗಳಿಗೆ ಉಪಯೋಗಿಸಿಕೊಳ್ಳಲಾಗುತ್ತಿದೆ; ಯಾವ ಯಾವ ಬೆಳೆಗಳಿಗೆ ನೀರನ್ನುಣಿಸಲು ನಿಗಧಿಪಡಿಸಲಾಗಿದೆ ;

(ಇ) ಈ ಜಲಾಶಯಗಳ ಹಿನ್ನೀರಿನಿಂದ ಎಷ್ಟು ಕೆರೆಗಳಿಗೆ ಮತ್ತು ಯಾವ ಯಾವ ಗ್ರಾಮದ ಕೆರೆಗಳಿಗೆ ನೀರನ್ನು ತುಂಬಿಸಲು ಸರ್ಕಾರ ಯೋಜನೆಯನ್ನು ರೂಪಿಸಿದೆ; ಆ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಅದಕ್ಕಾಗಿ ತಗಲುವ ಒಟ್ಟು ಅಂದಾಜು ವೆಚ್ಚ ಎಷ್ಟು; ಅದರಲ್ಲಿ ಎಷ್ಟು ಹಣವನ್ನು ಈಗಾಗಲೇ ತೊಡಗಿಸಲಾಗಿದೆ;

(ಉ) ಆ ಕೆರೆಗಳಿಗೆ ನೀರನ್ನು ತುಂಬಿಸುವುದರಿಂದ ಆಗಬಹುದಾದ ಉಪಯೋಗವೇನು? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳು ಮತ್ತು ವರಮಾನ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೮೨ (೨೮೬) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು ; ಈ ದೇವಸ್ಥಾನಗಳಿಂದ ಬರುವ ಆದಾಯ ಮತ್ತು ವೆಚ್ಚಗಳ ಬಗ್ಗೆ ದೇವಸ್ಥಾನವಾರು ವಿವರ ನೀಡುವುದು;

(ಆ) ಆ ದೇವಸ್ಥಾನಗಳಲ್ಲಿ ಆಚರಿಸಲಾಗುವ ಪೂಜಾ ಕೈಂಕರ್ಯಗಳಾವುವು ; ಆ ಪೂಜಾ ಕೈಂಕರ್ಯಗಳಿಗೆ ವಿಧಿಸುವ ಶುಲ್ಕವೆಷ್ಟು ; (ದೇವಸ್ಥಾನವಾರು ವಿವರ ನೀಡುವುದು)

(ಇ) ದೇವಸ್ಥಾನಗಳಲ್ಲಿರುವ ಅರ್ಚಕರ ವಿವಿಧ ವರ್ಗಗಳಾವುವು ; (ಪೂರ್ಣ ವರ್ಗವಾರು, ದೇವಸ್ಥಾನವಾರು ವಿವರ ನೀಡುವುದು)

(ಈ) ಯಾವ ಯಾವ ದೇವಸ್ಥಾನಗಳಲ್ಲಿ ಪೂಜಾ ಕಾರ್ಯ, ಸ್ವಚ್ಛತೆ ಮತ್ತು ಆಡಳಿತ ನಿರ್ವಹಿಸಲು ಎಷ್ಟೆಷ್ಟು ಸಿಬ್ಬಂದಿಗಳಿದ್ದಾರೆ; (ವರ್ಗವಾರು ಪೂರ್ಣವಿವರ ನೀಡುವುದು)

(ಉ) ಈ ಎಲ್ಲಾ ದೇವಸ್ಥಾನಗಳಿಂದ ಲಭ್ಯವಾಗುವ ವರಮಾನವನ್ನು ಬಳಸಿಕೊಳ್ಳಲಾಗುತ್ತಿರುವ ವಿವಿಧ ಬಾಬ್ತುಗಳು ಯಾವುವು ? (ದೇವಸ್ಥಾನವಾರು ವಿವರ ನೀಡುವುದು)

## ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೮೩ (೨೮೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ೩ನೇ ಹಂತದ ಯೋಜನೆಗೆ ಬೇಕಾಗಿರುವ ಅನುದಾನ ಮತ್ತು ಭೂ ಪ್ರದೇಶ ಎಷ್ಟು ; ಈ ಯೋಜನೆಗಾಗಿ ಈಗಾಗಲೇ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿರುವ ಪ್ರತಿ ಎಕರೆ ಭೂಮಿಗೆ ಸರ್ಕಾರ ನೀಡುತ್ತಿರುವ ಒಟ್ಟು ಪರಿಹಾರದ ಮೊತ್ತವೆಷ್ಟು ;

(ಇ) ಎಷ್ಟು ಅವಧಿಯಲ್ಲಿ ೩ನೇ ಹಂತದ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ;

(ಈ) ಈ ಯೋಜನೆಯಿಂದ ಎಷ್ಟು ಟಿ.ಎಂ.ಸಿ. ನೀರನ್ನು ಸಂಗ್ರಹಿಸಬಹುದು ; ಆ ನೀರನ್ನು ಯಾವ ಯಾವ ಪ್ರದೇಶಕ್ಕೆ ಮತ್ತು ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗುವುದು ?

## ಸರಾಸರಿ ಅರಣ್ಯ ಪ್ರದೇಶದ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೮೪ (೨೮೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಒಟ್ಟಾರೆ ಭೂಪ್ರದೇಶದ ವಿಸ್ತೀರ್ಣ ಎಷ್ಟು ; ಆ ಪೈಕಿ ಎಷ್ಟು ವಿಸ್ತೀರ್ಣದಲ್ಲಿ ಅರಣ್ಯ ಪ್ರದೇಶವಿದೆ ;

(ಆ) ಪ್ರಕೃತಿ ವಿಕೋಪಗಳಾದ ಅತಿವೃಷ್ಟಿ ಮತ್ತು ಅನಾವೃಷ್ಟಿ ತಡೆಯಲು ಹಾಗೂ ಪರಿಸರ ಸಮತೋಲನ ಕಾಪಾಡಲು ವೈಜ್ಞಾನಿಕವಾಗಿ ಇರಬೇಕಾಗಿರುವ ಅರಣ್ಯ ಪ್ರದೇಶವೆಷ್ಟು ;

(ಇ) ಸದ್ಯದಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಯಥೇಚ್ಛವಾಗಿ ಬೆಳೆದು ನಿಂತಿರುವ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು ; (ವಿವರ ನೀಡುವುದು)

(ಈ) ಅರಣ್ಯ ಪ್ರದೇಶದ ರಾಷ್ಟ್ರೀಯ ಸರಾಸರಿ ಎಷ್ಟು ; ರಾಜ್ಯದ ಸರಾಸರಿ ಎಷ್ಟು ;

(ಉ) ರಾಷ್ಟ್ರೀಯ ಸರಾಸರಿಗೆ ಸರಿದೂಗಿಸಲು ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಜಮೀನು ಮಂಜೂರಾತಿಯ ನಿರ್ಬಂಧವನ್ನು ತೆರವುಗೊಳಿಸುವ ಬಗ್ಗೆ

**ಶ್ರೀ ಡಿ. ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೫ (೩೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಫಲಾನುಭವಿಗಳಿಗೆ ಸರ್ಕಾರ ಜಮೀನು ಮಂಜೂರು ಮಾಡುವಾಗ ಪರಭಾರೆಯನ್ನು ಮಾಡಲು ಕಾಲಾವಧಿಯನ್ನು ನಿಗಧಿಪಡಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ವರ್ಷಗಳ ಕಾಲ ಈ ವರ್ಗಕ್ಕೆ ಮಂಜೂರಾದ ಜಮೀನುಗಳನ್ನು ಪರಭಾರೆ ಮಾಡಲು ನಿರ್ಬಂಧಿಸಲಾಗಿದೆ ;

(ಇ) ಈ ನಿರ್ಬಂಧಿತ ಅವಧಿ ಮುಗಿದ ಮೇಲೆ ಮಂಜೂರಾತಿದಾರರು ಪರಭಾರೆ ಮಾಡಲು ಸರ್ಕಾರದ ಅನುಮತಿ ಪಡೆಯಬೇಕೆಂಬ ನಿರ್ಬಂಧ ಜಾರಿಯಲ್ಲಿದೆಯೇ;

(ಈ) ಪರಭಾರೆ ಮಾಡಲು ವಿಧಿಸಿದ್ದ ನಿರ್ಬಂಧ ಅವಧಿ ಮುಗಿದಿದ್ದರೂ, ಸರ್ಕಾರದ ಅನುಮತಿ ಪಡೆಯಬೇಕೆಂಬ ನಿರ್ಬಂಧದಿಂದ ಈ ವರ್ಗಕ್ಕೆ ಕಿರುಕುಳ ನೀಡಿದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮಂಜೂರಾದ ಜಮೀನನ್ನು ಪರಭಾರೆಯ ಅವಧಿಯ ನಂತರ ಅನುಮತಿ ಪಡೆಯಬೇಕೆಂಬ ಆದೇಶವನ್ನು ಹಿಂದಕ್ಕೆ ಪಡೆಯಲು ಸರ್ಕಾರ ಕ್ರಮ ಜರುಗಿಸುವುದೇ ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸ್ಮಶಾನ ಮಂಜೂರಾತಿ ಕುರಿತು.

**ಶ್ರೀ ಡಿ. ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೬ (೩೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು ವಾಸಿಸುವ ಗ್ರಾಮಗಳಿಗೆ ಸ್ಮಶಾನಕ್ಕಾಗಿ ಭೂಮಿ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಇದುವರೆವಿಗೂ ಸ್ಮಶಾನಕ್ಕಾಗಿ ಜಮೀನು ಮಂಜೂರುಗಾಗಿ ಬಂದಿರುವ ಅರ್ಜಿಗಳೆಷ್ಟು ;

(ಇ) ಸ್ಮಶಾನಕ್ಕಾಗಿ ಜಮೀನು ಮಂಜೂರು ಮಾಡಲಾದ ಪ್ರಕರಣಗಳೆಷ್ಟು; ಬಾಕಿ ಪ್ರಕರಣಗಳೆಷ್ಟು ;

(ಈ) ಈ ಬೇಡಿಕೆಯನ್ನು ಈಡೇರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಎತ್ತಿನ ಹೊಳೆ ಯೋಜನೆ ಅನುಷ್ಠಾನ ಕುರಿತು

**ಶ್ರೀ ಡಿ. ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೭ (೩೦೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಎತ್ತಿನ ಹೊಳೆಯಿಂದ ನೀರನ್ನು ತರಲು ಸಮಗ್ರ ಯೋಜನೆ ಜೊತೆಗೆ ಬೇರೆ ಬೇರೆ ಮೂಲಗಳಿಂದ ದೊರೆಯಬಹುದಾದ ಪರ್ಯಾಯ ನೀರಿನ ಲಭ್ಯತೆ ಬಗ್ಗೆ ಅಧ್ಯಯನ ನಡೆಸಲು ಸಮಿತಿ ರಚಿಸಲಾಗಿತ್ತೇ;

(ಆ) ಈ ಸಮಿತಿಯು ಎಷ್ಟು ಬಾರಿ ಸಭೆ ಸೇರಿದೆ; ಪರ್ಯಾಯ ನೀರಿನ ಲಭ್ಯತೆಯ ಬಗ್ಗೆ ಅಧ್ಯಯನ ನಡೆಸಿ ಯಾವ ಯಾವ ಮೂಲಗಳಿಂದ ಲಭ್ಯತೆಯನ್ನು ಗುರುತಿಸಲಾಗಿದೆ ?

## ಎತ್ತಿನ ಹೊಳೆ ನೀರನ್ನು ಬೆಂಗಳೂರು ನಗರಕ್ಕೆ ಸರಬರಾಜು ಬಗ್ಗೆ

**ಶ್ರೀ ಡಿ. ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೮ (೩೦೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡಲು ಎತ್ತಿನ ಹೊಳೆ ನೀರನ್ನು ತಿಪ್ಪಗೊಂಡನಹಳ್ಳಿ ಹಾಗೂ ಹೆಸರುಘಟ್ಟ ಜಲಾಶಯಗಳಿಗೆ ಹರಿಸಲು ಸರ್ಕಾರ ಕ್ರಿಯ ಯೋಜನೆಯನ್ನು ಕೈಗೊಂಡಿದೆಯೇ;

(ಆ) ಹಾಗಿದ್ದಲ್ಲಿ, ಈ ಯೋಜನೆಗೆ ಬೇಕಾದ ಅನುದಾನ ಎಷ್ಟು ;

(ಇ) ಎಷ್ಟು ವರ್ಷಗಳಲ್ಲಿ ಈ ಯೋಜನೆಯುನ್ನು ಪೂರ್ಣಗೊಳಿಸಲಾಗುವುದು ;

(ಈ) ಈ ಯೋಜನೆಯಿಂದ ಎಷ್ಟು ಟಿ.ಎಂ.ಸಿ. ನೀರನ್ನು ಬೆಂಗಳೂರು ನಗರಕ್ಕೆ ಕುಡಿಯಲು ಸರಬರಾಜು ಮಾಡಲಾಗುವುದು ?

## ಬೀದರ್ ಜಿಲ್ಲೆಯಲ್ಲಿ ಅತಿವೃಷ್ಠಿ ಪ್ರವಾಹದಿಂದ ಹಾನಿಯಾಗಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೮೯ (೩೭೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಅತಿವೃಷ್ಠಿ ಹಾಗೂ ಪ್ರವಾಹದಿಂದ ಎಷ್ಟು ಎಕರೆ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅತಿವೃಷ್ಠಿಯಿಂದ ಬೆಳೆಹಾನಿಯಾದ ರೈತರಿಗೆ ನೀಡಿರುವ ಪರಿಹಾರದ ಮೊತ್ತ ಎಷ್ಟು ;

(ಇ) ಅತಿವೃಷ್ಟಿ ಪ್ರವಾಹದಿಂದಾಗಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಜನ ರೈತರು / ರೈತ ಕಾರ್ಮಿಕರು ಸಾವನ್ನಪ್ಪಿದ್ದಾರೆ ? (ತಾಲ್ಲೂಕುವಾರು ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕದಲ್ಲಿ ನಿರುದ್ಯೋಗದ ಸಮಸ್ಯೆ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೯೦ (೩೭೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಜಿಲ್ಲೆಯಲ್ಲಿ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಹೈದ್ರಾಬಾದ್–ಕರ್ನಾಟಕ ಜಿಲ್ಲೆಯಲ್ಲಿ ಬಾಲ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಬೀದರ್ ಜಿಲ್ಲೆಯಲ್ಲಿ ಎಷ್ಟು ಬಾಲ ಕಾರ್ಮಿಕರನ್ನು ಪತ್ತೆ ಹಚ್ಚಲಾಗಿದೆ? (ವಿವರ ನೀಡುವುದು)

## ೨೦೧೫–೧೬ನೇ ಸಾಲಿನಲ್ಲಿ ಸಣ್ಣ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೯೧ (೩೭೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ಕೆರೆಗಳ ಅಭಿವೃದ್ಧಿಗಾಗಿ ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಆ) ಈ ಬಿಡುಗಡೆ ಅನುದಾನದಲ್ಲಿ ಎಷ್ಟು ಕೆರೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹೈದ್ರಾಬಾದ್–ಬೀದರ್ ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ?

## ಬೀದರ್ ಜಿಲ್ಲೆಯ ಮುಜರಾಯಿ ದೇವಸ್ಥಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೯೨ (೩೭೪) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲಾ ಕೇಂದ್ರದಲ್ಲಿರುವ ಶ್ರೀ ನರಸಿಂಹ ಝರಣಾ ದೇವಸ್ಥಾನದ ಅಭಿವೃದ್ಧಿ ಹಾಗೂ ಭಕ್ತಾದಿಗಳ ಸೌಲಭ್ಯಕ್ಕಾಗಿ ಕಳೆದ ೫ ವರ್ಷಗಳಲ್ಲಿ ಘೋಷಣೆಯಾದ ಯೋಜನೆಗಳಾವುವು ; ಇವುಗಳಲ್ಲಿ ಮಂಜೂರಾದ ಯೋಜನೆಗಳು ಯಾವುವು; ಈ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು ; ಬಳಕೆಯಾಗಿರುವ ಅನುದಾನ ಎಷ್ಟು ;

(ಆ) ಬೀದರ್ ಶ್ರೀ ನರಸಿಂಹ ಝರಣಾ ದೇವಸ್ಥಾನಕ್ಕೆ ಭಕ್ತಾಧಿಗಳಿಗಾಗಿ ಸದ್ಯ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ;

(ಇ) ಬೀದರ್ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಗೆ ಬರುವ ದೇವಸ್ಥಾನಗಳಲ್ಲಿ ಎಲ್ಲಿಯೂ ಮೂಲ ಸೌಲಭ್ಯಗಳಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಸ್ತೆ ಬದಿಯಲ್ಲಿ ನೆಡುವ ಗಿಡಗಳ ಸಂರಕ್ಷಣೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೩ (೩೭೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದ ಹೆದ್ದಾರಿ ಹಾಗೂ ಪ್ರಮುಖ ರಸ್ತೆಗಳ ಬದಿಯಲ್ಲಿ ನೆಡುವ ಸಾಲು ಗಿಡ/ ಮರಗಳಿಗೆ ಸರ್ಕಾರ ವೆಚ್ಚ ಮಾಡಿರುವ ಮೊತ್ತವೆಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಈ ರೀತಿ ನೆಡುವ ಸಾಲು ಗಿಡಗಳಲ್ಲಿ ಶೇ ೭೦% ರಿಂದ ೮೦% ರಷ್ಟು ಗಿಡಗಳು ಸಂರಕ್ಷಣೆ ಇಲ್ಲದೆ ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪರಿಸರ ಸಂರಕ್ಷಣೆಗಾಗಿ ಸರ್ಕಾರ ಬಿಡುಗಡೆ ಮಾಡುತ್ತಿರುವ ಅನುದಾನ ಗಿಡ/ಮರಗಳ ಸಂರಕ್ಷಣೆಯಲ್ಲಿ ಅರಣ್ಯ ಇಲಾಖೆಯ ಬೇಜವಾಬ್ದಾರಿಯಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದನ್ನು ಸರ್ಕಾರ ಮನಗೊಂಡಿದೆಯೇ ;

(ಈ) ಹಾಗಿದ್ದಲ್ಲಿ, ರಸ್ತೆ ಬದಿಯಲ್ಲಿ ನೆಡುವ ಗಿಡ/ಮರಗಳ ಸಂರಕ್ಷಣೆ ಮಾಡಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ ;

(ಉ) ನಗರ ಪ್ರದೇಶಗಳಲ್ಲಿ ಮನೆಗೊಂದು ಮರ ಎಂಬ ಯೋಜನೆಯನ್ನು ಕಟ್ಟುನಿಟ್ಟಾಗಿ ಪಾಲಿಸಲು ಸರ್ಕಾರ ಆದೇಶ ಹೊರಡಿಸುವುದೇ ? (ವಿವರ ನೀಡುವುದು)

## ಯುವ ಸಬಲೀಕರಣದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪ (೩೭೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಇದರಲ್ಲಿ ವೆಚ್ಚ ಮಾಡಿರುವ ಹಣವೆಷ್ಟು ; ಯಾವ ಯಾವ ಕಾರ್ಯಕ್ರಮ ಕ್ರೀಡೆಗಳಿಗೆ ವೆಚ್ಚ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಜರುಗಿಸುವುದೇ?

## ಕಟ್ಟಡ ಕಾರ್ಮಿಕರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೫ (೩೮೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ನೋಂದಾಯಿತ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು;

(ಆ) ಕಟ್ಟಡ ಕಾರ್ಮಿಕರ ಕ್ಷೇಮಾಭಿವೃದ್ಧಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು ;

(ಇ) ಈ ಸೌಲಭ್ಯಗಳ ಮಾಹಿತಿ ಇಲ್ಲದೆ ಅನೇಕ ಕಾರ್ಮಿಕರು ಇದರಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಕಟ್ಟಡ ಕಾರ್ಮಿಕರಿಗೆ ಜಾಗೃತಿ ಮೂಡಿಸಲು ಸರ್ಕಾರದ ಸೌಲಭ್ಯಗಳು ಕಾರ್ಮಿಕರಿಗೆ ತಲುಪುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಸಣ್ಣ ನೀರಾವರಿ ಕೆರೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೬ (೩೮೧) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸಣ್ಣ ನೀರಾವರಿ ಕೆರೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಅತಿಕ್ರಮಣವಾಗಿರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಕೆರೆಗಳ ಅತಿಕ್ರಮಣವನ್ನು ತೆರವು ಮಾಡಿ ಅವುಗಳ ಗಡಿಯನ್ನು ಗುರುತಿಸಿ ಹೂಳು ತೆಗೆದು ಅವುಗಳಲ್ಲಿ ನೀರು ನಿಲ್ಲುವಂತೆ ಅಂತರ್ಜಲ ಪ್ರಮಾಣ ಹೆಚ್ಚಾಗುವಂತೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಸಣ್ಣ ನೀರಾವರಿ ಕೆರೆಗಳ ಅತಿಕ್ರಮಣವನ್ನು ತಡೆಯಲು ಹಾಗೂ ಅಳಿವಿನತ್ತ ಸಾಗುತ್ತಿರುವ ಕೆರೆಗಳನ್ನು ಸಂರಕ್ಷಿಸಲು ಸರ್ಕಾರ ಯಾವ ರೀತಿಯ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವುದು ? (ವಿವರ ನೀಡುವುದು)

## ತಿರುಮಲ ಭವನ ಸಿಬ್ಬಂದಿ ವಿವರದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭ (೩೮೨) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಿರುಮಲ ತಿರುಪತಿಯ ಕರ್ನಾಟಕ ಭವನದಲ್ಲಿರುವ ಒಟ್ಟು ಖಾಯಂ ಸಿಬ್ಬಂದಿಯ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು) ಸದರಿ ಸಿಬ್ಬಂದಿ ಹಾಗೂ ಅಧಿಕಾರಿಗಳು ಎಷ್ಟು ಕಾಲಾವಧಿಯಿಂದ ಆ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ; ಇವರುಗಳಲ್ಲಿ ಬೇರೆ ಇಲಾಖೆಗಳಿಂದ ವಲಸೆ ಬಂದಿರುವವರ ಸಂಖ್ಯೆ ಎಷ್ಟು; (ಅವರುಗಳ ವಿವರ ನೀಡುವುದು)

(ಆ) ಸದರಿ ಭವನದಲ್ಲಿ ಕಾರ್ಯನಿರ್ವಹಿಸುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು; ಇವರುಗಳಿಗೆ ನೀಡುತ್ತಿರುವ ವೇತನ ಪ್ರಮಾಣವೆಷ್ಟು;

(ಇ) ತಿರುಮಲದ ಕರ್ನಾಟಕ ಭವನದಲ್ಲಿ ಕನ್ನಡಿಗರಿಗೆ ಆದ್ಯತೆ ನೀಡದಿರುವ ಬಗ್ಗೆ ಅಲ್ಲಿನ ಸಿಬ್ಬಂದಿಯ ಮೇಲೆ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ?

## ರಾಮನಗರ ಜಿಲ್ಲೆಯಲ್ಲಿ ಅಂತರ್ಜಲ ಕುಸಿದಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೯೮ (೧೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯ ಯಾವ ಯಾವ ಅರಣ್ಯ ಪ್ರದೇಶಗಳಲ್ಲಿ ಚಿಕ್ಕಮಣ್ಣುಗುಡ್ಡೆ ಮತ್ತು ದೊಡ್ಡಮಣ್ಣುಗುಡ್ಡೆ ಅರಣ್ಯ ಪ್ರದೇಶಗಳಲ್ಲಿ ನೀಲಗಿರಿ ಮರಗಳನ್ನು ಬೆಳೆಸಿರುವುದರಿಂದ ಅರಣ್ಯಕ್ಕೆ ಸಮೀಪದಲ್ಲಿರುವ ಗ್ರಾಮಗಳಲ್ಲಿ ಅಂತರ್ಜಲ ಮಟ್ಟ ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಅರಣ್ಯ ಪ್ರದೇಶಗಳಲ್ಲಿ ನೀಲಗಿರಿಯಿಂದ ಅಂತರ್ಜಲ ಮಟ್ಟ ಕುಸಿತಗೊಂಡು ಕುಡಿಯುವ ನೀರಿಗೆ ತೊಂದರೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಅರಣ್ಯ ಪ್ರದೇಶಗಳಲ್ಲಿರುವ ನೀಲಗಿರಿ ಮರಗಳನ್ನು ಸಂಪೂರ್ಣವಾಗಿ ಬುಡಸಮೇತ ತೆಗೆದುಹಾಕಿ ನೀಲಗಿರಿಗೆ ಬದಲಾಗಿ ಬೇವು, ಹೊಂಗೆ, ಹಲಸು, ತೇಗ ಮತ್ತು ಸರ್ವೆ ಮರಗಳನ್ನು ಬೆಳೆಸಲು ಅರಣ್ಯ ಇಲಾಖೆಯು ಕ್ರಮ ಕೈಗೊಳ್ಳಲಾಗುವುದೇ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳುವುದು? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿ ನೀಲಗಿರಿ ಗಿಡಗಳನ್ನು ಬೆಳೆಸಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೯(೧೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ನೀಲಗಿರಿ ಗಿಡಗಳನ್ನು ಯಾವ, ಯಾವ ಪ್ರದೇಶಗಳಲ್ಲಿ ಬೆಳೆಸಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆಯ ಯಾವ ಯಾವ ಅರಣ್ಯ ಪ್ರದೇಶಗಳಲ್ಲಿ ನೀಲಗಿರಿ ಮರಗಳನ್ನು ಬೆಳೆಸಲು ಅರಣ್ಯ ಇಲಾಖೆಯು ಖಾಸಗಿ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಂಡಿದೆ; (ವಿವರ ನೀಡುವುದು)

(ಇ) ಈ ರೀತಿ ಒಪ್ಪಂದ ಮಾಡಿಕೊಳ್ಳುವಾಗ ಅನುಸರಿಸಲಾಗಿರುವ ಮಾನದಂಡಗಳೇನು? (ಈ ಒಪ್ಪಂದಗಳ ದೃಢೀಕೃತ ಪ್ರತಿಗಳ ಸಂಪೂರ್ಣ ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

## ರಾಮನಗರ ಜಿಲ್ಲೆಯಲ್ಲಿ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ನೀಡಿರುವ ನಿರಕ್ಷೇಪಣದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೦ (೧೨೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಯಾವ, ಯಾವ ಕೈಗಾರಿಕೆಗಳಿಗೆ ನಿರಕ್ಷೇಪಣಾ (ಎನ್.ಓ.ಸಿ) ಪತ್ರಗಳನ್ನು ನೀಡಲಾಗಿದೆ; ಅಂತಹ ಕೈಗಾರಿಕೆಗಳ ಹೆಸರು ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು;

(ಆ) ನಿರಕ್ಷೇಪಣಾ ಪತ್ರಗಳನ್ನು ನೀಡುವಾಗ ಇಲಾಖೆಯು ಅನುಸರಿಸಿರುವ ಮಾನದಂಡಗಳ ಸಂಪೂರ್ಣ ಮಾಹಿತಿ ನೀಡುವುದು;

(ಇ) ರಾಮನಗರ ಜಿಲ್ಲೆಯಲ್ಲಿ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಅನುಮತಿ ಪಡೆದ ಕೈಗಾರಿಕೆಗಳು ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿರುವ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳ ಸಂಪೂರ್ಣ ಮಾಹಿತಿಯನ್ನು ನೀಡುವುದು ?

## ರಾಮನಗರ ಮತ್ತು ಚಾಮರಾಜನಗರ ಅರಣ್ಯ ಇಲಾಖೆಗೆ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೦೧ (೩೦೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಅರಣ್ಯ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; (ವರ್ಷವಾರು, ಲೆಕ್ಕ ಶೀರ್ಷಿಕೆಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು; (ವರ್ಷವಾರು, ಯೋಜನೆವಾರು ಇತ್ತೀಚಿನ ಪ್ರಗತಿಯ ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ನಿಗಧಿಪಡಿಸಿ ಬಿಡುಗಡೆ ಮಾಡಿ ಖರ್ಚು ಮಾಡಲಾದ ಮೊತ್ತ ಎಷ್ಟು; ಖರ್ಚಾಗದೆ ಉಳಿದ ಮೊತ್ತ ಎಷ್ಟು; ಖರ್ಚಾಗದಿರಲು ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಪ್ರದೇಶಗಳಲ್ಲಿ ಜವಳಿ ಉದ್ಯಮದ ಅಭಿವೃದ್ಧಿ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨ (೧೬೨) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್- ಕರ್ನಾಟಕ ಪ್ರದೇಶಗಳಲ್ಲಿ ಕೈಮಗ್ಗ ಗುಡಿ ಕೈಗಾರಿಕೆ ಮತ್ತು ಪವರ್ ಲೂಮ್ ವಸ್ತ್ರೋದ್ಯಮದ ಪ್ರಸ್ತುತ ಸ್ಥಿತಿಗತಿಗಳು ಹಾಗೂ ಅವುಗಳ ಅಭಿವೃದ್ಧಿಗಾಗಿ ಜವಳಿ ಇಲಾಖೆಯವರು ಅನುಷ್ಠಾನಗೊಳಿಸುತ್ತಿರುವ ಯೋಜನಾ ಸೌಲಭ್ಯಗಳು ಯಾವುವು;

(ಆ) ಹೈದರಾಬಾದ್- ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿರುವ ಕೈಮಗ್ಗ ಮತ್ತ ವಿದ್ಯುತ್ ಮಗ್ಗಗಳ ಸಂಖ್ಯೆ ಹಾಗೂ ವೃತ್ತಿ ನಿರತರ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಯೋಜನೆಗಳ ಮೂಲಕ ಎಷ್ಟು ಜನ ಫಲಾನುಭವಿಗಳಿಗೆ ಯೋಜನಾ ಸೌಲಭ್ಯವನ್ನು ಒದಗಿಸಿಕೊಡಲಾಗಿದೆ ; ಹೈದ್ರಾಬಾದ್- ಕರ್ನಾಟಕ ಪ್ರದೇಶಗಳಲ್ಲಿ ಜವಳಿ ಇಲಾಖೆಯವರಿಗೆ ಸರಕಾರ ನೀಡಿರುವ ಅನುದಾನ ಮತ್ತು ಅದರ ಯೋಜನಾ ನಿರ್ವಹಣೆ ಕುರಿತಾದ ವಿವರಗಳೇನು?

## ಹೈದರಾಬಾದ್-ಕರ್ನಾಟಕ ಪ್ರದೇಶಗಳಲ್ಲಿ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೩ (೧೬೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೈದರಾಬಾದ್- ಕರ್ನಾಟಕ ಪ್ರದೇಶಗಳಲ್ಲಿ ಒಳನಾಡು ಮೀನುಗಾರಿಕೆಗೆ ಪ್ರೋತ್ಸಾಹಿಸುವ ದಿಶೆಯಲ್ಲಿ ಇಲಾಖೆಯವರು ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ವಿವರಗಳೇನು;

(ಆ) ಪಾರಂಪರಿಕವಾಗಿ ಮೀನುಗಾರಿಕೆ ಮಾಡಿಕೊಂಡು ಬಂದಿರುವ ಮೀನುಗಾರರಿಗೆ ಒದಗಿಸಿಕೊಟ್ಟಿರುವ ಯೋಜನಾ ಸೌಲಭ್ಯಗಳು ಯಾವುವು; ಎಷ್ಟು ಜನ ಮೀನುಗಾರರಿಗೆ ವಸತಿ ಮತ್ತಿತರ ಸೌಲಭ್ಯಗಳನ್ನು ಕಳೆದ ಮೂರು ವರ್ಷಗಳಲ್ಲಿ ಒದಗಿಸಿಕೊಡಲಾಗಿದೆ;

(ಇ) ಹೈದರಾಬಾದ್– ಕರ್ನಾಟಕ ಪ್ರದೇಶದ ಜಿಲ್ಲೆಗಳಿಗೆ ಇಲಾಖೆಯು ಒದಗಿಸಿಕೊಟ್ಟಿರುವ ರಾಜ್ಯ ಮತ್ತು ಕೇಂದ್ರ ಪುರಸ್ಕೃತ ಯೋಜನಾನುದಾನಗಳ ಎರಡು ವರ್ಷಗಳ ವಿವರಗಳೇನು ?

## ಬಳ್ಳಾರಿ ಜಿಲ್ಲಾ ವ್ಯಾಪ್ತಿಯಲ್ಲಿ ಅರಣ್ಯಾಭಿವೃದ್ಧಿ ಕುರಿತಾದ ಯೋಜನೆಗಳ ಅನುಷ್ಠಾನ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೪ (೧೬೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲಾ ವ್ಯಾಪ್ತಿಯಲ್ಲಿ ಅರಣ್ಯಾಭಿವೃದ್ಧಿ ಕುರಿತು ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳೇನು ;

(ಆ) ಬಳ್ಳಾರಿ ಜಿಲ್ಲೆಯ ಪ್ರಾಕೃತಿಕ ಪರಿಸರಕ್ಕೆ ಅನುಗುಣವಾಗಿ ಅರಣ್ಯ ಸಂಪತ್ತನ್ನು ಹೆಚ್ಚಿಸುವ ಮತ್ತು ಇರುವ ಅರಣ್ಯ ಸಂಪತ್ತನ್ನು ರಕ್ಷಿಸುವ ಕುರಿತಾದ ಕಾರ್ಯಕ್ರಮಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಈ ಕುರಿತಾಗಿ ಜಾರಿಗೊಳಿಸಿದ ಯೋಜನೆಗಳ ವಿವರಗಳೇನು ;

(ಇ) ಜಿಲ್ಲಾ ವ್ಯಾಪ್ತಿಯಲ್ಲಿರುವ ಅರಣ್ಯ ಇಲಾಖಾ ಕಛೇರಿಗಳು ಹಾಗೂ ಅವುಗಳು ಹೊಂದಿರುವ ಮೂಲಸೌಲಭ್ಯಗಳು ಹಾಗೂ ಸಿಬ್ಬಂದಿ ಕೊರತೆ ಇತ್ಯಾದಿಗಳನ್ನು ಪರಿಪೂರ್ಣವಾಗಿ ಹೊಂದುವಲ್ಲಿ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಕಲಬುರಗಿ ಕಂದಾಯ ವಿಭಾಗದ ಆರು ಜಿಲ್ಲೆಗಳಲ್ಲಿ ಗಿಡ ಬೆಳೆಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೫ (೧೬೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಕಂದಾಯ ವಿಭಾಗದ ಆರು ಜಿಲ್ಲೆಗಳಲ್ಲಿ ಅರಣ್ಯ ಇಲಾಖೆ ಕೈಗೊಂಡಿರುವ ಕಾರ್ಯಕ್ರಮಗಳೇನು ; (ಸಮಗ್ರ ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಎಷ್ಟು ಗಿಡಗಳನ್ನು ಬೆಳೆಸಲು ಗುರಿ ಹಾಕಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಒಂದೆರಡು ವರ್ಷಗಳಲ್ಲಿ ಈ ಎರಡೂ ಜಿಲ್ಲೆಗಳಲ್ಲಿ ಹಸರೀಕರಣ ಹೆಚ್ಚಾಗಿದೆಯೇ ? (ಸಮಗ್ರ ಮಾಹಿತಿ ನೀಡುವುದು)

## ಹೊಸ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೬ (೧೬೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದ ಕೇಂದ್ರ ಸ್ಥಾನವಾಗಿರುವ ಕಲಬುರಗಿಯಲ್ಲಿ ಕ್ರಿಕೆಟ್‌ಗಾಗಿಯೇ ಪ್ರತ್ಯೇಕ ಕ್ರೀಡಾಂಗಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಹೊಸ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಇ) ಹೊಸ ಕ್ರೀಡಾಂಗಣ ನಿರ್ಮಾಣಕ್ಕಾಗಿ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಬರಪೀಡಿತ ತಾಲ್ಲೂಕುಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೭ (೩೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬರಪೀಡಿತ ತಾಲ್ಲೂಕುಗಳೆಂದು ಇದುವರೆವಿಗೂ ಎಷ್ಟು ತಾಲ್ಲೂಕುಗಳನ್ನು ಘೋಷಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಬರ ಪೀಡಿತ ತಾಲ್ಲೂಕುಗಳಲ್ಲಿ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಬರಪೀಡಿತ ತಾಲ್ಲೂಕುಗಳಿಗೆ ಸರ್ಕಾರ ಪರಿಹಾರ ಕ್ರಮಗಳಿಗಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಕೈಗೊಳ್ಳಲಾಗಿರುವ ಪರಿಹಾರ ಕ್ರಮಗಳೇನು ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಮುಜರಾಯಿ ದೇವಾಲಯಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೮ (೩೧೪) ಮಾನ್ಯ ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಸದರಿ ದೇವಾಲಯಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು ;

(ಇ) ಪ್ರತಿ ವರ್ಷ ಈ ದೇವಾಲಯಗಳ ಅಭಿವೃದ್ಧಿ ಜೀರ್ಣೋದ್ಧಾರಕ್ಕಾಗಿ ಸರ್ಕಾರವು ವೆಚ್ಚ ಮಾಡುತ್ತಿರುವ ಮೊತ್ತ ಎಷ್ಟು ; (ಜಿಲ್ಲಾವಾರು ಹಾಗೂ ದೇವಸ್ಥಾನಗಳವಾರು ವಿವರ ನೀಡುವುದು)

(ಈ) ಈ ದೇವಾಲಯಗಳ ಸಮುಚ್ಚಯಗಳಲ್ಲಿ ಮೂಲಭೂತ ಸವಲತ್ತುಗಳನ್ನು ಕಲ್ಪಿಸಲಾಗಿದೆಯೇ ;

(ಉ) ಹಾಗಿದ್ದಲ್ಲಿ, ಈ ದೇವಾಲಯಗಳ ಸಮುಚ್ಚಯದಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಸ್ವಚ್ಛತೆಯನ್ನು ಕಾಯ್ದುಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬೆಳಗಾವಿ ಜಿಲ್ಲೆಯಲ್ಲಿಯ ಕೆರೆಗಳಿಗೆ ನೀರು ತುಂಬಿಸುವ ಕುರಿತು

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೯ (೩೩೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಕೆರೆಗಳು ಎಷ್ಟು ;

(ಆ) ಸದರಿ ಕೆರೆಗಳಿಗೆ ಕುಡಿಯುವ ನೀರು ತುಂಬಿಸಲು ಸರ್ಕಾರ ನಿಗಧಿಪಡಿಸಿದ ಅನುದಾನ ಎಷ್ಟು ; ಈಗ ಪ್ರಗತಿ ಕೆರೆಗಳಿಗೆ ನಿಗಧಿಪಡಿಸಿದ ಅನುದಾನವೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಇ) ಎಷ್ಟು ಕೆರೆಗಳಿಗೆ ಹಾಗೂ ಎಷ್ಟು ಅವಧಿಯೊಳಗೆ ನೀರು ತುಂಬಿರುವ ಯೋಜನೆ ಹಾಕಿಕೊಳ್ಳಲಾಗಿದೆ ; ಎಷ್ಟು ಅವಧಿಯೊಳಗೆ ಸದರಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಹಾಕಿಕೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಕೆರೆಗಳ ನೀರಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೩೧೦ (೩೮೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ನೀರಾವರಿ ಇಲಾಖೆ ವತಿಯಿಂದ ಕಾಲುವೆಗಳ ಮುಖಾಂತರ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಇಂತಹ ಕೆರೆಗಳಲ್ಲಿ ಊಳನ್ನು ತೆಗೆಸಲಾಗಿದೆಯೇ ; ತೆಗೆಸದಿದ್ದಲ್ಲಿ ಸೂಕ್ತ ಕಾರಣ ತಿಳಿಸುವುದು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0194/700 ಪ್ರತಿಗಳು/14–11–2016